24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ


# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 89 | ನವದೆಹಲಿ | ಬೆಲೆ ₹10 | ಸೆಪ್ಟಂಬರ್ 24 2026 ಗುರುವಾರ




## ನಿತ್ಯ ಪಂಚಾಂಗ 24.09.2026 ಗುರುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ ಶ್ರಾವಣ-ಭಾದ್ರಪದ ಮಾಸ

ಭಾದ್ರಪದ ಶುದ್ಧ, ತ್ರಯೋದಶಿ, ಧನಿಷ್ಠ ನಕ್ಷತ್ರ, ಪ್ರದೋಷ, ನಾರಾಯಣಗುರು ಪುಣ್ಯದಿನ, ಹುಲಿಕಲ್ಲು ಉತ್ಸವ, ಸೌಂದತ್ತಿ ದೀಕ್ಷಿತರ ಪುಣ್ಯದಿನ, ಹಾನಗಲ್ಲ ಕುಮಾರಸ್ವಾಮಿ ಜಯಂತಿ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |




ಕೇಂದ್ರ ಸಚಿವ ವಿ. ಸೋಮಣ್ಣ ಬುಧವಾರ ನವದೆಹಲಿಯ ಭಾರತ್ ಮಂಟಪದಲ್ಲಿ ನಡೆದ 9ನೇ ಇಂಡಿಯಾ ಇಂಟರ್‌ನ್ಯಾಷನಲ್ ವಾಟರ್ ವೀಕ್ ಉದ್ಘಾಟನಾ ಸಮಾರಂಭದಲ್ಲಿ, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮತ್ತು ಕೇಂದ್ರ ಸಚಿವ ಸಿ.ಆರ್. ಪಾಟೀಲ್ ಅವರೊಂದಿಗೆ ಪಾಲ್ಗೊಂಡರು.

# ಕೆಪಿಎಸ್‌ಸಿ ಚೆನ್ನಾಗಿಯೇ ಇದೆ, ಕೆಟ್ಟವರು ಕೂತಿದ್ದಾರಷ್ಟೇ: ಎಚ್‌ಡಿಕೆ ತಿರುಗೇಟು



**ಬೆಂಗಳೂರು, ಸೆ.23:** ಭ್ರಷ್ಟಾಚಾರದ ಆರೋಪ ಹೊತ್ತಿರುವ ಕೆಪಿಎಸ್‌ಸಿಯನ್ನು ಮುಚ್ಚಲು ಕಾನೂನು ತಜ್ಞರ ಜತೆ ಚರ್ಚೆ ನಡೆಸುತ್ತಿದ್ದೇವೆ ಎಂದು ಹೇಳಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹರಿಹಾಯ್ದಿದ್ದು, ಮುಖ್ಯಮಂತ್ರಿಗೆ ಶಾಸನದ ಗಂಧಗಾಳಿಯೇ ಗೊತ್ತಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.

ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಕರ್ನಾಟಕ ಲೋಕಸೇವಾ ಆಯೋಗವನ್ನು ಶಾಸನಬದ್ಧವಾಗಿ ಮುಚ್ಚುತ್ತೇವೆ ಎನ್ನುವ ಮುಖ್ಯಮಂತ್ರಿ ಹೇಳಿಕೆ ಕೇವಲ ಹತಾಶೆಯಿಂದಷ್ಟೇ ಕೂಡಿಲ್ಲ, ಅದು ಬುದ್ಧಿಗೇಡಿತನ, ಹೊಣೆಗೇಡಿತನ ಮತ್ತು ಅಜ್ಞಾನದ ಪರಮಾವಧಿ. ಇವರ ವರಸೆ ಹೇಗಿದೆ ಎಂದರೆ 'ಎತ್ತಿಗೆ ಜ್ವರ ಬಂದರೆ ಎಮ್ಮೆಗೆ ಬರೆ ಹಾಕಿದಂತೆ', ನೆಗಡಿ ಬಂದರೆ ಮೂಗನ್ನೇ ಕತ್ತರಿಸಿದಂತೆ ಎಂದು ಲೇವಡಿ ಮಾಡಿದ್ದಾರೆ. ಕೆಪಿಎಸ್‌ಸಿ ಸಂಸ್ಥೆ ಚೆನ್ನಾಗಿಯೇ ಇದೆ, ಕೆಟ್ಟ ಜನ ಬಂದು ಕೂತಿದ್ದಾರಷ್ಟೇ. ಬೇಲಿಯೇ ಹೊಲ ಮೇಯುತ್ತಿದೆ. ಅಲ್ಲಿಗೆ ಖದೀಮರನ್ನು ನೇಮಕ ಮಾಡಿದ್ದು ಯಾರು, ವಸೂಲಿಗೆ ಅಂಗಡಿ ತೆರೆಯಲು ಅವಕಾಶ ಕೊಟ್ಟಿದ್ದು ಯಾರು? ವಿಧಾನಸೌಧದ 3ನೇ ಮಹಡಿಯಲ್ಲಿ ಕೂತವರೇ ಎಸಗಿದ ಪಾಪವಲ್ಲವೇ ಇದು, ಆ ಲೆಕ್ಕಕ್ಕೆ ಬಂದರೆ ವಿಧಾನಸೌಧವನ್ನೇ ಮುಚ್ಚಬೇಕು. ನಿಮ್ಮ ಸಾರಥ್ಯದಲ್ಲಿ ಅದೂ ನಡೆದುಹೋಗಲಿ ಎಂದು ಟಾಂಗ್ ನೀಡಿದ್ದಾರೆ. ಬೇಜವಾಬ್ದಾರಿಯಿಂದ ಚಪಲಕ್ಕೆ ನಾಲಿಗೆ ಜಾರುವ ಮೊದಲು ಕೆಪಿಎಸ್‌ಸಿ ಎಂದರೆ ಏನು. ಅದರ ಸಂರಚನೆ, ಸ್ವರೂಪ ಹೇಗಿರುತ್ತದೆ. ಸಾಂವಿಧಾನಿಕವಾಗಿ ಅದಕ್ಕಿರುವ ರಕ್ಷಣೆ ಏನು, ಆ ಸಂಸ್ಥೆ ನಡೆದುಬಂದ ಹಾದಿ, ಹೆಗ್ಗಳಿಕೆ ಬಗ್ಗೆ ತಿಳಿದುಕೊಳ್ಳಿ. ಹೊಲಕ್ಕೆ ಕಳೆ ಬಿದ್ದರೆ ಅದನ್ನು ಕಿತ್ತೆಸೆಯಬೇಕು, ಹೊಲಕ್ಕೇ ವಿಷವುಣಿಸುವ ಕೆಲಸ ಆಗಬಾರದು ಎಂದು ಕಿವಿಮಾತು ಹೇಳಿದ್ದಾರೆ.

# ಫಾಲ್ಕೆ ಪ್ರಶಸ್ತಿ ಪುರಸ್ಕೃತ ಅನಂತ್‌ನಾಗ್‌ಗೆ ವಿಧಾನಮಂಡಲದಲ್ಲಿ ಅಭಿನಂದನೆ





ಬೆಂಗಳೂರು, ಸೆ. 23– ಭಾರತೀಯ ಚಲನಚಿತ್ರ ರಂಗದ ಅತ್ಯುನ್ನತ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ ಪುರಸ್ಕೃತರಾಗಿರುವ ನಟ ಅನಂತ್‌ನಾಗ್ ರವರನ್ನು ವಿಧಾನಮಂಡಲ ದಲಿಂದು ಅಭಿನಂದಿಸಲಾಯಿತು.

ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲ್ ಅವರು ನಟ ಅನಂತ್‌ನಾಗ್ ಅವರನ್ನು ಅಭಿನಂದಿಸುವ ನಿರ್ಣಯವನ್ನು ಮಂಡಿಸಿದರು.

1948ರಂದು ಬಟ್ಕಳದ ಶಿರಾಲಿಯಲ್ಲಿ ಜನಿಸಿದ ಅನಂತ್‌ನಾಗ್ ಅವರು, ವಾಯುಸೇನೆ ಸೇರುವ ಕನಸು ಹೊತ್ತಿದ್ದರು. ನಂತರ ಅವರು ರಂಗಭೂಮಿಯತ್ತ ಮುಖ ಮಾಡಿ 1973 ರಲ್ಲಿ 'ಸಂಕಲ್ಪ' ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದರು. ಚಿತ್ರರಂಗಕ್ಕೆ ಕಾಲಿಟ್ಟ ಆರಂಭದಲ್ಲಿಯೇ ಹೊಸ ಅಲೆಯ ನಾಯಕ ಎಂದು ಗುರುತಿಸಿಕೊಂಡು ಕೆಲವೇ ವರ್ಷಗಳಲ್ಲಿ ಸ್ಟಾರ್ ನಟರಾಗಿ ಹೊರ ಹೊಮ್ಮಿದರು. ಅವರ ಮೊದಲ ಹಿಂದಿ ಸಿನಿಮಾ ಅಂಕುರ್ ಮೂರು ರಾಷ್ಟ್ರ ಪ್ರಸಸ್ತಿ ಗಳಿಸಿರುವುದು ಸ್ಮರಣೀಯ ಎಂದರು. ನಟ ಅನಂತ್‌ನಾಗ್ ಅವರು ರಂಗಭೂಮಿ, ಕಿರುತೆರೆ, ಚಲನಚಿತ್ರಕ್ಕೆ ಸೀಮಿತರಾಗದೆ 1989 ರಿಂದ 94 ರ ಅವಧಿಯಲ್ಲಿ ವಿಧಾನಪರಿಷತ್‌ನ ನಾಮ ನಿರ್ದೇಶಿತ ಸದಸ್ಯರಾಗಿ ಸೇವೆ ಸಲ್ಲಿಸಿ ನಂತರ 1994ರಲ್ಲಿ ಬೆಂಗಳೂರಿನ ಮಲ್ಲೇಶ್ವರ ವಿಧಾನಸಭಾ ವಿಧಾನಸಭೆಗೆ ಆಯ್ಕೆಯಾಗಿ ಬೆಂಗಳೂರು ನಗರಾಭಿವೃದ್ಧಿ ರಾಜ್ಯ ಸಚಿವರಾಗಿ ಸೇವೆ ಸಲ್ಲಿಸಿದ್ದರು ಎಂದರು.

ನಟ ಅನಂತ್‌ನಾಗ್ ಅವರಿಗೆ ಐದು ಬಾರಿ ರಾಜ್ಯ ಚಲನಚಿತ್ರ ಪ್ರಶಸ್ತಿ ಬಂದಿದೆ. ಪದ್ಮಭೂಷಣ ಸೇರಿದಂತೆ ಹಲವಾರು ಪ್ರಶಸ್ತಿಗೆ ಭಾಜನರಾಗಿದ್ದಾರೆ. ಈ ಸದನ ಅವರನ್ನು ಹೃತ್ಪೂರ್ವಕವಾಗಿ ಅಭಿನಂದಿಸುತ್ತದೆ ಎಂದು ಹೇಳಿದರು

ಸಭಾಧ್ಯಕ್ಷರ ಅಭಿನಂದನಾ ನಿರ್ಣಯವನ್ನು ಬೆಂಬಲಿಸಿ ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್, ಪ್ರತಿಪಕ್ಷ ನಾಯಕ ಆರ್. ಅಶೋಕ್, ಸದಸ್ಯರಾದ ಮುನಿರತ್ನ, ಸುರೇಶ್‌ಕುಮಾರ್, ಶಿವರಾಮ್ ಹೆಬ್ಬಾರ್, ಉಪಸಭಾಪತಿ ಮಂಕಾಳು ವೈದ್ಯ ಇವರು ಮಾತನಾಡಿ, ನಟ ಅನಂತ್‌ನಾಗ್ ಅವರ ನಟನಾ ಕೌಶಲ್ಯ, ನಡೆ, ನುಡಿ ಎಲ್ಲವನ್ನು ಶ್ಲಾಘಿಸಿ, ಅಭಿನಂದನಾ ನಿರ್ಣಯಕ್ಕೆ ಬೆಂಬಲ ವ್ಯಕ್ತಪಡಿಸಿದರು.

ಮೇಲ್ಮನೆಯಲ್ಲಿ ಕಲಾಪ ಆರಂಭವಾಗುತ್ತಿದ್ದಂತೆ ಸಭಾಪತಿ ಸಲೀಂ ಅಹ್ಮದ್, ನಟ ಅನಂತ್ ನಾಗ್ ಅವರು ಐದು ದಶಕಗಳಿಗೂ ಹೆಚ್ಚುಕಾಲ ಚಿತ್ರರಂಗದಲ್ಲಿ ನಟ, ನಿರ್ಮಾಪಕರಾಗಿ, ಶಾಸಕ ಮತ್ತು ಸಚಿವರಾಗಿ ನಾಡಿಗೆ ಅಪಾರ ಸೇವೆ ಸಲ್ಲಿಸಿದ್ದಾರೆ. ಸಂಕಲ್ಪ, ಅಂಕೂರ, ಬಯಲುದಾರಿ ಸೇರಿದಂತೆ ಹಲವು ಕಲಾತ್ಮಕ ಚಿತ್ರಗಳಲ್ಲಿ ನಟಿಸಿ, ಚಿತ್ರರಂಗವನ್ನು ಶ್ರೀಮಂತಗೊಳಿಸಿದ್ದಾರೆ. ದಾದಾ ಸಾಹೇಬ್ ಪಾಲ್ಕೆ ಪ್ರಶಸ್ತಿ ಅವರಿಗೆ ಸಂದ ಗೌರವವಾಗಿದೆ. ಇದು ಯುವ ಕಲಾವಿದರಿಗೆ ಸ್ಫೂರ್ತಿದಾಯಕವಾಗಿರಲಿದೆ ಎಂದರು.

# ಶಾಸಕರ ರಾಜೀನಾಮೆ ಪತ್ರ: ವಿಧಾನ ಸಭೆಯಲ್ಲಿ ಗದ್ದಲ, ಕೋಲಾಹಲ

### ನಿಯಮದ ಪ್ರಕಾರ ರಾಜೀನಾಮೆ ನೀಡದ ಕಾರಣ ತ್ಯಾಗಪತ್ರ ತಿರಸ್ಕಾರ

**ಬೆಂಗಳೂರು, ಸೆ.23:** ಶಾಸಕ ಸ್ಥಾನಕ್ಕೆ ಯಶವಂತರಾಯಗೌಡ ಪಾಟೀಲ್ ರಾಜೀನಾಮೆ ನೀಡಿರುವ ವಿಚಾರದಲ್ಲಿ ವಿಧಾನಸಭೆಯಲ್ಲಿ ಪ್ರಸ್ತಾಪವಾಗಿ ಆಡಳಿತ ಮತ್ತು ವಿಪಕ್ಷ ಸದಸ್ಯರ ನಡುವೆ ವಾಕ್ಸಮರವೇ ನಡೆದು ಸದನದಲ್ಲಿ ಗದ್ದಲ, ಕೋಲಾಹಲದ ವಾತಾವರಣ ರೂಪುಗೊಂಡಿತು.

ರಾಜ್ಯದ ಬರ ಪರಿಸ್ಥಿತಿಯ ಬಗ್ಗೆ ಚರ್ಚೆ ನಡೆಯುತ್ತಿದ್ದ ಸಂದರ್ಭದಲ್ಲಿ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು, ವಿಧಾನಸಭೆಯಲ್ಲಿ ಶಾಸಕ ಯಶವಂತರಾಯಗೌಡ ಪಾಟೀಲ್ ರಾಜೀನಾಮೆ ವಿಷಯವನ್ನು ಪ್ರಸ್ತಾಪಿಸಿ, ಅವರು ರಾಜೀನಾಮೆ ನೀಡಿರುವ ಪತ್ರದ ಪ್ರತಿಯನ್ನು ಪ್ರದರ್ಶಿಸಿ, ಕಾಂಗ್ರೆಸ್ ಪಕ್ಷದ ಶಾಸಕರೇ ರಾಜೀನಾಮೆ ಕೊಟ್ಟಿದ್ದಾರೆ. ಈ ಸರ್ಕಾರಕ್ಕೆ ನಾಚಿಕೆ ಆಗಬೇಕು. ಬರ ನಿರ್ವಹಣೆಯಲ್ಲಿ ಈ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಹೇಳಿದಾಗ, ಪ್ರತಿಪಕ್ಷ ಸದಸ್ಯರು ಶೇಮ್.. ಶೇಮ್.. ಎಂದು ಕೂಗಿದರು.ಈ ಹಂತದಲ್ಲಿ ಆಡಳಿತ ಮತ್ತು ವಿಪಕ್ಷ ಸದಸ್ಯರ ನಡುವೆ ದೊಡ್ಡಮಟ್ಟದ ಮಾತಿನ ಚಕಮಕಿ ನಡೆಯಿತು.

ಗದ್ದಲದ ನಡುವೆಯೇ ಮಾತನಾಡಿದ ಬಿಜೆಪಿಯ ಸುನೀಲ್‌ಕುಮಾರ್, ಸದನ ನಡೆಯುತ್ತಿದೆ. ರಾಜೀನಾಮೆ ಬಗ್ಗೆ ಸಭಾಧ್ಯಕ್ಷರು ಸದನಕ್ಕೆ ಮಾಹಿತಿ ಕೊಡಬೇಕು ಎಂದು ಮನವಿ ಮಾಡಿದರು. ಸದನ ನಡೆಯುವಾಗ ರಾಜೀನಾಮೆ ಕೊಟ್ಟಿರುವುದು ಸರ್ಕಾರಕ್ಕೆ ದೊಡ್ಡ ಅಪಮಾನ. ಇದಕ್ಕಿಂತ ದೊಡ್ಡ ಅಪಮಾನ ಇನ್ನೊಂದಿಲ್ಲ ಎಂದರು.

ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಕೇಂದ್ರ ಸರ್ಕಾರದ ಕೆಲವು ಮಾನದಂಡಗಳಿಂದ ಕೆಲವು ತಾಲ್ಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಲು ಆಗುತ್ತಿಲ್ಲ. ನಾವು ಪತ್ರ ಬರೆದಿದ್ದರೂ ಕೇಂದ್ರ ಸರ್ಕಾರ ನಿಯಮಾವಳಿಯಲ್ಲಿ ರಿಯಾಯ್ತಿ ನೀಡುತ್ತಿಲ್ಲ ಎಂದು ಹೇಳಿದರು. ಈ ಹಂತದಲ್ಲಿ ಮಧ್ಯೆ ಪ್ರವೇಶಿಸಿ ಮಾತನಾಡಿದ ಅಶೋಕ್, ಈ ನಿಯಮಾವಳಿಯನ್ನು ಮಾಡಿದ್ದೇ ನಿಮ್ಮ ಯುಪಿಎ ಸರ್ಕಾರ ಎಂದರು. ಈ ಹಂತದಲ್ಲಿ ಮತ್ತೆ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು.

ಆರ್. ಅಶೋಕ್ ಎದ್ದುನಿಂತು ಶಾಸಕರು ರಾಜೀನಾಮೆ ನೀಡಿದ್ದಾರೋ, ಇಲ್ಲವೋ ಅದನ್ನು ಹೇಳಿ ಎಂದು ಸಭಾಧ್ಯಕ್ಷರಲ್ಲಿ ಮನವಿ ಮಾಡಿದರು. ಒಂದು ಕಡೆ ಸರ್ಕಾರ ಪಾಪರ್ ಎಂದು ಹಣಕಾಸು ಇಲಾಖೆ ಹೇಳುತ್ತಿದೆ.

ಇನ್ನೊಂದು ಕಡೆ ಬರ ನಿರ್ವಹಣೆ ಮಾಡುತ್ತಿಲ್ಲ ಎಂದು ದೂರಿದರು. ಪಕ್ಷಗಳ ಒತ್ತಾಯದ ಮೇರೆಗೆ ರಾಜೀನಾಮೆ ಬಗ್ಗೆ ಸ್ಪಷ್ಟನೆ ನೀಡಿದ ಸಭಾಧ್ಯಕ್ಷ ಜಿ. ಎಸ್. ಪಾಟೀಲ್ ಅವರು, ರಾಜೀನಾಮೆ ನಿಯಮಾವಳಿಗಳ ಪ್ರಕಾರ ಇಲ್ಲ ಅದನ್ನು ತಿರಸ್ಕರಿಸಲಾಗಿದೆ ಎಂದು ಹೇಳಿ ಈ ಕುರಿತ ಚರ್ಚೆಗೆ ತೆರೆ ಹೇಳಿದರು.

# ಐಎಎಸ್ ವರ್ಗಾವಣೆ

**ಬೆಂಗಳೂರು, ಸೆ.23:** ರಾಜ್ಯ ಸರ್ಕಾರ ಆಡಳಿತ ಯಂತ್ರಕ್ಕೆ ಇಂದು ಮಹತ್ವದ ಬದಲಾವಣೆ ಮಾಡಿದ್ದು, ಹಲವು ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ.



- ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಯಾಗಿದ್ದ ಡಾ. ಕೆ.ವಿ. ತ್ರಿಲೋಕಚಂದ್ರ ಅವರನ್ನು ಕೃಷಿ ಇಲಾಖೆಯ ಕಾರ್ಯದರ್ಶಿಯಾಗಿ ನೇಮಿಸಲಾಗಿದೆ. ಇದುವರೆಗೆ ಕೃಷಿ ಇಲಾಖೆ ಕಾರ್ಯದರ್ಶಿಯಾಗಿದ್ದ ಕ್ಯಾಪ್ಟನ್ ರಾಜೇಂದ್ರ ಅವರನ್ನು ವರ್ಗಾವಣೆ ಮಾಡಲಾಗಿದ್ದು, ಅವರಿಗೆ ಯಾವುದೇ ಹೊಸ ಹುದ್ದೆ ತೋರಿಸಿಲ್ಲ.
- ಸಮಾಜ ಕಲ್ಯಾಣ ಇಲಾಖೆ ಆಯುಕ್ತರಾಗಿದ್ದ ಡಾ. ಕೆ. ರಾಕೇಶ್ ಕುಮಾರ್ ಅವರನ್ನು ಉಪಮುಖ್ಯಮಂತ್ರಿಗಳ ಕಾರ್ಯದರ್ಶಿಯಾಗಿ ವರ್ಗಾಯಿಸಲಾಗಿದೆ. ಇದರೊಂದಿಗೆ ಸರ್ವೆ, ಸೆಟ್ಲ್‌ಮೆಂಟ್ ಮತ್ತು ಭೂ ದಾಖಲೆಗಳ ಇಲಾಖೆಯ ಆಯುಕ್ತರ ಹೆಚ್ಚುವರಿ ಜವಾಬ್ದಾರಿಯನ್ನೂ ಅವರಿಗೆ ವಹಿಸಲಾಗಿದೆ. ಈ ಹುದ್ದೆಯಲ್ಲಿದ್ದ ಕೆ. ವೆಂಕಟರಾಜಾ ಅವರಿಗೂ ಹೊಸ ಸ್ಥಳ ನಿಯೋಜನೆ ಮಾಡಿಲ್ಲ.
- ಪಂಚಾಯತ್‌ರಾಜ್ ಇಲಾಖೆ ಆಯುಕ್ತರಾಗಿದ್ದ ಡಾ. ಅರುಂಧತಿ ಚಂದ್ರಶೇಖರ್ ಅವರನ್ನು ಖಜಾನೆ ಇಲಾಖೆಯ ಆಯುಕ್ತರನ್ನಾಗಿ ನೇಮಿಸಲಾಗಿದೆ.
- ಎಂಎಸ್‌ಎಂಇ ನಿರ್ದೇಶಕರಾಗಿದ್ದ ವೈ.ಎಸ್. ಪಾಟೀಲ ಅವರನ್ನು ಗ್ರಾಮೀಣಾಭಿವೃದ್ಧಿ ಇಲಾಖೆ ಆಯುಕ್ತರಾಗಿ ವರ್ಗಾಯಿಸಲಾಗಿದ್ದು, ಪಂಚಾಯತ್‌ರಾಜ್ ಆಯುಕ್ತ ಹಾಗೂ ಕರ್ನಾಟಕ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ಕಾರ್ಯನಿರ್ವಾಹಕ ನಿರ್ದೇಶಕರ ಹೆಚ್ಚುವರಿ ಹೊಣೆಯನ್ನೂ ನೀಡಲಾಗಿದೆ.
- ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ (ಹೆಸ್ಕಾಂ) ವ್ಯವಸ್ಥಾಪಕ ನಿರ್ದೇಶಕರಾಗಿದ್ದ ಎಂ.ಎಲ್. ವೈಶಾಲಿ ಅವರನ್ನು ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ (ಎಂಎಸ್‌ಐಎಲ್) ವ್ಯವಸ್ಥಾಪಕ ನಿರ್ದೇಶಕರಾಗಿ ನೇಮಿಸಲಾಗಿದೆ.
- ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಶಶಿಧರ ಕುರೇರಾ ಅವರಿಗೆ ಹಟ್ಟಿ ಚಿನ್ನದ ಗಣಿ ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಹುದ್ದೆಯ ಹೆಚ್ಚುವರಿ ಹೊಣೆ ವಹಿಸಲಾಗಿದೆ.
- ಕೊಡಗು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಸಿಇಓ) ಆನಂದಪ್ರಕಾಶ ಮೀನಾ ಅವರನ್ನು ವಿಜಯಪುರ ಜಿಪಂ ಸಿಇಓ ಆಗಿ ವರ್ಗಾಯಿಸಲಾಗಿದೆ.
- ವಿಜಯಪುರ ಜಿಪಂ ಸಿಇಓ ರಿಷಿ ಆನಂದ್ ಅವರನ್ನು ಶಿವಮೊಗ್ಗ ಜಿಪಂ ಸಿಇಓ ಆಗಿ ನೇಮಿಸಲಾಗಿದೆ.
- ಶಿವಮೊಗ್ಗ ಜಿಪಂ ಸಿಇಓ ಎನ್. ಹೇಮಂತ್ ಅವರನ್ನು ಹುಬ್ಬಳ್ಳಿ ಹೆಸ್ಕಾಂನ ವ್ಯವಸ್ಥಾಪಕ ನಿರ್ದೇಶಕರಾಗಿ ವರ್ಗಾಯಿಸಲಾಗಿದೆ.
- ಕೊಳ್ಳೇಗಾಲ ಉಪವಿಭಾಗಾಧಿಕಾರಿಯಾಗಿದ್ದ ದಿನೇಶ್ ಕುಮಾರ್ ಮೀನಾ ಅವರನ್ನು ಕೊಡಗು ಜಿಪಂನ ನೂತನ ಸಿಇಓ ಆಗಿ ನೇಮಿಸಲಾಗಿದೆ.

# ನಕಲಿ ಸಿಮ್‌ಕಾರ್ಡ್ ಮೂಲಕ ಅಯೋಧ್ಯೆ, ಕೆನಡಾ, ನೇಪಾಳದಿಂದ ಡಿ.ಕೆ.ಶಿವಕುಮಾರ್ ಟ್ರ್ಯಾಪ್‌ಗೆ ಕುಮಾರಸ್ವಾಮಿ ಸಂಚು: ಎಸ್.ಟಿ.ಸೋಮಶೇಖರ್ ಬಾಂಬ್



**ಬೆಂಗಳೂರು, ಸೆ.23:** ನಕಲಿ ಸಿಮ್ ಕಾರ್ಡ್ ತೆಗೆಸಿಕೊಟ್ಟು ಅಯೋಧ್ಯೆ, ಕೆನಡಾ, ನೇಪಾಳಕ್ಕೆ ಬೆಂಬಲಿಗರನ್ನು ಕಳುಹಿಸಿ ಮುಖ್ಯ ಮಂತ್ರಿ ಶಿವಕುಮಾರ್ ಅವರನ್ನು ಟ್ರ್ಯಾಪ್ ಮಾಡಲು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಸಂಚು ರೂಪಿಸಿದ್ದಾರೆ ಎಂದು ಶಾಸಕ ಎಸ್.ಟಿ. ಸೋಮಶೇಖರ್ ಬಾಂಬ್ ಸಿಡಿಸಿದ್ದಾರೆ.

ಮುಖ್ಯಮಂತ್ರಿ ಕಸ್ತೂರಿ ರಂಗನ್ ವರದಿ ಬಗ್ಗೆ ಆರೇಳು ಜಿಲ್ಲೆಗಳಲ್ಲಿ ಪ್ರವಾಸ ಮಾಡಿ ಅಭಿಪ್ರಾಯ ಸಂಗ್ರಹಿಸಿ, ವಿಶೇಷ ಅಧಿವೇಶನ ನಡೆಸುತ್ತಿದ್ದಾರೆ. ಇದನ್ನು ಕೇಂದ್ರ ಸಚಿವ ಕುಮಾರಸ್ವಾಮಿ ಅವರಿಗೆ ಸಹಿಸಲಾಗುತ್ತಿಲ್ಲ, ಹೀಗಾಗಿ ಮುಖ್ಯಮಂತ್ರಿ ತೇಜೋವಧೆಗೆ ಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು. ವಿಧಾನ ಸೌಧದಲ್ಲಿ ಮಾತನಾಡಿದ ಸೋಮ ಶೇಖರ್, ನಕಲಿ ಸಿಮ್ ಕಾರ್ಡ್ ತೆಗೆದುಕೊಟ್ಟು, ಅಯೋಧ್ಯೆ ಕೆನಡಾ, ನೇಪಾಳಕ್ಕೆ ಕಳುಹಿಸಿ ಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಟ್ರ್ಯಾಪ್ ಮಾಡುತ್ತಿದ್ದಾರೆ. ಅವರಿಗೆ ಪ್ರವಾಸ ವೆಚ್ಚ ಎಲ್ಲವನ್ನು ಕುಮಾರಸ್ವಾಮಿ ಅವರೇ ಭರಿಸುತ್ತಿದ್ದಾರೆ. ಅಮಿತ್ ಶಾ ಸೂಚನೆಯಂತೆ ತಾವು ಕೆಲಸ ಮಾಡುತ್ತಿರುವುದಾಗಿ ಕುಮಾರ ಸ್ವಾಮಿ ಹೇಳಿದ್ದಾರೆ, ಆದರೆ ನಾನು ಮೂರು ವರ್ಷ ಬಿಜೆಪಿಯಲ್ಲಿದ್ದೆ, ಅಮಿತ್ ಶಾ ಅಂತ ಕೆಲಸ ಮಾಡುವುದಿಲ್ಲ ಎಂದರು.

ಕುಮಾರಸ್ವಾಮಿಗೆ ತಾಕತ್ ಇದ್ದರೆ ಬೆಂಗಳೂರಿನಲ್ಲಿದ್ದುಕೊಂಡೇ ಶಿವಕುಮಾರ್ ವಿರುದ್ಧ ಕೆಲಸ ಮಾಡಲಿ, ಅದನ್ನು ಬಿಟ್ಟು ನಕಲಿ ಸಿಮ್ ಕಾರ್ಡ್ ತೆಗೆದುಕೊಟ್ಟು ಮುಖ್ಯಮಂತ್ರಿಗಳ ತೇಜೋವಧೆಗೆ ಯತ್ನಿಸುತ್ತಿದ್ದಾರೆ. ಇದು ನಿಮ್ಮ ಘನತೆಗೆ ತಕ್ಕದಲ್ಲ, ಏನೇ ಮಾಡುವುದಿದ್ದರೂ ನೇರವಾಗಿ ಮಾಡಿ, ಬೆನ್ನಿಗೆ ಚೂರಿ ಹಾಕಬೇಡಿ. ಪ್ರಧಾನಿ ನರೇಂದ್ರ ಮೋದಿ ಸಂಪುಟದಲ್ಲಿ ಉತ್ತಮ ಖಾತೆ ಹೊಂದಿದ್ದರೂ ಕರ್ನಾಟಕಕ್ಕೆ ಯಾವುದೇ ಒಂದು ಉತ್ತಮ ಕೆಲಸ ಮಾಡಿಲ್ಲ ಎಂದು ಆರೋಪಿಸಿದರು.

ದೇಶವೇ ಅಲ್ಲೋಲಕಲ್ಲೋಲ ವಾಗುವ ಸುದ್ದಿ ಹಾಗೂ ದಾಖಲೆಗಳನ್ನು ಬಿಡುಗಡೆ ಮಾಡುವುದಾಗಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿಕೆ ಬೆನ್ನಲ್ಲೇ ಶಾಸಕ ಎಸ್.ಟಿ ಸೋಮಶೇಖರ್ ನೀಡಿರುವ ಹೇಳಿಕೆ ಮತ್ತಷ್ಟು ಕುತೂಹಲಕ್ಕೆ ಕಾರಣವಾಗಿದೆ.

# ಗೃಹಲಕ್ಷ್ಮಿಗೆ ಗಂಡನ ಆಧಾರ್ ಲಿಂಕ್ ಮಾಡುವುದು ಕಡ್ಡಾಯ

### ಯೋಜನೆ ಪರಿಷ್ಕರಿಸಿ ಹೊಸ ಮಾರ್ಗಸೂಚಿ ಪ್ರಕಟಿಸಿದ ಸರ್ಕಾರ

**ಬೆಂಗಳೂರು, ಸೆ.23:** ರಾಜ್ಯ ಸರ್ಕಾರ ತನ್ನ ಮಹತ್ವಾಕಾಂಕ್ಷೆಯ 'ಗೃಹಲಕ್ಷ್ಮಿ' ಯೋಜನೆಯನ್ನು ಪರಿಷ್ಕರಣೆ ಮಾಡಿದ್ದು, ಈ ಸಂಬಂಧ ಹೊಸ ಮಾರ್ಗಸೂಚಿಗಳನ್ನು ಪ್ರಕಟಿಸಿದೆ.

ಮನೆಯ ಯಜಮಾನಿ ಗೃಹಲಕ್ಷ್ಮಿ ಯೋಜನೆಯ ಹಣ ಪಡೆಯಬೇಕು ಎಂದರೆ ಆಧಾರ್ ಮಾತ್ರವಲ್ಲದೆ, ಗಂಡನ ಆಧಾರ್ ಲಿಂಕ್ ಮಾಡುವುದನ್ನು ಸರ್ಕಾರ ಕಡ್ಡಾಯಗೊಳಿಸಿದೆ. ಅಷ್ಟೇ ಅಲ್ಲದೇ ಯಾವುದೇ ಸಾಲ ಇಲ್ಲದಿರುವ ಬ್ಯಾಂಕ್ ಖಾತೆಯನ್ನೇ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆಯೇ ಫಲಾನುಭವಿಗಳ ಹೆಸರು ಮತ್ತು ವಿಳಾಸ ಇರಬೇಕು. ಇಲ್ಲವಾದಲ್ಲಿ 2000 ರೂ. ಕಟ್ ಆಗಲಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಈ ಹೊಸ ನಿಯಮಗಳನ್ನು ಜಾರಿಗೆ ತಂದಿದ್ದು, ಇನ್ನು ಮುಂದೆ ಕೇವಲ ಯಜಮಾನಿಯಷ್ಟೇ ಅಲ್ಲದೆ ಪತಿಯ ಆಧಾರ್ ಕಾರ್ಡ್ ಕೂಡ ಕಡ್ಡಾಯವಾಗಿ ಲಿಂಕ್ ಮಾಡಬೇಕಾಗಿದೆ.

**ಗೃಹಲಕ್ಷ್ಮಿಯೋ, ಷರತ್ತುಗಳ ಬಂಧನವೋ: ಜೆಡಿಎಸ್ ಪ್ರಶ್ನೆ**

ರಾಜ್ಯ ಸರ್ಕಾರದ ಈ ಕ್ರಮಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿದ ಪ್ರತಿಪಕ್ಷ ಜೆಡಿಎಸ್, ಗಂಡನಿಗೆ ಗೊತ್ತಾಗದಂತೆ ಹೆಂಡತಿ ಅಕೌಂಟ್‌ಗೆ 2 ಸಾವಿರ ಹಾಕ್ತೀವಿ ಅಂದಿದ್ದ ಸರ್ಕಾರಕ್ಕೆ ಈಗ ಯಜಮಾನನ ಆಧಾರ್ ಯಾಕೆ ಬೇಕು ಎಂದು ಪ್ರಶ್ನಿಸಿದೆ. ಚುನಾವಣೆಗೆ ಮುನ್ನ ಮಹಿಳೆಯರ ಖಾತೆಗೆ ನೇರ ಹಣ ಅಂದವರು, ಈಗ ಪತಿಯ ಆಧಾರ್, ಮುಖದ ದೃಢೀಕರಣ ಅಂತ ಷರತ್ತುಗಳ ಸರಮಾಲೆ ಹಾಕುತ್ತಿರುವುದು ಯಾಕೆ ಎಂದು ಜೆಡಿಎಸ್ ಪ್ರಶ್ನಿಸಿದೆ. ಮನೆಯ ಯಜಮಾನಿಗೆ ಹಣ ಕೊಡುವಾಗ ಯಜಮಾನನ ಆಧಾರ್ ಯಾಕೆ ಬೇಕು? ಇದು ಗೃಹಲಕ್ಷ್ಮಿ ಯೋಜನೆಯೋ ಅಥವಾ ಷರತ್ತುಗಳ ಗೃಹಬಂಧನವೋ ಜೆಡಿಎಸ್ ಆಕ್ರೋಶ ವ್ಯಕ್ತಪಡಿಸಿದೆ.

# ಶಿವಾನಂದ ತಗಡೂರುಗೆ ರಾಜ್ಯ ನಾಟಕ ಅಕಾಡೆಮಿ ಪ್ರಶಸ್ತಿ ಪ್ರದಾನ

**ಬೆಂಗಳೂರು, ಸೆ.23:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರು, ಹಿರಿಯ ಪತ್ರಕರ್ತರು ಹಾಗೂ ರಂಗಕರ್ಮಿ ಶಿವಾನಂದ ತಗಡೂರು ಅವರಿಗೆ ರಾಜ್ಯ ನಾಟಕ ಅಕಾಡೆಮಿಯ ವಾರ್ಷಿಕ ಪ್ರಶಸ್ತಿಯನ್ನು ವಿಧಾನ ಪರಿಷತ್ ಉಪಸಭಾಪತಿ ಉಮಾಶ್ರೀ ಅವರು ಪ್ರದಾನ ಮಾಡಿದರು.

ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಉಮಾಶ್ರೀ, ರಂಗಭೂಮಿ ಯಾವ ಕಾಲಕ್ಕೂ ತನ್ನ ಜೀವಂತಿಕೆಯನ್ನು ಕಳೆದುಕೊಳ್ಳುವುದಿಲ್ಲ. ನಾನೂ ಕೂಡ ರಂಗಭೂಮಿ ಕಲಾವಿದೆಯಾಗಿ ಬೆಳೆದು ಈ ಎತ್ತರದ ಸ್ಥಾನಕ್ಕೆ ಬಂದಿದ್ದೇನೆ. ರಂಗಭೂಮಿಯ ಮೂಲಕ ಬೆಳೆದು ಬಂದಿರುವ ಎಲ್ಲ ಕಲಾವಿದರಿಗೂ ರಾಜ್ಯ ಸರ್ಕಾರದ ಪರವಾಗಿ ಅಭಿನಂದನೆಗಳು ಎಂದು ಹೇಳಿದರು.

ಸಮಾರಂಭದಲ್ಲಿ ಹಿರಿಯ ನಟ ಹಾಗೂ ವಿಧಾನ ಪರಿಷತ್ ಮಾಜಿ ಸದಸ್ಯ ಮುಖ್ಯಮಂತ್ರಿ ಚಂದ್ರು, ನಾಟಕ ಅಕಾಡೆಮಿ ಅಧ್ಯಕ್ಷ ಡಾ. ಕೆ.ವಿ. ನಾಗರಾಜಮೂರ್ತಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ, ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಮುಕುಂದರಾಜ್, ಹಿರಿಯ ರಂಗಕರ್ಮಿ ಶ್ರೀನಿವಾಸ ಜಿ. ಕಪ್ಪಣ್ಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕಿ ಡಾ. ವಸುಂಧರಾ ಹಾಗೂ ರಿಜಿಸ್ಟ್ರಾರ್ ನೀಲಮ್ಮ, ಶೇಖ್ ಮಾಸ್ತರ ಉಪಸ್ಥಿತರಿದ್ದರು.




ಸಮಾರಂಭದಲ್ಲಿ ರಾಜ್ಯ ನಾಟಕ ಅಕಾಡೆಮಿಯ ವಾರ್ಷಿಕ ಪ್ರಶಸ್ತಿಗಳು ಹಾಗೂ ವಿವಿಧ ದತ್ತಿನಿಧಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು.

# 'ಸಂಸ್ಕೃತಿ ಸಂಗಮ' ಪ್ರಶಸ್ತಿ 2026 ಡಾ. ಕೆ.ವಿ. ನಾಗರಾಜಮೂರ್ತಿ




**ಬೆಂಗಳೂರು, ಸೆ.23:** ಡಾ.ಕೆ.ವಿ. ನಾಗರಾಜಮೂರ್ತಿ ಅವರು ಕನ್ನಡ ರಂಗಭೂಮಿಯ ಹಿರಿಯ ರಂಗಕರ್ಮಿ, ಸಂಘಟಕ, ನಿರ್ದೇಶಕ ಹಾಗೂ ಸಾಂಸ್ಕೃತಿಕ ಚಿಂತಕರಾಗಿ ಹಲವು ದಶಕಗಳಿಂದ ರಂಗಭೂಮಿ ಮತ್ತು ಸಾಂಸ್ಕೃತಿಕ ಕ್ಷೇತ್ರಕ್ಕೆ ಅಪಾರ ಸೇವೆ ಸಲ್ಲಿಸುತ್ತಿದ್ದಾರೆ. ರಂಗಭೂಮಿಯ ಬೆಳವಣಿಗೆಯನ್ನು ತಮ್ಮ ಬದುಕಿನ ಪ್ರಮುಖ ಆಶಯವನ್ನಾಗಿ ಮಾಡಿಕೊಂಡಿರುವ ಅವರು, ಪ್ರಯೋಗರಂಗ ಹಾಗೂ ಭಾರತ ಯಾತ್ರಾಕೇಂದ್ರದಂತಹ ಸಂಸ್ಥೆಗಳ ಮೂಲಕ ಪ್ರಯೋಗಶೀಲ ರಂಗಭೂಮಿ, 'ಕಲಾತ್ಮಕ ಅಭಿವ್ಯಕ್ತಿ ಮತ್ತು ಸಾಂಸ್ಕೃತಿಕ ಸಂವಾದಗಳಿಗೆ ಉತ್ತೇಜನ ನೀಡಿರುವುದು ಅವರ ಪ್ರಮುಖ ಕೊಡುಗೆಗಳಲ್ಲಿ

ತಮ್ಮ ಸಂಘಟನಾ ಸಾಮರ್ಥ್ಯ, ದೂರದೃಷ್ಟಿ ಮತ್ತು ನಿರಂತರ ಪರಿಶ್ರಮದ ಮೂಲಕ ಅನೇಕ ರಂಗಪ್ರತಿಭೆಗಳಿಗೆ ಅವಕಾಶ ಕಲ್ಪಿಸಿ, ಕನ್ನಡ ರಂಗಭೂಮಿಯ ಚಟುವಟಿಕೆಗಳಿಗೆ ಹೊಸ ಚೈತನ್ಯ ತುಂಬಿದ್ದಾರೆ. ಪ್ರಸ್ತುತ ಅವರು ಕರ್ನಾಟಕ ನಾಟಕ ಅಕಾಡೆಮಿಯ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಾ, ರಾಜ್ಯದ ರಂಗಭೂಮಿಯ ಅಭಿವೃದ್ಧಿ, ಕಲಾವಿದರ ಪ್ರೋತ್ಸಾಹ ಹಾಗೂ ರಂಗಚಟುವಟಿಕೆಗಳ ವಿಸ್ತರಣೆಗೆ ಶ್ರಮಿಸುತ್ತಿದ್ದಾರೆ. ವಿವಿಧ ಸಾಂಸ್ಕೃತಿಕ ಸಂಘಟನೆಗಳು, ಕಲಾವಿದರು ಮತ್ತು ರಂಗಾಸಕ್ತರನ್ನು ಒಗ್ಗೂಡಿಸಿ, ರಂಗಭೂಮಿಯ ಸೃಜನಶೀಲ ಚಟುವಟಿಕೆಗಳಿಗೆ ಉತ್ತೇಜನ ನೀಡುವಲ್ಲಿ ಅವರು ವಹಿಸಿರುವ ಸಂಘಟನಾ ಪಾತ್ರ ಗಮನಾರ್ಹವಾಗಿದೆ.

ಡಾ. ಕೆ.ವಿ. ನಾಗರಾಜಮೂರ್ತಿರವರು ವಿಶೇಷವಾಗಿ ಸಾಂಸ್ಕೃತಿಕ ಸಂಘಟನಾ ಕ್ಷೇತ್ರಕ್ಕೆ ಸಲ್ಲಿಸಿರುವ ಜೀವಮಾನದ ಸಾಧನೆಯನ್ನು ಗುರುತಿಸಿ ನಮ್ಮ ಪ್ರತಿಷ್ಠಾನವು 2026ನೇ ಸಾಲಿನ ಪ್ರತಿಷ್ಠಿತ "ಸಂಸ್ಕೃತಿ ಸಂಗಮ" ಪ್ರಶಸ್ತಿಯನ್ನು ಅವರಿಗೆ ನೀಡಿ ಗೌರವಿಸುತ್ತಿದೆ.

# ಗೌರವ ಕೊಡಿ ಎಂದಿದ್ದು ಲಂಚ ಕೊಡಿ ಎಂಬರ್ಥದಲ್ಲಿ ಅಲ್ಲ: ಶಿವಲಿಂಗೇಗೌಡ ಸ್ಪಷ್ಟನೆ



**ಬೆಂಗಳೂರು, ಸೆ.23:** ನನ್ನದು ಗ್ರಾಮೀಣ ಭಾಷೆ. ಆಡುಭಾಷೆಯಲ್ಲಿ ಮಾತನಾಡುವ ಸಂದರ್ಭ ಪದ ಬಳಕೆಯ ವ್ಯತ್ಯಾಸವಾಗಿರಬಹುದು. ಗೌರವ ಕೊಡಿ ಎಂದಿದ್ದು ಲಂಚ ಕೊಡಿ ಎಂಬರ್ಥದಲ್ಲಿ ಅಲ್ಲ. ಒಂದು ಪದ ವ್ಯತ್ಯಾಸವಾಗಿದ್ದನ್ನೇ ದೊಡ್ಡ ಸಮಸ್ಯೆಯನ್ನಾಗಿ ಬಿಂಬಿಸಬಾರದು ಎಂದು ಅಬಕಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಸ್ಪಷ್ಟಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೆ. ಎಂ. ಶಿವಲಿಂಗೇಗೌಡ ಪದ ವಿವಾದದ ಕುರಿತು ಸಮರ್ಥನೆ ಮಾಡಿಕೊಳ್ಳುತ್ತಿಲ್ಲ, ಉಚ್ಚಾರಣೆಯಲ್ಲಿ ತಪ್ಪಾಗಿದ್ದನ್ನು ಬೆಳೆಸಿಕೊಂಡು ಹೋಗಬಾರದು. ನನ್ನ ವ್ಯಾಖ್ಯಾನದಲ್ಲಿ ಸಹಾಯ ಮಾಡಿದವರಿಗೆ ಧನ್ಯವಾದ ಹೇಳುವುದು ನಮ್ಮ ಧರ್ಮ ಎಂಬುದಾಗಿತ್ತು. ಇದರಿಂದ ಫಲಾನುಭವಿ ಹಾಗೂ ಅಧಿಕಾರಿಗಳ ನಡುವಣ ಸಂಘರ್ಷ ಇತ್ಯರ್ಥಗೊಳ್ಳುತ್ತದೆ ಎಂಬ ಭಾವನೆಯಲ್ಲಿ ಹಾಗೆ ಹೇಳಿದ್ದಾಗಿತ್ತು ಎಂದರು.

ಸಕಲೇಶಪುರ ತಾಲ್ಲೂಕಿನಲ್ಲಿ ನಡೆದ ಪ್ರಜಾಸೇವಾ ಆಂದೋಲನ ಕಾರ್ಯಕ್ರಮದಲ್ಲಿ ಕೆಲವು ಅಧಿಕಾರಿಗಳು ಲಂಚ ಸ್ವೀಕರಿಸಿರುವುದಾಗಿ ಸ್ಥಳೀಯರು ದೂರಿದ್ದಾರೆ. ಅಂತಹ ಆರೋಪ ಹೊತ್ತಿರುವ ಅಧಿಕಾರಿಗಳ ವಿರುದ್ಧ ತನಿಖೆ ನಡೆಸಿ, ಎರಡು ತಿಂಗಳಲ್ಲಿ ಕ್ರಮ ವಹಿಸಲಾಗುವುದು ಎಂದು ಶಿವಲಿಂಗೇಗೌಡ ಅವರು ಸ್ಪಷ್ಟಪಡಿಸಿದರು.

ಪ್ರಜಾಸೇವಾ ಕಾರ್ಯಕ್ರಮದ ನಡುವೆ ಒಂದು ಗುಂಪು ಒಟ್ಟಾಗಿ ಬಂದು ಸರ್ವೆ ಇಲಾಖೆಯಲ್ಲಿ 2 ಲಕ್ಷದವರೆಗೆ ಲಂಚ ತೆಗೆದುಕೊಳ್ಳುತ್ತಿರುವುದಾಗಿ ಆರೋಪಿಸಿದರು. ಈ ಸಂದರ್ಭ ಜಿಲ್ಲಾಮಂತ್ರಿ ನೇತೃತ್ವದಲ್ಲಿ ಪ್ರಜಾಸೇವಾ ಇಲಾಖೆಯಡಿ ಅದಾಲತ್ ನಡೆಸಿ ಅಧಿಕಾರಿಗಳನ್ನು ಹಾಗೂ ಫಲಾನುಭವಿಗಳನ್ನು ವೈಯಕ್ತಿಕವಾಗಿ ಕರೆಸಿ ಚರ್ಚಿಸಿ ಸಮಸ್ಯೆ ಬಗೆಹರಿಸಿ ಎಂಬ ಸಲಹೆಯನ್ನು ನೀಡಿದೆ. 2 ಲಕ್ಷ ಲಂಚ ಕೊಟ್ಟಿದ್ದೇನೆ ಎಂಬ ವ್ಯಕ್ತಿಯ ಸಮಸ್ಯೆಯನ್ನು ಸರಿಯಾಗಿ ಕೇಳುವಂತೆ ಜಿಲ್ಲಾಧಿಕಾರಿಗೆ ಸ್ಥಳದಲ್ಲೇ ಹೇಳಿದೆ. ಅಧಿಕಾರಿಗಳು ಹಾಗೂ ಫಲಾನುಭವಿಗಳ ನಡುವೆ ಸಂಘರ್ಷ ಬೇಡ. ಕೆಲಸ ಮಾಡಿಕೊಟ್ಟ ಮೇಲೆ ಅಧಿಕಾರಿಗಳಿಗೆ ಗೌರವ ಸಲ್ಲಿಸಿ, ಅದು ನಮ್ಮ ಧರ್ಮ. ನಮ್ಮ ಕೆಲಸವನ್ನು ಮಾಡಿಕೊಟ್ಟವರಿಗೆ ಗೌರವ ಕೊಡುವುದು ಸನ್ನಡತೆ ಎಂದಿದ್ದೆ. ಆಗ ಗೌರವ ನೀಡಿ ಎಂದರೆ ಲಂಚ ಕೊಡಬೇಕೆ ಎಂದು ಕೆಲವರು ಗಲಾಟೆ ಮಾಡಿದರು. ಆಗ ಯಾರೂ ಕೂಡ ಒಂದು ರೂಪಾಯಿ ಲಂಚ ಕೊಡಬಾರದು. ಈಗಾಗಲೇ ಲಂಚದ ರೂಪದಲ್ಲಿ ಕೊಟ್ಟಿರುವ ಹಣವನ್ನು ಅಧಿಕಾರಿಗಳಿಂದ ವಾಪಸ್ ಕೊಡಿಸುವ ನಿಟ್ಟಿನಲ್ಲಿ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದಿದ್ದೇನೆ ಎಂದು ಸ್ಪಷ್ಟಪಡಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಸೆಪ್ಟೆಂಬರ್ 24 2026 ಗುರುವಾರ

## ಒಳಪುಟಗಳಲ್ಲಿ

ಜ್ಞಾನೇಶ್ ಕುಮಾರ್ ಏಕವ್ಯಕ್ತಿ ಸರ್ವಾಧಿಕಾರಿ: ವಜಾಕ್ಕೆ ಆಗ್ರಹ - ಪು.4

ಉಪ್ಪಿನ ಪಾಕೆಟ್‌ಗಳ ಮೇಲೂ ಆರೋಗ್ಯ ಕುರಿತು ಎಚ್ಚರಿಕೆ ಸಂದೇಶ ಮುದ್ರಿಸಲು ಚಿಂತನೆ: ಸಚಿವ ಯು.ಟಿ. ಖಾದರ್ - ಪು.5

ಆಹಾರ ಗುಣಮಟ್ಟ ಪರಿಶೀಲನೆಗೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಸೂಚನೆ - ಪು.6

# ಬರ ಘೋಷಣೆಯಲ್ಲಿ ಕಡೆಗಣನೆ: ಶಾಸಕ ಯಶವಂತರಾಯಗೌಡ ಪಾಟೀಲ್ ರಾಜೀನಾಮೆ



**ಬೆಂಗಳೂರು, ಸೆ.23: ಬರಪೀಡಿತ ತಾಲ್ಲೂಕುಗಳ ಪಟ್ಟಿಯಲ್ಲಿ ತಮ್ಮ ಕ್ಷೇತ್ರದ ಇಂಡಿ ಮತ್ತು ಚಡಚಣ ತಾಲ್ಲೂಕುಗಳನ್ನು ಸೇರಿಸದಿರುವುದನ್ನು ವಿರೋಧಿಸಿ ಕಾಂಗ್ರೆಸ್ ಶಾಸಕ ಯಶವಂತರಾಯಗೌಡ ಪಾಟೀಲ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.**

ಇಂಡಿ ಮತ್ತು ಚಡಚಣ ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳ ಪಟ್ಟಿಗೆ ಸೇರಿಸದಿರುವುದರಿಂದ ಅಸಮಾಧಾನಗೊಂಡಿದ್ದ ಯಶವಂತರಾಯಗೌಡ ಪಾಟೀಲ್ ಅವರು ಬುಧವಾರ ವಿಧಾನಸಭಾಧ್ಯಕ್ಷ ಬಿ.ಎಸ್. ಪಾಟೀಲ್ ಅವರನ್ನು ಭೇಟಿಮಾಡಿ ರಾಜೀನಾಮೆ ಪತ್ರ ಸಲ್ಲಿಸಿದರು. ಆಡಳಿತ ಪಕ್ಷದ ಶಾಸಕನಾಗಿ ಸರ್ಕಾರಕ್ಕೆ ಮುಜುಗರವಾಗಬಾರದು ಎಂದು ಹಲವು ಬಾರಿ ಮನವಿ ಮಾಡಿದ್ದೆ. ಆದರೆ ನಮ್ಮ ಮಾತಿಗೆ ಮತ್ತು ಭಾವನೆಗಳಿಗೆ ಬೆಲೆ ಸಿಗುತ್ತಿಲ್ಲ. ಇಂದಿನ ರಾಜಕೀಯ ಪರಿಸ್ಥಿತಿಯಲ್ಲಿ ಒತ್ತಡ ಹೇರುವ ಬಲಾಢ್ಯರಿಗಷ್ಟೇ ಮನ್ನಣೆ ದೊರೆಯುತ್ತಿದೆ. ಕ್ಷೇತ್ರದ ಜನರ ಆಶೋತ್ತರಗಳಿಗೆ ಸ್ಪಂದಿಸಲಾಗದೇ ಇರುವುದರಿಂದ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿರುವುದಾಗಿ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

## ಶಾಸಕರದ್ದು ಕ್ಷೇತ್ರದ ರೈತರ ಬದುಕಿನ ಕಾಳಜಿ: ಸಿಎಂ ಡಿ.ಕೆ. ಶಿವಕುಮಾರ್

**ಬೆಂಗಳೂರು, ಸೆ.23:** ಯಶವಂತರಾಯಗೌಡ ಪಾಟೀಲ್ ಅವರು ರಾಜೀನಾಮೆಗೆ ಮುಂದಾಗಿದ್ದು ರೈತರ ಬದುಕಿಗಾಗಿಯೇ ಹೊರತು, ಈಶ್ವರಪ್ಪ ಅವರು ಹೇಳಿದ್ದ 15 ಜನರನ್ನು ಕೊಟ್ಟು, ಕೊಳ್ಳುವ ರಾಜೀನಾಮೆ ರೀತಿ ಅಲ್ಲ ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿರುಗೇಟು ನೀಡಿದರು.

ವಿಧಾನಸಭೆಯಲ್ಲಿ ಬುಧವಾರ ಬರ ವಿಚಾರ ಕುರಿತ ಚರ್ಚೆ ವೇಳೆ ವಿರೋಧ ಪಕ್ಷಗಳ ನಾಯಕರು ಶಾಸಕ ಯಶವಂತರಾಯಗೌಡ ಪಾಟೀಲ್ ರಾಜೀನಾಮೆ ಪತ್ರದ ಪ್ರತಿಯನ್ನು ಪ್ರದರ್ಶಿಸಿ ಗದ್ದಲ ಎಬ್ಬಿಸಿದಾಗ ಮೇಲಿನಂತೆ ಪ್ರತಿಕ್ರಿಯಿಸಿದರು.

ವಿರೋಧ ಪಕ್ಷದವರು ಬಹಳ ಆತುರದಲ್ಲಿ ರಾಜಕಾರಣ ಮಾಡಲು ಬಡಿದಾಡುತ್ತಿದ್ದಾರೆ. ಏನೋ ದೊಡ್ಡದಾಗಿ ಆಚೆ ಬಂದಿದೆ ಎಂದು ಕೂಗಾಡುತ್ತಿರುವುದನ್ನು ನೋಡಿದ್ದೆನೆ. ನಾವೆಲ್ಲರೂ ಸಾರ್ವಜನಿಕ ಜೀವನದಲ್ಲಿದ್ದು, ಪ್ರಧಾನಮಂತ್ರಿಗಳು ಭೀಕರ ಬರ ಪರಿಸ್ಥಿತಿ ಬಗ್ಗೆ ಎಚ್ಚರಿಕೆ ನೀಡಿದ್ದಾರೆ. ಕಳೆದ ಅಧಿವೇಶನದಲ್ಲಿ ವಿರೋಧ ಪಕ್ಷದವರು ರಾಜಕೀಯ ಮಾಡಲೆಂದೇ ಬರದ ಬಗ್ಗೆ ಸದನದಲ್ಲಿ ಚರ್ಚೆಗೆ ಅವಕಾಶ ನೀಡಿರಲಿಲ್ಲ. ಇಂದು ಎಲ್ಲಾ ಶಾಸಕರು ಅವರವರ ಕ್ಷೇತ್ರದ ಸ್ಥಿತಿಗತಿಗಳ ಬಗ್ಗೆ ಚರ್ಚಿಸಲು ಅವಕಾಶ ನೀಡುವ ಉದ್ದೇಶದಿಂದಲೇ ಈ ಅಧಿವೇಶನ ನಡೆಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದರು.

**ಬರ ವಿಚಾರದಲ್ಲಿ ಪಕ್ಷಭೇದ ಮಾಡಲ್ಲ:** ನಮ್ಮ ಶಾಸಕರು ಸೇರಿದಂತೆ ಅನೇಕರು ನಮ್ಮ ತಾಲ್ಲೂಕನ್ನು ಬರ ಪಟ್ಟಿಗೆ ಸೇರಿಸಿ ಎಂದು ಮನವಿ ಪತ್ರ ನೀಡಿದ್ದಾರೆ. ನಾನು ಯಾವ ಕ್ಷೇತ್ರವನ್ನು ಸೇರಿಸಿಲ್ಲ. ಎಲ್ಲಾ ಜವಾಬ್ದಾರಿಯನ್ನು ಡಿಸಿಎಂ ಪರಮೇಶ್ವರ್‌ಗೆ ವಹಿಸಿದ್ದೇನೆ. ಎಚ್.ಕೆ. ಪಾಟೀಲ್‌ರಂತಹ ಹಿರಿಯ ನಾಯಕರ ಮೇಲೆ ಇಷ್ಟು ದೊಡ್ಡ ಪ್ರಮಾಣದಲ್ಲಿ ಒತ್ತಡ ಇರಬೇಕಾದರೆ, ಯಶವಂತರಾಯಗೌಡ ಪಾಟೀಲ್ ಅವರು ಬೇಸರಗೊಂಡಿರುವುದರಲ್ಲಿ ತಪ್ಪಿಲ್ಲ ಎಂದು ಡಿ.ಕೆ. ಶಿವಕುಮಾರ್ ಹೇಳಿದರು. ಬರದ ವಿಚಾರದಲ್ಲಿ ಸರ್ಕಾರ ಪಕ್ಷಭೇದ ಮಾಡುತ್ತಿಲ್ಲ. 224 ಕ್ಷೇತ್ರಗಳು ಒಂದೇ. ಮಾನದಂಡಗಳ ಅನುಸಾರ ಬರ ಘೋಷಣೆ ಮಾಡಲಾಗಿದೆ. ನನ್ನ ಕ್ಷೇತ್ರದ ಒಂದು ಭಾಗದಲ್ಲಿ ಮಾತ್ರ ಮಳೆಯಾಗಿದೆ. ಉಳಿದ ಭಾಗದಲ್ಲಿ ಮಳೆಯಾಗಿಲ್ಲ. ಆದರೂ ನಾನು ಬರದ ಪಟ್ಟಿಗೆ ಸೇರಿಸುವಂತೆ ಒತ್ತಡ ಹಾಕಿಲ್ಲ. ಯಶವಂತರಾಯಗೌಡ ಪಾಟೀಲ್ ಭಾವುಕರಾಗಿ ಬಂದಿದ್ದು ನಿಜ. ಅವರು ಸಭಾಧ್ಯಕ್ಷರ ಬಳಿಗೂ ಬಂದಿದ್ದು, ನೀವು ಸಿಎಂ ಜತೆ ಮಾತನಾಡಿ ಎಂದು ಸಲಹೆ ನೀಡಿದ್ದೀರಿ. ನಾನು ಅವರನ್ನು ಸಮಾಧಾನ ಮಾಡಿದ್ದೇನೆ. ತಮ್ಮ ಕ್ಷೇತ್ರದ ಜನರಿಗೆ ಉತ್ತರ ನೀಡಬೇಕಲ್ಲವೇ ಅವರು ಭಾವನಾತ್ಮಕವಾಗುವುದರಲ್ಲಿ ತಪ್ಪೇನಿಲ್ಲ ಎಂದು ಹೇಳಿದರು.

**ಆತುರದಲ್ಲಿ ಪ್ರತಿಪಕ್ಷ ಸದಸ್ಯರು ರಾಜೀನಾಮೆ ನೀಡಿದರೂ ಅಂಗೀಕರಿಸಲ್ಲ:** ಯಶವಂತರಾಯಗೌಡ ಪಾಟೀಲ್ ರಾಜೀನಾಮೆ ಬಗ್ಗೆ ವಿರೋಧ ಪಕ್ಷಗಳು ಗಾಬರಿಯಾಗುವುದು ಬೇಡ. ವಿರೋಧ ಪಕ್ಷದವರಾದ ನೀವುಗಳು ಭಾವನಾತ್ಮಕವಾಗಿ ರಾಜೀನಾಮೆ ನೀಡಿದರೂ ನಾವು ಆತುರದಲ್ಲಿ ಅದನ್ನು ಅಂಗೀಕಾರ ಮಾಡುವುದಿಲ್ಲ. ಜನ ನಿಮ್ಮನ್ನು 5 ವರ್ಷಕ್ಕೆ ಆಯ್ಕೆ ಮಾಡಿದ್ದು, ನೀವು ಇಲ್ಲಿ ಇದ್ದು, ಜನರ ಧ್ವನಿಯಾಗಿ ಕೆಲಸ ಮಾಡಬೇಕು. ನಾನು 224 ಕ್ಷೇತ್ರಗಳಿಗೆ ಸಿಎಂ ಆಗಿದ್ದು, ಇದು 224 ಕ್ಷೇತ್ರಗಳ ಸರ್ಕಾರ. ಹೀಗಾಗಿ ನೀವು ಬರದ ವಿಚಾರವಾಗಿ ಮುಕ್ತವಾಗಿ ಚರ್ಚೆ ಮಾಡಿ ಎಂದು ಡಿ. ಕೆ.ಶಿವಕುಮಾರ್ ಹೇಳಿದರು.

### ದುಡುಕಿನ ನಿರ್ಧಾರ ಕೈಗೊಳ್ಳಬೇಡಿ: ಸಿಎಂ ಮನವಿ




**ರಾಜೀನಾಮೆ ವಿಷಯ ತಿಳಿದ ಸಿಎಂ ಡಿ.ಕೆ. ಶಿವಕುಮಾರ್ ಅವರು ಯಶವಂತರಾಯಗೌಡ ಪಾಟೀಲ್ ಅವರನ್ನು ವಿಧಾನಸಭೆ ತಮ್ಮ ಕಚೇರಿಗೆ ಕರೆಸಿಕೊಂಡು ಮಾತುಕತೆ ನಡೆಸಿದರು. ಬರ ಘೋಷಣೆಗೆ ಕೇಂದ್ರ ಸರ್ಕಾರದ ಮಾನದಂಡಗಳು ಹಾಗೂ ಇಂಡಿ ಮತ್ತು ಚಡಚಣ ತಾಲ್ಲೂಕುಗಳಲ್ಲಿನ ವಾಸ್ತವ ಪರಿಸ್ಥಿತಿಗಳ ಕುರಿತು ಶಾಸಕರಿಗೆ ವಿವರಿಸಿದರು ಎನ್ನಲಾಗಿದೆ. ಬರಪೀಡಿತ ತಾಲ್ಲೂಕುಗಳ ಘೋಷಣೆ ಪ್ರಕ್ರಿಯೆ ಇಲ್ಲಿಗೆ ಮುಗಿದಿಲ್ಲ. ಮುಂದಿನ ಹಂತದಲ್ಲಿ ಇನ್ನಷ್ಟು ತಾಲ್ಲೂಕುಗಳನ್ನು ಪರಿಗಣಿಸಲಾಗುವುದು. ಆ ಸಂದರ್ಭದಲ್ಲಿ ನಿಮ್ಮ ಕ್ಷೇತ್ರವನ್ನೂ ಪರಿಗಣಿಸಲಾಗುವುದು. ಹೀಗಾಗಿ ದುಡುಕಿನ ನಿರ್ಧಾರ ಕೈಗೊಳ್ಳದೆ ರಾಜೀನಾಮೆ ಹಿಂಪಡೆಯುವಂತೆ ಸಿಎಂ ಮನವಿ ಮಾಡಿದರು ಎನ್ನಲಾಗಿದೆ.**

## ಬಿಜೆಪಿ ಸಂಘಟನಾ ಪುನಾರಚನೆ: ಕರ್ನಾಟಕ ಉಸ್ತುವಾರಿ ಬದಲು

**ನವದೆಹಲಿ, ಸೆ.23:** ಭಾರತೀಯ ಜನತಾ ಪಕ್ಷದಲ್ಲಿ ಮಹತ್ವದ ಸಂಘಟನಾ ಪುನಾರಚನೆ ನಡೆದಿದ್ದು, ದೇಶದ 28 ರಾಜ್ಯಗಳು ಹಾಗೂ 8 ಕೇಂದ್ರಾಡಳಿತ ಪ್ರದೇಶಗಳಿಗೆ ನೂತನ ಉಸ್ತುವಾರಿಗಳು ಮತ್ತು ಸಹ ಉಸ್ತುವಾರಿಗಳನ್ನು ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ನೇಮಕ ಮಾಡಿದ್ದಾರೆ.

ಕರ್ನಾಟಕದ ನೂತನ ರಾಜ್ಯ ಉಸ್ತುವಾರಿಯಾಗಿ ಹರೀಶ್ ದ್ವಿವೇದಿ ಅವರನ್ನು ನೇಮಕ ಮಾಡಲಾಗಿದೆ. ಸಹಉಸ್ತುವಾರಿಯಾಗಿ ಡಾ. ಕಾಸಮ್ ವೆಂಕಟೇಶ್ವರಲು ಅವರಿಗೆ ಜವಾಬ್ದಾರಿ ನೀಡಲಾಗಿದೆ. ಹರೀಶ್ ದ್ವಿವೇದಿ ಅವರಿಗೆ ಕರ್ನಾಟಕದ ಜತೆಗೆ ಬಿಹಾರದ ಉಸ್ತುವಾರಿಯನ್ನೂ ವಹಿಸಲಾಗಿದೆ.



ಕರ್ನಾಟಕ ಮೂಲದ ಇಬ್ಬರು ಬಿಜೆಪಿ ನಾಯಕರಿಗೆ ಇತರ ರಾಜ್ಯಗಳ ಸಂಘಟನಾ ಜವಾಬ್ದಾರಿ ನೀಡಲಾಗಿದೆ. ಪ್ರೊ. ಎಂ. ನಾಗರಾಜ್ ಅವರಿಗೆ ಕೇರಳದ ರಾಜ್ಯ ಉಸ್ತುವಾರಿ ಜವಾಬ್ದಾರಿ ನೀಡಲಾಗಿದೆ. ಬೆಳಗಾವಿ ದಕ್ಷಿಣ ಕ್ಷೇತ್ರದ ಬಿಜೆಪಿ ಶಾಸಕ ಅಭಯ್ ಪಾಟೀಲ್ ಅವರಿಗೆ ತೆಲಂಗಾಣದ ಸಹ-ಉಸ್ತುವಾರಿ ಜವಾಬ್ದಾರಿ ನೀಡಲಾಗಿದೆ.

ಮಾಜಿ ಕೇಂದ್ರ ಸಚಿವೆ ಸ್ಮೃತಿ ಇರಾನಿ ಅವರಿಗೆ ಹರಿಯಾಣ ಮತ್ತು ಛತ್ತೀಸ್‌ಗಢದ ಉಸ್ತುವಾರಿ ನೀಡಲಾಗಿದೆ. ರಾಮ್ ಮಾಧವ್ ಅವರಿಗೆ ತಮಿಳುನಾಡು ಮತ್ತು ಉತ್ತರಾಖಂಡ, ಸತೀಶ್ ಪೂನಿಯಾ ಅವರಿಗೆ ಜಮ್ಮು-ಕಾಶ್ಮೀರ ಮತ್ತು ಪಂಜಾಬ್, ಸುನಿಲ್ ಬನ್ಸಲ್ ಅವರಿಗೆ ತೆಲಂಗಾಣ ಮತ್ತು ಪಶ್ಚಿಮ ಬಂಗಾಳದ ಜವಾಬ್ದಾರಿ ನೀಡಲಾಗಿದೆ. ಉತ್ತರ ಪ್ರದೇಶದ ಉಸ್ತುವಾರಿಯಾಗಿ ವಿನೋದ್ ತಾವಡೆ ಮುಂದುವರಿದಿದ್ದಾರೆ. ಮಹಾರಾಷ್ಟ್ರದ ಉಸ್ತುವಾರಿಯಾಗಿ ಬೈಜಯಂತ್ ಜಯ್ ಪಾಂಡಾ ಅವರನ್ನು ನೇಮಿಸಲಾಗಿದೆ.

## ಬರ ನಿರ್ವಹಣೆಗೆ ಹಣವಿಲ್ಲ: ಚೆಂಬು, ಚಿಪ್ಪು ಹಿಡಿದು ಬಿಜೆಪಿ, ಜೆಡಿಎಸ್ ಸದಸ್ಯರಿಂದ ಪ್ರತಿಭಟನೆ



**ಬೆಂಗಳೂರು, ಸೆ.23:** ರಾಜ್ಯ ಸರ್ಕಾರದ ಆರ್ಥಿಕ ನಿರ್ವಹಣೆಯನ್ನು ಪ್ರಶ್ನಿಸಿ ಪ್ರತಿಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ವಿಧಾನಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆ ಬಳಿ ಖಾಲಿ ಚೊಂಬು ಹಾಗೂ ತೆಂಗಿನಕಾಯಿ ಚಿಪ್ಪುಗಳನ್ನು ಪ್ರದರ್ಶಿಸಿ ಪ್ರತಿಭಟನೆ ನಡೆಸಿದರು.

ರಾಜ್ಯದ ಖಜಾನೆ ಖಾಲಿಯಾಗಿದೆ, ಸರ್ಕಾರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದೆ ಎಂದು ಆರೋಪಿಸಿದ ಪ್ರತಿಪಕ್ಷ ನಾಯಕರು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜೀ ನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಸಚಿವರಾದ ಸುನೀಲ್ ಕುಮಾರ್, ಎಸ್.ಸುರೇಶ್ ಕುಮಾರ್, ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಬಿಜೆಪಿ, ಜೆಡಿಎಸ್ ಸದಸ್ಯರು ಭಾಗವಹಿಸಿದ್ದರು. ಖಾಲಿ ಚೊಂಬುಗಳನ್ನು ಹಿಡಿದುಕೊಂಡು ಪ್ರತಿಭಟನಾಕಾರರು ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಆರ್ಥಿಕತೆ ನಿರ್ವಹಿಸುವಲ್ಲಿ ಸರ್ಕಾರ ವಿಫಲ, ಡಿಕೆಶಿ ವಿಫಲ, ದಿವಾಳಿ ಸರ್ಕಾರ ಎಂಬ ಘೋಷಣೆಗಳೊಂದಿಗೆ ಆಕ್ರೋಶ ವ್ಯಕ್ತಪಡಿಸಿದರು.ಡಿ.ಕೆ.ಶಿವಕುಮಾರ್ ಅವರ ಘೋಷಣೆಗಳು ಬೋಗಸ್, ಅವರ ಸಂಪುಟವೂ ಬೋಗಸ್ ಸಂಪುಟ ಎಂದು ಪ್ರತಿಪಕ್ಷ ಸದಸ್ಯರು ಟೀಕಿಸಿದರು.

ಆರ್.ಅಶೋಕ್ ಮಾತನಾಡಿ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಆರ್ಥಿಕ ಇಲಾಖೆ ಮೇಲೆಯೇ ನಿಯಂತ್ರಣ ಇಲ್ಲ ಎಂದು ಆರೋಪಿಸಿದರು.ರಾಜ್ಯದ ಆರ್ಥಿಕತೆ ಹಳ್ಳ ಹಿಡಿದಿದ್ದು, ಸರ್ಕಾರ ಪಾಪರ್ ಆಗಿದೆ ಎಂದು ದೂರಿದ ಅವರು, ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ ಮನೆಗೆ ಹೋಗಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಅವರು, ಸರ್ಕಾರ ಐಸಿಯುನಲ್ಲಿದೆ, ದಿವಾಳಿಯಾಗಿದೆ. ಸರ್ಕಾರ ಜಾಹೀರಾತುಗಳನ್ನು ನೀಡುತ್ತಾ ಕಾಲ ಕಳೆಯುತ್ತಿದೆ ಎಂದು ಟೀಕಿಸಿದರು.

ವಿವಿಧ ಸಾಮಾಜಿಕ ಭದ್ರತಾ ಪಿಂಚಣಿಗಳನ್ನು ನೀಡಲು ಹಣದ ಸಮಸ್ಯೆ ಎದುರಾಗಿದೆ. ಶಿಕ್ಷಕರ ನೇಮಕಾತಿಗೂ ಆರ್ಥಿಕ ತೊಂದರೆ ಎದು ರಾಗಿದೆ. ಉದ್ಯೋಗ ನೀಡುವಲ್ಲಿಯೂ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು.

## ಚುನಾವಣಾ ಆಯೋಗ, ಆರ್‌ಎಸ್‌ಎಸ್, ಬಿಜೆಪಿಯಿಂದ ದೇಶದ್ರೋಹದ ಕೃತ್ಯ



**ನವದೆಹಲಿ, ಸೆ. 23:** ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ಭಾರತೀಯ ಚುನಾವಣಾ ಆಯೋಗದಲ್ಲಿ ಆಂತರಿಕ ಭಿನ್ನಾಭಿಪ್ರಾಯವಿದೆ ಎಂಬ ಪತ್ರಿಕಾ ವರದಿ ಬೆನ್ನಲ್ಲೇ, ಕಾಂಗ್ರೆಸ್ ನಾಯಕ ಮತ್ತು ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಬಿಜೆಪಿ, ಆರ್‌ಎಸ್‌ಎಸ್ ಹಾಗೂ ಚುನಾವಣಾ ಆಯೋಗವು ದೇಶ ದ್ರೋಹದ ಕೃತ್ಯ ಎಸಗಿವೆ ಎಂದು ಆರೋಪಿಸಿದ್ದಾರೆ. ಮತ್ತು ಮತಗಳ್ಳತನವು ಸಂವಿಧಾನದ ಮೇಲಿನ ನೇರ ದಾಳಿಯಾಗಿದೆ ಎಂದು ಕಿಡಿಕಾರಿದ್ದಾರೆ.

ಚುನಾವಣಾ ಆಯುಕ್ತರಾದ ಸುಖ್ಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಗೆ ಸಂಬಂಧಿಸಿದ ನಿರ್ಧಾರಗಳ ಬಗ್ಗೆ ಪದೇ ಪದೇ ಕಳವಳ ವ್ಯಕ್ತಪಡಿಸಿದ್ದಾರೆ. ಸಿಇಸಿ ಜ್ಞಾನೇಶ್‌ಕುಮಾರ್ ಏಕಪಕ್ಷೀಯವಾಗಿ ನಿರ್ಧಾರ ತೆಗೆದುಕೊಂಡಿದ್ದಾರೆ.

ಈ ಕುರಿತು ಹೇಳಿಕೆ ಹಾಕಿರುವ ರಾಹುಲ್ ಗಾಂಧಿ, ಮತ ಕಳ್ಳತನವು ಭಾರತೀಯ ಜನರ ವಿರುದ್ಧದ ಅಪರಾಧ ಮತ್ತು ನಮ್ಮ ಸಂವಿಧಾನದ ಮೇಲಿನ ನೇರ ದಾಳಿಯಾಗಿದೆ. ಇದನ್ನು ಆಯೋಜಿಸಿದ ಬಿಜೆಪಿ, ಆರ್‌ಎಸ್‌ಎಸ್ ಮತ್ತು ಚುನಾವಣಾ ಆಯೋಗವು ದೇಶದ್ರೋಹದ ಕೃತ್ಯ ಎಸಗಿವೆ. ಇದರಿಂದ ನ್ಯಾಯ ಸಿಗುವುದಾದರೂ ಹೇಗೆ ಎಂದು ಪ್ರಶ್ನಿಸಿದ್ದಾರೆ.

ಚುನಾವಣಾ ಆಯೋಗ ಮತ್ತು ಅದರ ಅಧಿಕಾರಿಗಳೇ ಅವರು ಮಾಡುತ್ತಿರುವುದು ತಪ್ಪು ಎಂದು ಹೇಳುತ್ತಿದ್ದಾರೆ. ಮುಂದ ನಮ್ಮ ಸಮಯ ಬರುತ್ತದೆ. ನೀವು ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

ವರದಿ ಪ್ರಕಾರ, ಎಸ್‌ಐಆರ್ ಪ್ರಕ್ರಿಯೆಯಲ್ಲಿನ ಮತದಾರರ ಅಳಿಸುವಿಕೆ ಮತ್ತು ಪುನಃಸ್ಥಾಪನೆ, ಹೊಸ ಮತದಾರರ ಸೇರ್ಪಡೆ, ಮತದಾರರ ಪಟ್ಟಿಯ ನಿರ್ಧಾರಗಳ ವಿರುದ್ಧ ಮೇಲ್ಮನವಿಗಳು ಮತ್ತು ಮತದಾರರ ದತ್ತಾಂಶ ನಿರ್ವಹಣೆ ಸೇರಿ ಚುನಾವಣಾ ಆಯೋಗ ಹೊರಡಿಸಿದ ನಿರ್ಧಾರ ಮತ್ತು ಆದೇಶಗಳಿಗೆ ಕಳೆದ 10 ತಿಂಗಳುಗಳಲ್ಲಿ ಇಬ್ಬರು ಆಯುಕ್ತರು 14 ಬಾರಿ ಆಕ್ಷೇಪಣೆ ಸಲ್ಲಿಸಿದ್ದಾರೆ ಎನ್ನಲಾಗಿದೆ.

ಹೊಸ ಮತದಾರರ ನೋಂದಣಿಗೆ ಬಳಸಲಾಗುವ ನಮೂನೆ 6ರಲ್ಲಿನ ಬದಲಾವಣೆಗಳು ಮತ್ತು ಮತದಾರರ ಪಟ್ಟಿಯ ದತ್ತಾಂಶದ ಕೇಂದ್ರೀಕರಣದ ಅಂಶಗಳನ್ನು ಸಹ ಆಕ್ಷೇಪಣೆಗಳು ಒಳಗೊಂಡಿವೆ ಎಂದು ವರದಿ ಉಲ್ಲೇಖಿಸಿದೆ.

ಆದಾಗ್ಯೂ, ಚುನಾವಣಾ ಆಯೋಗವು ಭಿನ್ನಾಭಿಪ್ರಾಯದ ಕುರಿತು ಸ್ಪಷ್ಟನೆ ನೀಡಿದ್ದು, ಎಸ್‌ಐಆರ್‌ಗೆ ಸಂಬಂಧಿಸಿದ ನಿರ್ಧಾರಗಳು ಸೇರಿದಂತೆ ತನ್ನ ಎಲ್ಲಾ ನಿರ್ಧಾರಗಳು ಸರ್ವಾನುಮತದಿಂದ ಕೂಡಿವೆ. ಮತ್ತು ಚುನಾವಣಾ ಆಯುಕ್ತರು ಮತ್ತು ಮುಖ್ಯ ಚುನಾವಣಾ ಆಯುಕ್ತರ ಅನುಮೋದನೆಯನ್ನು ಪಡೆದಿವೆ ಎಂದು ಹೇಳಿದೆ.

## ಗ್ರಾಹಕರಿಗೆ ಸಿಹಿಸುದ್ದಿ: ಭಾನುವಾರವೂ ಬ್ಯಾಂಕಿಂಗ್ ಸೇವೆ



- ಮುಷ್ಕರ ಹಿನ್ನೆಲೆಯಲ್ಲಿ ಗ್ರಾಹಕರ ಅನುಕೂಲಕ್ಕಾಗಿ ಕ್ರಮ: ಕೇಂದ್ರ ಸಚಿವ ಪ್ರಲ್ಹಾದಜೋಶಿ
- ಸೆ.27ರಿಂದ ಕಾರ್ಯಾರಂಭಕ್ಕೆ ಆರ್‌ಬಿಐ ಅನುಮತಿ
- ಅಂದು ಸಾರ್ವತ್ರಿಕ ವಲಯದ ಎಲ್ಲಾ ಬ್ಯಾಂಕ್, ಎಟಿಎಂ ಓಪನ್

**ನವದೆಹಲಿ, ಸೆ.23:** ಬ್ಯಾಂಕ್ ಯುನಿಯನ್ ಮೂರು ದಿನಗಳ ಮುಷ್ಕರಕ್ಕೆ ಕರೆ ನೀಡಿದ ಹಿನ್ನಲೆಯಲ್ಲಿ ಗ್ರಾಹಕರ ಅನುಕೂಲಕ್ಕಾಗಿ ಸೆ.27ರ ಭಾನುವಾರ ಪೂರ್ಣಾವಧಿ ಕಾರ್ಯ ನಿರ್ವಹಣೆಗೆ ಕೇಂದ್ರ ಸರ್ಕಾರ ಸೂಕ್ತ ಕ್ರಮ ಕೈಗೊಂಡಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

ಸೆಪ್ಟೆಂಬರ್ 28ರಿಂದ 30ರವರೆಗೆ ದೇಶಾದ್ಯಂತ ಮೂರು ದಿನಗಳ ಕಾಲ ಬ್ಯಾಂಕ್ ಮುಷ್ಕರಕ್ಕೆ ಯುನೈಟೆಡ್ ಫೋರಮ್ ಆಫ್ ಬ್ಯಾಂಕ್ ಯೂನಿಯನ್ಸ್' (UFBU) ಕರೆ ನೀಡಿದೆ. ಹೀಗಾಗಿ ಗ್ರಾಹಕರಿಗೆ ಆಗುವ ಅಡೆತಡೆ ತಪ್ಪಿಸಲೆಂದು ಭಾನುವಾರ ರಜಾದಿನವಾದರೂ ಅಂದು ಎಂದಿನಂತೆ ಬ್ಯಾಂಕ್‌ಗಳು ಕಾರ್ಯ ನಿರ್ವಹಿಸಲು ಕ್ರಮ ಕೈಗೊಳ್ಳಲಾಗಿದೆ ಎಂದಿದ್ದಾರೆ.

**ಸರ್ಕಾರದಿಂದ ಮುನ್ನೆಚ್ಚರಿಕೆ ಕ್ರಮ:** ಸಾರ್ವಜನಿಕರ ಬ್ಯಾಂಕಿಂಗ್ ಅಗತ್ಯಗಳಿಗೆ ಯಾವುದೇ ತೊಂದರೆ ಯಾಗದಂತೆ ಕೇಂದ್ರ ಸರ್ಕಾರ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡಿದೆ. ಗ್ರಾಹಕರ ಸೇವೆಗಾಗಿ ಸೆ.27ರ ಭಾನುವಾರ ಸಾರ್ವತ್ರಿಕ ವಲಯದ ಎಲ್ಲಾ ಬ್ಯಾಂಕ್‌ಗಳು ಪೂರ್ಣಾ ಸಮಯ ಕಾರ್ಯ ನಿರ್ವಹಿಸಲಿವೆ ಎಂದು ತಿಳಿಸಿದ್ದಾರೆ.

**ರಿಸರ್ವ್ ಬ್ಯಾಂಕ್ ಅನುಮತಿ:** ಬ್ಯಾಂಕ್‌ಗಳ ಯುನಿಯನ್ ಮುಷ್ಕರದ ಕಾರಣ ಗ್ರಾಹಕರ ಅನುಕೂಲಕ್ಕಾಗಿ ಸೆ.27ರಂದು ಬ್ಯಾಂಕುಗಳು ಕಾರ್ಯ ನಿರ್ವಹಣೆಗೆ ರಿಸರ್ವ್ ಬ್ಯಾಂಕ್ ಅನುಮತಿ ನೀಡಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಮಾಹಿತಿ ನೀಡಿದ್ದಾರೆ.

ಸಾರ್ವಜನಿಕರ ಬ್ಯಾಂಕಿಂಗ್ ಸೇವೆಗಳಿಗೆ ದೀರ್ಘ ಕಾಲದವರೆಗೆ ಯಾವುದೇ ಅಡಚಣೆ ಯಾಗದಂತೆ ನೋಡಿಕೊಳ್ಳಲಾಗುತ್ತದೆ.

ಸಾರ್ವಜನಿಕ ವಲಯದ ಎಲ್ಲಾ ಬ್ಯಾಂಕ್‌ಗಳು ಮತ್ತು ಪ್ರಾದೇಶಿಕ ಗ್ರಾಮೀಣ ಬ್ಯಾಂಕ್‌ಗಳು ಸೆಪ್ಟೆಂಬರ್ ಭಾನುವಾರ ಎಂದಿನಂತೆ ಕಾರ್ಯ ನಿರ್ವಹಿಸಲಿವೆ ಎಂದಿದ್ದಾರೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ.

**ಬ್ಯಾಂಕ್, ಎಟಿಎಂ, ಕರೆನ್ಸಿ ಚೆಸ್ಟ್ ಓಪನ್:** ರಿಸರ್ವ್ ಬ್ಯಾಂಕ್ ಅನುಮತಿಯಂತೆ ಸೆ.27ರಂದು ಎಲ್ಲಾ ಬ್ಯಾಂಕ್ ಶಾಖೆಗಳು, ಕಚೇರಿಗಳು, ಎಟಿಎಂ-ಸಂಪರ್ಕಿತ ಶಾಖೆಗಳು ಮತ್ತು ಕರೆನ್ಸಿ ಚೆಸ್ಟ್‌ಗಳು (ನಗದು ಸಂಗ್ರಹಣಾ ಕೇಂದ್ರಗಳು) ಪೂರ್ಣ ಪ್ರಮಾಣದಲ್ಲಿ ಕಾರ್ಯ ನಿರ್ವಹಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ.

**ಮುಷ್ಕರ ಮುಂದೂಡಲು ಮನವಿ:** ಸೆ.28ರಿಂದ ಮೂರು ದಿನ ನಡೆಸಲು ಉದ್ದೇಶಿಸಿರುವ ಮುಷ್ಕರವನ್ನು ಮುಂದೂಡುವಂತೆ ಸರ್ಕಾರ ಮತ್ತು ಬ್ಯಾಂಕ್ ಆಡಳಿತ ಮಂಡಳಿಗಳು ಸಂಘಟನೆಗಳಿಗೆ ಮನವಿ ಮಾಡಿವೆ ಎಂದೂ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

## ಬಿಹಾರ, ಪ.ಬಂಗಾಳದಲ್ಲಿ ಮರು ಚುನಾವಣೆಗೆ ಆರ್‌ಜೆಡಿ ಒತ್ತಾಯ



**ಪಟನಾ, ಸೆ.23:** ಬಿಹಾರ ಮತ್ತು ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಗಳಲ್ಲಿ ಅಕ್ರಮ ನಡೆದಿದ್ದು, ಈ ಎರಡು ರಾಜ್ಯಗಳಲ್ಲಿ ಮರು ಚುನಾವಣೆ ನಡೆಸಬೇಕು ಎಂದು ರಾಷ್ಟ್ರೀಯ ಜನತಾ ದಳದ (ಆರ್‌ಜೆಡಿ) ನಾಯಕ ತೇಜಸ್ವಿ ಯಾದವ್ ಆಗ್ರಹಿಸಿದ್ದಾರೆ. ಮಾಧ್ಯಮಗಳ ಜತೆ ಬುಧವಾರ ಮಾತನಾಡಿದ ಅವರು, ದೇಶಾದ್ಯಂತ ಎಸ್‌ಐಆರ್‌ಪ್ರಕ್ರಿಯೆ ಸಂದರ್ಭದಲ್ಲಿ ವಿವಿಧ ರಾಜ್ಯಗಳಲ್ಲಿ ಹೆಸರುಗಳನ್ನು ಕೈಬಿಡುವುದು ಸೇರಿ ಹಲವು ಸಮಸ್ಯೆಗಳ ಬಗ್ಗೆ ಇಬ್ಬರು ಚುನಾವಣಾ ಆಯುಕ್ತರು ಆಕ್ಷೇಪ ವ್ಯಕ್ತಪಡಿಸಿದ್ದರು ಎಂಬ ಪತ್ರಿಕಾ ವರದಿ ಹಿನ್ನೆಲೆಯಲ್ಲಿ ಯಾದವ್ ಈ ಹೇಳಿಕೆ ನೀಡಿದ್ದಾರೆ.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್‌ಕುಮಾರ್ ಕಾರಣದಿಂದಾಗಿ ಬಿಜೆಪಿ ಬಿಹಾರ, ಪಶ್ಚಿಮ ಬಂಗಾಳ ಮತ್ತು ಇತರ ರಾಜ್ಯಗಳಲ್ಲಿ ಚುನಾವಣೆಯಲ್ಲಿ ಗೆದ್ದಿದೆ. ಚುನಾವಣಾ ಆಯೋಗದ ನಿಜವಾದ ಸ್ವರೂಪ ಈಗ ಬಯಲಾಗಿದೆ. ಜ್ಞಾನೇಶ್‌ಕುಮಾರ್ ಅವರು ಮೋದಿ ಮತ್ತು ಅಮಿತ್ ಶಾ ನಿರ್ದೇಶನದ ಮೇರೆಗೆ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

# 15ನೇ ಹಣಕಾಸು ಆಯೋಗದ 2186 ಕೋಟಿ ರೂ. ನೀಡದ ಕೇಂದ್ರದಿಂದ ರಾಜ್ಯಕ್ಕೆ ಅನ್ಯಾಯ

### ಆರ್ಥಿಕ ಹೊರೆ ನಡುವೆಯೂ ವಿಬಿ ಜಿ ರಾಮ್ ಜಿಯಲ್ಲಿ ರಾಜ್ಯಕ್ಕೆ 5ನೇ ಸ್ಥಾನ

**ಬೆಂಗಳೂರು, ಸೆ.23: ವಿಬಿಜಿ ರಾಮ್‌ಜಿಯಲ್ಲಿ ಮಹಾತ್ಮಾ ಗಾಂಧೀ ಹೆಸರನ್ನೇ ತೆಗೆದು ರಾಜ್ಯಗಳ ಮೇಲೆ ಹೆಚ್ಚಿನ ಹೊರೆ ಹಾಕಲಾಗಿದೆ. ಹೀಗಾಗಿ ಬಿಜೆಪಿ ಆಡಳಿತ ಇರುವ ರಾಜ್ಯಗಳಲ್ಲೂ ಯೋಜನೆ ಸಮರ್ಪಕವಾಗಿ ಅನುಷ್ಠಾನ ಆಗುತ್ತಿಲ್ಲ. ಆದರೆ ಆರ್ಥಿಕ ಹೊರೆಯ ನಡುವೆಯೂ ಯೋಜನೆ ಜಾರಿಯಲ್ಲಿ ಕರ್ನಾಟಕ ದೇಶದಲ್ಲೇ 5ನೇ ಸ್ಥಾನದಲ್ಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದರು. ವಿಧಾನ ಪರಿಷತ್ತಿನಲ್ಲಿಂದು ಬರದ ಮೇಲಿನ ಚರ್ಚೆಯ ವೇಳೆ ಮಧ್ಯಪ್ರವೇಶಿಸಿ ಮಾತನಾಡಿದ ಅವರು, ವಿಬಿ ಜಿ ರಾಮ್ ಜಿಯಡಿ ಸುಗ್ಗಿ ಕಾಲದಲ್ಲಿ 60 ದಿನ ಉದ್ಯೋಗ ನೀಡದಿರುವ ಅಂಶ ಹಿಂಪಡೆಯಬೇಕು ಮತ್ತು ರಾಜ್ಯಗಳ ಮೇಲೆ ಹೊರೆಹಾಕುವ ಶೇ.60:40ರ ಅನುಪಾತದ ಬದಲು ಮನರೇಗಾದಲ್ಲಿದ್ದಂತೆ 90:10ರ ಅನುಪಾತ ಮುಂದುವರಿಸಬೇಕು ಎಂದು ಸರ್ಕಾರ ಕೇಂದ್ರವನ್ನು ಒತ್ತಾಯಿಸಿದೆ. 2 ತಿಂಗಳು ಕೆಲಸ ನೀಡದಿದ್ದರೆ ಕಾರ್ಮಿಕರ ಶೋಷಣೆ ಆಗುತ್ತದೆ, ಇದನ್ನು ರಾಜ್ಯ ಸರ್ಕಾರ ವಿರೋಧಿಸಿದೆ ಎಂದು ಸ್ಪಷ್ಟಪಡಿಸಿದರು.**

**ಬೆಂಗಳೂರು, ಸೆ.23:** ರಾಜ್ಯ ಬರ ಎದುರಿಸುತ್ತಿರುವ ಸಂದರ್ಭದಲ್ಲಿ ಕೇಂದ್ರ ಸರ್ಕಾರ ಗ್ರಾಮ ಪಂಚಾಯತಿಗಳಿಗೆ 15ನೇ ಹಣಕಾಸು ಆಯೋಗದ ಶಿಫಾರಸಿನಂತೆ ಬಿಡುಗಡೆ ಮಾಡಬೇಕಾದ 2186.20 ಕೋಟಿ ರೂ. ಬಿಡುಗಡೆ ಮಾಡದೆ ಅನ್ಯಾಯ ಮಾಡಿದೆ. ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಆರೋಪಿಸಿದ್ದಾರೆ.

ವಿಧಾನ ಪರಿಷತ್ತಿನಲ್ಲಿ ಬರದ ಮೇಲಿನ ಚರ್ಚೆಯ ವೇಳೆ ಮಧ್ಯಪ್ರವೇಶಿಸಿ ಮಾತನಾಡಿ, ರಾಜ್ಯದಲ್ಲಿ 5927 ಗ್ರಾಮ ಪಂಚಾಯತಿಗಳಿದ್ದು, ನಗರಪ್ರದೇಶ ಸಮೀಪ ಇರುವ ಪಂಚಾಯತಿಗಳು ತೆರಿಗೆ ಸಂಗ್ರಹಣೆಯಿಂದ ಸದೃಢವಾಗಿವೆ. ಆದರೆ, ಕಲ್ಯಾಣ ಕರ್ನಾಟಕ, ಉತ್ತರ ಕರ್ನಾಟಕದ ಪಂಚಾಯತಿಗಳು ಹಣವಿಲ್ಲದೆ ನಲುಗಿವೆ. ಕೇಂದ್ರ ಸರ್ಕಾರ ಕೊಡಬೇಕಾದ ಹಣವನ್ನೇ ಕೊಡುತ್ತಿಲ್ಲ. ದೆಹಲಿಯಲ್ಲಿ ಕೇಂದ್ರ ಸಚಿವರಾದ ಶಿವರಾಜ್ ಸಿಂಗ್ ಚವ್ಹಾಣ್, ಲಲನ್ ಸಿಂಗ್ ಹಾಗೂ ವಿ.ಸೋಮಣ್ಣ ಅವರನ್ನು ಖುದ್ದು ಭೇಟಿಮಾಡಿ ಮನವಿ ಸಲ್ಲಿಸಿದರೂ ಪ್ರಯೋಜನವಾಗಲಿಲ್ಲ. ತಾಂತ್ರಿಕ ಕಾರಣ ಮುಂದಿಟ್ಟು ತಡೆಹಿಡಿಯಲಾಗಿದೆ. ಈ ಬಗ್ಗೆ ಸಂಸದರು ಲೋಕಸಭೆಯಲ್ಲಿ ಪ್ರಶ್ನಿಸಿದ್ದಾರಾ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನೀರು ಜೀವಜಲ, ಪ್ರತಿಯೊಬ್ಬರಿಗೂ ನೀರು ಪೂರೈಸಬೇಕಾದ್ದು, ಆಯಾ ಸರ್ಕಾರ ಮತ್ತು ವ್ಯವಸ್ಥೆಯ ಜವಾಬ್ದಾರಿ. ರಾಜ್ಯದಲ್ಲಿ ಮಳೆಯ ಕೊರತೆಯಿಂದ ಬರ ಪರಿಸ್ಥಿತಿ ತಲೆದೋರಿದ್ದು, ಗ್ರಾಮೀಣ ಭಾಗಕ್ಕೆ ನೀರು ಪೂರೈಸುವುದು ಸವಾಲಾಗಿದೆ. ಆದರೂ ಸರ್ಕಾರ ಅಗತ್ಯ ಸಿದ್ಧತೆ ಮಾಡಿಕೊಂಡಿದೆ. ನೀರು ಪೂರೈಕೆಗೆ ಹಣಕಾಸಿನ ಕೊರತೆ ಇಲ್ಲ ಎಂದರು.

ಬರಪೀಡಿತ ತಾಲೂಕು ಘೋಷಣೆಗೆ ಕೇಂದ್ರ ಸರ್ಕಾರ 2020ರಲ್ಲಿ ರೂಪಿಸಿರುವ ಕೈಪಿಡಿಯ ಅಂಶಗಳು ಮತ್ತು ಷರತ್ತುಗಳು ಅವೈಜ್ಞಾನಿಕವಾಗಿದೆ.ಈ ಹಿಂದೆ ಸಿದ್ದರಾಮಯ್ಯ ಅವರ ಸರ್ಕಾರದ ಅವಧಿಯಲ್ಲಿ 12 ಪತ್ರಗಳನ್ನು ಕೇಂದ್ರ ಸರ್ಕಾರಕ್ಕೆ ಬರೆಯಲಾಗಿತ್ತು. ಈಗಲೂ ಕೇಂದ್ರ ಕೃಷಿ ಸಚಿವರಿಗೆ ಈ ನಿಯಮಗಳನ್ನು ಸರಳೀಕರಣ ಮಾಡುವಂತೆ ಪತ್ರ ಬರೆದು ಮನವಿ ಮಾಡಲಾಗಿದೆ. ಕೇಂದ್ರದ ಈ ಕೈಪಿಡಿಯ ನಿಯಮಗಳಿಂದ ಕರ್ನಾಟಕ ರಾಜ್ಯ ಮಾತ್ರವಲ್ಲ ದೇಶಾದ್ಯಂತ ಎಲ್ಲ ರಾಜ್ಯದಲ್ಲೂ, ಬಿಜೆಪಿ ಆಡಳಿತ ರಾಜ್ಯದಲ್ಲೂ ಸಮಸ್ಯೆ ಆಗಿದೆ ಎಂದು ಹೇಳಿದರು.

ಹಿಂದೆ 2023-24ರಲ್ಲಿ ಮಾನದಂಡಗಳ ಆಧಾರದಲ್ಲೇ ಬರ ಘೋಷಣೆ ಮಾಡಿ ಪ್ರಸ್ತಾವನೆ ಸಲ್ಲಿಸಿದ್ದರೂ ಕೇಂದ್ರ ಸರ್ಕಾರ 3400 ಕೋಟಿ ರೂ. ಬಿಡುಗಡೆ ಮಾಡಲಿಲ್ಲ. ಆಗ ಸರ್ವೋನ್ನತ ನ್ಯಾಯಾಲಯಕ್ಕೆ ಹೋಗಬೇಕಾಯಿತು. ನ್ಯಾಯಾಲಯದ ಸೂಚನೆಯಂತೆ ಹಣವನ್ನು ಕೇಂದ್ರ ಬಿಡುಗಡೆ ಮಾಡಿತು. ಬರ ತಾಲೂಕು ಘೋಷಣೆ ವಿಚಾರದಲ್ಲಿ ರಾಜ್ಯ ಸರ್ಕಾರದ ಮೇಲೆ ಗೂಬೆ ಕೂರಿಸಲಾಗುತ್ತಿದೆ. ಇದು ಅಪಪ್ರಚಾರ. ಇದನ್ನು ಅರ್ಥ ಮಾಡಿಕೊಂಡು ಪ್ರತಿಪಕ್ಷಗಳು ಇಂತಹ ಪ್ರಯತ್ನ ಕೈಬಿಡಬೇಕು. ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಇದ್ದು, ಕೈಪಿಡಿಯಲ್ಲಿನ ಷರತ್ತುಗಳನ್ನು ಬದಲಾವಣೆ ಮಾಡಿಸಲು ಪ್ರಯತ್ನ ಮಾಡಬೇಕು ಎಂದು ಖಂಡ್ರೆ ಹೇಳಿದರು.

### ಕೇಂದ್ರ ಸಚಿವರಿಗೆ ಭೇಟಿ ಮಾಡಿ ಮನವಿ ಸಲ್ಲಿಸಿದರೂ ಪ್ರಯೋಜನವಿಲ್ಲ: ಸಚಿವ ಈಶ್ವರ ಖಂಡ್ರೆ



# ಮಹಿಳಾ ಮೀಸಲಾತಿಗಾಗಿ ನವರಾತ್ರಿ ವೇಳೆ ಸಂಸತ್ತಿನ ವಿಶೇಷ ಅಧಿವೇಶನ

**ನವದೆಹಲಿ, ಸೆ. 23:** ಮಹಿಳಾ ಮೀಸಲಾತಿ ಹಾಗೂ ಕ್ಷೇತ್ರ ಪುನರ್ವಿಂಗಡಣೆ ಪ್ರಕ್ರಿಯೆಗೆ ವೇಗ ನೀಡುವ ಉದ್ದೇಶದಿಂದ, ಮುಂಬರುವ ನವರಾತ್ರಿ ಹಬ್ಬದ ಸಂದರ್ಭದಲ್ಲಿ ಕೇಂದ್ರ ಸರ್ಕಾರವು ಸಂಸತ್ತಿನ ವಿಶೇಷ ಅಧಿವೇಶನ ಕರೆಯುವ ಸಾಧ್ಯತೆಯಿದೆ. ಒಂದು ತಿಂಗಳ ಹಿಂದೆಯೇ ಮುಂಗಾರು ಅಧಿವೇಶನ ಮುಗಿದಿದ್ದರೂ, ರಾಷ್ಟ್ರಪತಿಯವರು ಈವರೆಗೂ ಅಧಿವೇಶನವನ್ನು ಅಧಿಕೃತವಾಗಿ ಮುಕ್ತಾಯಗೊಳಿಸದ ಹಿನ್ನೆಲೆಯಲ್ಲಿ ಇಂತಹದ್ದೊಂದು ಊಹಾಪೋಹ ದಟ್ಟವಾಗಿದೆ.

ಅಕ್ಟೋಬರ್ 11ರಿಂದ ಅಕ್ಟೋಬರ್ 20ರವರೆಗೆ ನವರಾತ್ರಿ ಹಬ್ಬ ನಡೆಯಲಿದೆ. ಹಬ್ಬದ ದಿನಾಂಕಗಳನ್ನು ಗಮನದಲ್ಲಿಟ್ಟುಕೊಂಡು ಅಕ್ಟೋಬರ್ 11ರಿಂದ 15ರ ನಡುವೆ ಈ ವಿಶೇಷ ಅಧಿವೇಶನ ನಡೆಸಲು ಕೇಂದ್ರ ಸರ್ಕಾರ ಚಿಂತನೆ ನಡೆಸಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ನವರಾತ್ರಿಯ ಸಂದರ್ಭದಲ್ಲಿ ಮಹಿಳಾ ಮೀಸಲಾತಿ ವಿಷಯವನ್ನು ಕೈಗೆತ್ತಿಕೊಳ್ಳುವುದು 'ನಾರಿ ಶಕ್ತಿ'ಯ ಸಂಕೇತವಾಗಿದೆ. ಇದು ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರ ಪ್ರಾತಿನಿಧ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರದ ಬದ್ಧತೆಯನ್ನು ತೋರಿಸಲು ನೆರವಾಗಲಿದೆ ಎಂದು ರಾಜ್ಯಸಭೆಯ ಹಿರಿಯ ಸಂಸದರೊಬ್ಬರು ಅಭಿಪ್ರಾಯಪಟ್ಟಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಬಳಿಯೂ ಹಿರಿಯ ಬಿಜೆಪಿ ಸಂಸದರೊಬ್ಬರು ಇದೇ ಮನವಿ ಮಾಡಿದ್ದಾರೆ.

ರಾಜಕೀಯ ಲೆಕ್ಕಾಚಾರಗಳ ಪ್ರಕಾರ, ಮುಂಬರುವ 2027ರಲ್ಲಿ ಉತ್ತರ ಪ್ರದೇಶ, ಪಂಜಾಬ್ ಸೇರಿದಂತೆ ಒಟ್ಟು ಏಳು ರಾಜ್ಯಗಳ ವಿಧಾನಸಭೆಗಳಿಗೆ ಚುನಾವಣೆ ನಡೆಯಲಿದೆ. ಈ ಸಂದರ್ಭದಲ್ಲಿ ಮಹಿಳಾ ಮೀಸಲಾತಿ ಜಾರಿಗೆ ಮುಂದಾದರೆ, ಅದು ಮಹಿಳಾ ಮತದಾರರ ಮೇಲೆ ಭಾರಿ ಸಕಾರಾತ್ಮಕ ಪ್ರಭಾವ ಬೀರಬಹುದು ಎಂಬುದು ಎನ್‌ಡಿಎ ಮೈತ್ರಿಕೂಟದ ಸಂಸದರ ವಿಶ್ವಾಸವಾಗಿದೆ.

ಈ ವಿಚಾರವಾಗಿ ಸರ್ಕಾರ ಈಗಾಗಲೇ ವಿರೋಧ ಪಕ್ಷಗಳ ನಾಯಕರೊಂದಿಗೂ ಪ್ರಾಥಮಿಕ ಚರ್ಚೆ ನಡೆಸಿದೆ. ವಿಶೇಷ ಅಧಿವೇಶನ ಕರೆಯುವ ಆಯ್ಕೆ ಇನ್ನೂ ಮುಕ್ತವಾಗಿದ್ದರೂ, ದಿನಾಂಕ ಹಾಗೂ ಶಾಸಕಾಂಗದ ಪ್ರಕ್ರಿಯೆಗಳ ಬಗ್ಗೆ ಯಾವುದೇ ಅಂತಿಮ ನಿರ್ಧಾರವಾಗಿಲ್ಲ. ಒಂದು ವೇಳೆ ಅಧಿವೇಶನ ನಿಗದಿಯಾದರೆ, ಸಂಸದರಿಗೆ ತಮ್ಮ ನವರಾತ್ರಿ ಪೂಜಾ ವಿಧಿವಿಧಾನಗಳನ್ನು ಯೋಜಿಸಿಕೊಳ್ಳಲು ಅನುಕೂಲವಾಗುವಂತೆ ಅಕ್ಟೋಬರ್ ಮೊದಲ ವಾರದಲ್ಲೇ ಅಧಿಕೃತ ಪ್ರಕಟಣೆ ಹೊರಬೀಳುವ ಸಾಧ್ಯತೆಯಿದೆ.

ಲೋಕಸಭೆ ಮತ್ತು ವಿಧಾನ ಸಭೆಗಳಲ್ಲಿ ಮಹಿಳೆಯರಿಗೆ ಶೇ. 33ರಷ್ಟು (ಮೂರನೇ ಒಂದು ಭಾಗ) ಮೀಸಲಾತಿ ಕಲ್ಪಿಸುವ ಐತಿಹಾಸಿಕ 'ನಾರಿಶಕ್ತಿ ವಂದನ್ ಅಧಿನಿಯಮ'ವನ್ನು 2023ರಲ್ಲೇ ಅಂಗೀಕರಿಸಲಾಗಿದೆ. ಆದರೆ, ಜನಗಣತಿ ಮತ್ತು ಕ್ಷೇತ್ರ ಪುನರ್ವಿಂಗಡಣೆ ಪ್ರಕ್ರಿಯೆ ಪೂರ್ಣಗೊಂಡ ಬಳಿಕವಷ್ಟೇ ಇದು ಜಾರಿಯಾಗಬೇಕಿದೆ. ಈ ಪ್ರಕ್ರಿಯೆಯನ್ನು ಚುರುಕುಗೊಳಿಸಲು, ಹಾಲಿ ಇರುವ ಜನಗಣತಿ ದತ್ತಾಂಶಗಳ ಆಧಾರದ ಮೇಲೆಯೇ ಮೀಸಲಾತಿ ಜಾರಿಗೆ ತರುವ ಉದ್ದೇಶದಿಂದ ಸರ್ಕಾರವು ಇದೇ 2026ರ ಏಪ್ರಿಲ್‌ನಲ್ಲಿ ಕೆಲವು ಸಾಂವಿಧಾನಿಕ ಮತ್ತು ಪುನರ್ವಿಂಗಡಣೆಯ ಪ್ರಸ್ತಾವನೆಗಳನ್ನು ಮಂಡಿಸಿತ್ತು.

ಇದೇ ವೇಳೆ, ಮುಂಗಾರು ಅಧಿವೇಶನವನ್ನು ಅಧಿಕೃತವಾಗಿ ಕೊನೆಗೊಳಿಸದೆ ವಿಳಂಬ ಮಾಡುತ್ತಿರುವ ಸರ್ಕಾರದ ಕ್ರಮವನ್ನು ಕಾಂಗ್ರೆಸ್ ಪ್ರಶ್ನಿಸಿದೆ. ಕ್ಷೇತ್ರ ಪುನರ್ವಿಂಗಡಣೆ ಮಸೂದೆಗೆ ಸಂಸತ್ತಿನಲ್ಲಿ ಅಗತ್ಯವಿರುವ ಮೂರನೇ ಎರಡರಷ್ಟು ಬಹುಮತವನ್ನು ಕಲೆಹಾಕಲು ಗೃಹ ಸಚಿವ ಅಮಿತ್ ಶಾ ಅವರು ಕಾಯುತ್ತಿದ್ದಾರೆಯೇ ಎಂದು ಕಾಂಗ್ರೆಸ್ ನಾಯಕರು ಅನುಮಾನ ವ್ಯಕ್ತಪಡಿಸಿದ್ದಾರೆ.



ನವದೆಹಲಿಯಲ್ಲಿ ಬುಧವಾರ ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಸಮ್ಮುಖದಲ್ಲಿ, ಭಾರತೀಯ ವಾಯುಪಡೆಗಾಗಿ 160 'ಸ್ಯಾಟಲೈಟ್ ಸ್ಮಾರ್ಟ್ ಆಂಟಿ-ಏರ್‌ಫೀಲ್ಡ್ ವೆಪನ್ಸ್' ಖರೀದಿಸಲು ರಕ್ಷಣಾ ಸಚಿವಾಲಯವು ಬಿಡಿಎಲ್ ಜೊತೆಗೆ 811 ಕೋಟಿ ರೂ. ಮೌಲ್ಯದ ಒಪ್ಪಂದಕ್ಕೆ ಸಹಿ ಹಾಕಿದೆ.

# ಚುನಾವಣಾ ಆಯುಕ್ತರ ನೇಮಕ ಕಾಯ್ದೆ ಪ್ರಶ್ನೆ ಸುಪ್ರೀಂ ಕೋರ್ಟ್‌ನಲ್ಲಿ ಭಿನ್ನಾಭಿಪ್ರಾಯ

**ನವದೆಹಲಿ, ಸೆ.23:** ಮುಖ್ಯ ಚುನಾವಣಾ ಆಯುಕ್ತ ಹಾಗೂ ಚುನಾವಣಾ ಆಯುಕ್ತರ ನೇಮಕಾತಿಗೆ ಸಂಬಂಧಿಸಿದ 2023ರ ಕಾಯ್ದೆಯ ಸಾಂವಿಧಾನಿಕ ಮಾನ್ಯತೆ ಪ್ರಶ್ನಿಸಿ ಸಲ್ಲಿಸಲಾಗಿರುವ ಅರ್ಜಿಗಳನ್ನು ದೊಡ್ಡ ಪೀಠಕ್ಕೆ ವರ್ಗಾಯಿಸುವ ವಿಚಾರದಲ್ಲಿ ಸುಪ್ರೀಂ ಕೋರ್ಟ್‌ನ ಇಬ್ಬರು ನ್ಯಾಯಮೂರ್ತಿಗಳ ಪೀಠದಲ್ಲಿ ಭಿನ್ನಾಭಿಪ್ರಾಯ ವ್ಯಕ್ತವಾಗಿದೆ.




ನ್ಯಾಯಮೂರ್ತಿ ದೀಪಂಕರ್ ದತ್ತ ಮತ್ತು ನ್ಯಾಯಮೂರ್ತಿ ಸತೀಶ್ ಚಂದ್ರ ಶರ್ಮಾ ಅವರ ಪೀಠವು ಈ ಅರ್ಜಿಗಳ ವಿಚಾರಣೆ ನಡೆಸಿತ್ತು. ಕೇಂದ್ರ ಸರ್ಕಾರವು ಸಂವಿಧಾನದ 145(3)ನೇ ವಿಧಿ ಅನ್ವಯ ಪ್ರಕರಣವನ್ನು ಕನಿಷ್ಠ ಐವರು ನ್ಯಾಯಮೂರ್ತಿಗಳ ಸಂವಿಧಾನ ಪೀಠಕ್ಕೆ ವರ್ಗಾಯಿಸುವಂತೆ ಮನವಿ ಮಾಡಿತ್ತು.

ನ್ಯಾಯಮೂರ್ತಿ ದೀಪಂಕರ್ ದತ್ತ ಅವರು ಪ್ರಕರಣವನ್ನು ದೊಡ್ಡ ಪೀಠಕ್ಕೆ ವರ್ಗಾಯಿಸುವ ಅಗತ್ಯವಿಲ್ಲ ಎಂಬ ಅಭಿಪ್ರಾಯ ವ್ಯಕ್ತಪಡಿಸಿದರೆ, ನ್ಯಾಯಮೂರ್ತಿ ಸತೀಶ್ ಚಂದ್ರ ಶರ್ಮಾ ಅವರು ಪ್ರಕರಣದಲ್ಲಿ ಮಹತ್ವದ ಸಾಂವಿಧಾನಿಕ ಕಾನೂನು ಪ್ರಶ್ನೆಗಳು ಉದ್ಭವಿಸಿರುವುದರಿಂದ ದೊಡ್ಡ ಪೀಠದ ವಿಚಾರಣೆ ಅಗತ್ಯ ಎಂದು ಅಭಿಪ್ರಾಯಪಟ್ಟರು.

2023ರ ಕಾಯ್ದೆಯಡಿ CEC ಮತ್ತು ECಗಳ ನೇಮಕಾತಿ ಸಮಿತಿಯಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿಯ ಬದಲಿಗೆ ಪ್ರಧಾನಮಂತ್ರಿಯಿಂದ ನಾಮನಿರ್ದೇಶನಗೊಳ್ಳುವ ಕೇಂದ್ರ ಸಚಿವರನ್ನು ಸೇರಿಸಲಾಗಿದೆ. ಸಮಿತಿಯಲ್ಲಿ ಪ್ರಧಾನಿ, ಪ್ರಧಾನಿಯಿಂದ ನಾಮನಿರ್ದೇಶನಗೊಳ್ಳುವ ಕೇಂದ್ರ ಸಚಿವ ಹಾಗೂ ಲೋಕಸಭೆಯ ಪ್ರತಿಪಕ್ಷ ನಾಯಕರು ಸದಸ್ಯರಾಗಿರುತ್ತಾರೆ. ಈ ವ್ಯವಸ್ಥೆಯು ಚುನಾವಣಾ ಆಯೋಗದ ಸ್ವಾಯತ್ತತೆಯ ಮೇಲೆ ಪರಿಣಾಮ ಬೀರುತ್ತದೆ ಎಂದು ಅರ್ಜಿದಾರರು ವಾದಿಸಿದ್ದಾರೆ.

ಭಿನ್ನಾಭಿಪ್ರಾಯದ ಹಿನ್ನೆಲೆಯಲ್ಲಿ ಪ್ರಕರಣವನ್ನು ಭಾರತದ ಮುಖ್ಯ ನ್ಯಾಯಮೂರ್ತಿಯ ಮುಂದೆ ಇರಿಸಿ, ಸೂಕ್ತ ಸಂಖ್ಯೆಯ ನ್ಯಾಯ ಮೂರ್ತಿಗಳ ಸಂವಿಧಾನ ಪೀಠ ರಚಿಸುವ ಕುರಿತು ನಿರ್ಧರಿಸಲು ಪೀಠ ಸೂಚಿಸಿದೆ. ಪ್ರಕರಣವನ್ನು ಮೂರು ನ್ಯಾಯ ಮೂರ್ತಿಗಳ ಪೀಠಕ್ಕೆ ಕಳುಹಿಸುವುದರಿಂದ ಮತ್ತಷ್ಟು ವಿಳಂಬವಾಗಬಹುದು ಎಂಬ ಅಭಿಪ್ರಾಯವೂ ದಾಖಲಾಗಿದೆ.

# ಜ್ಞಾನೇಶ್ ಕುಮಾರ್ ಏಕವ್ಯಕ್ತಿ ಸರ್ವಾಧಿಕಾರಿ: ವಜಾಕ್ಕೆ ಆಗ್ರಹ

**ನವದೆಹಲಿ, ಸೆ.23:** ಮುಖ್ಯ ಚುನಾವಣೆ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ಅವರ ನೇತೃತ್ವದಲ್ಲಿ ಭಾರತೀಯ ಚುನಾವಣಾ ಆಯೋಗವು ಏಕವ್ಯಕ್ತಿ ಸರ್ವಾಧಿಕಾರದಂತೆ ಕಾರ್ಯಾಚರಿಸುತ್ತಿದೆ ಎಂದು ಆರೋಪಿಸಿರುವ ಪ್ರತಿಪಕ್ಷಗಳು, ಅವರನ್ನು ಮಹಾಭಿಯೋಗ ನಡೆಸಿ ತಕ್ಷಣವೇ ಹುದ್ದೆಯಿಂದ ವಜಾಗೊಳಿಸಬೇಕು ಎಂದು ತೀವ್ರ ವಾಗ್ದಾಳಿ ನಡೆಸಿವೆ.

ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಆಯೋಗದ ಇತರ ಇಬ್ಬರು ಚುನಾವಣಾ ಆಯುಕ್ತರು ಗಂಭೀರ ಆಕ್ಷೇಪಣೆಗಳನ್ನು ವ್ಯಕ್ತಪಡಿಸಿದ್ದಾರೆ ಎಂಬ ಮಾಧ್ಯಮ ವರದಿಯನ್ನು ಆಧರಿಸಿ ವಿಪಕ್ಷ ನಾಯಕರು ಈ ವಾಗ್ದಾಳಿ ನಡೆಸಿದ್ದಾರೆ.

ರಾಷ್ಟ್ರೀಯ ಪತ್ರಿಕೆಯ ತನಿಖಾ ವರದಿ ಪ್ರಕಾರ ಎಸ್‌ಐಆರ್ ಪ್ರಕ್ರಿಯೆ ಮತ್ತು ಆಡಳಿತಾತ್ಮಕ ನಿರ್ಧಾರಗಳಲ್ಲಿ ಮುಖ್ಯ ಚುನಾವಣೆ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ಅವರು ತಮ್ಮ ಸಹೋದ್ಯೋಗಿ ಆಯುಕ್ತರನ್ನು ಕತ್ತಲಲ್ಲಿಟ್ಟು ಏಕಪಕ್ಷೀಯ ನಿರ್ಧಾರಗಳನ್ನು ತೆಗೆದುಕೊಂಡಿದ್ದಾರೆ. ಕಳೆದ 10 ತಿಂಗಳುಗಳಲ್ಲಿ ಇತರ ಇಬ್ಬರು ಚುನಾವಣಾ ಆಯುಕ್ತರಾದ ಸುಖ್ಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಬಲಿಷ್ಠವಾಗಿ ಹಾಗೂ ಅಧಿಕೃತವಾಗಿ ಕನಿಷ್ಠ



14 ಬಾರಿ ತಮ್ಮ ಆಕ್ಷೇಪಣೆಗಳನ್ನು ದಾಖಲಿಸಿದ್ದಾರೆ ಎಂದು ವರದಿಯಾಗಿದೆ.

ಹೊಸ ಮತದಾರರ ಸೇರ್ಪಡೆ, ಸಾಮೂಹಿಕ ಹೆಸರು ತೆಗೆದುಹಾಕುವುದು (ಮತದಾರರ ಪಟ್ಟಿ ಅಳಿಸುವಿಕೆ) ಮತ್ತು ಫಾರ್ಮ್ 6 ಬದಲಾವಣೆಗಳನ್ನು 'ಅನಧಿಕೃತ ಮತ್ತು ಕಾನೂನುಬಾಹಿರ' ಎಂದು ಆಯುಕ್ತರು ಆಕ್ಷೇಪಿಸಿದ್ದಾರೆ ಎಂಬ ಸಂಗತಿ ಹೊರಬಿದ್ದ ಬೆನ್ನಲ್ಲೇ ವಿರೋಧ ಪಕ್ಷಗಳು ಕೇಂದ್ರ ಸರ್ಕಾರ ಮತ್ತು ಆಯೋಗದ ವಿರುದ್ಧ ಹರಿಹಾಯ್ದಿವೆ.

ಸಿಪಿಐಎಂ ರಾಜ್ಯಸಭಾ ಸದಸ್ಯ ಜಾನ್ ಬ್ರಿಟ್ಟಾಸ್, ಇದು ಇನ್ಮುಂದೆ ಚುನಾವಣಾ ಆಯೋಗವಾಗಿ ಉಳಿದಿಲ್ಲ. ಸಿಇಸಿ ಜ್ಞಾನೇಶ್ ಕುಮಾರ್ ಅವರ ಅಡಿಯಲ್ಲಿ ಏಕವ್ಯಕ್ತಿ ಸರ್ವಾಧಿಕಾರವಾಗಿ ಬದಲಾಗಿದೆ. ಆಯೋಗದ ಇತರ ಇಬ್ಬರು ಆಯುಕ್ತರೇ ಈ ನಿರ್ಧಾರಗಳು ಅಕ್ರಮ ಎಂದ ಮೇಲೆ ಸಂಸತ್ತು ತಕ್ಷಣವೇ ಸಿಇಸಿ ವಜಾ ಪ್ರಕ್ರಿಯೆಯನ್ನು ಆರಂಭಿಸಬೇಕು. ಸುಪ್ರೀಂ ಕೋರ್ಟ್ ತಕ್ಷಣವೇ ಈ ಎಸ್‌ಐಆರ್ ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು ಎಂದು ಆಗ್ರಹಿಸಿದ್ದಾರೆ. ಟಿಎಂಸಿ ರಾಜ್ಯಸಭಾ ಸಂಸದ ಡೆರೆಕ್ ಒಬ್ರೇನ್, ಅಂದಾಜು 5 ತಿಂಗಳ ಹಿಂದೆಯೇ 60ಕ್ಕೂ ಹೆಚ್ಚು ರಾಜ್ಯಸಭಾ ಸಂಸದರು ಸಿಇಸಿ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸಲು ನೋಟಿಸ್ ನೀಡಿದ್ದರು. ಈಗ ಇಬ್ಬರು ಆಯುಕ್ತರೇ ವಿರೋಧ ವ್ಯಕ್ತಪಡಿಸಿರುವುದು ಬಹಿರಂಗವಾಗಿರುವುದರಿಂದ, ಪ್ರಜಾಪ್ರಭುತ್ವವನ್ನು ಉಳಿಸಲು ಈ ನೋಟಿಸ್ ಆಧರಿಸಿ ವಜಾ ಪ್ರಕ್ರಿಯೆಯನ್ನು ಜಾರಿಗೆ ತರುವ ಸಮಯ ಬಂದಿದೆ ಎಂದು ತಿಳಿಸಿದ್ದಾರೆ.

ಇನ್ನು ರಾಷ್ಟ್ರೀಯ ಪತ್ರಿಕೆಯ ವರದಿಯು ಚುನಾವಣಾ ಆಯೋಗದ ವಿಶ್ವಾಸಾರ್ಹತೆ ಮತ್ತು ನೈತಿಕತೆಯನ್ನು ಸಿಇಸಿ ಹೇಗೆ ಸಂಪೂರ್ಣವಾಗಿ ನಾಶಪಡಿಸಿದ್ದಾರೆ ಎಂಬುದನ್ನು ಬಯಲು ಮಾಡಿದೆ. ಈ ಆಘಾತಕಾರಿ ಸಂಗತಿಗಳ ಕುರಿತು ಪಕ್ಷದ ಪರವಾಗಿ ಅಭಿಷೇಕ್ ಸಿಂಘ್ವಿ ಅವರು ವಿವರವಾಗಿ ಮಾತನಾಡಲಿದ್ದಾರೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಹೇಳಿದ್ದಾರೆ.

ಕಾಂಗ್ರೆಸ್ ಲೋಕಸಭಾ ಸಂಸದ ಮನೀಷ್ ತಿವಾರಿ, ವರದಿಯಲ್ಲಿರುವ ಅಂಶಗಳು ನಿಜವಾಗಿದ್ದರೆ, ಚುನಾವಣಾ ಆಯೋಗವನ್ನು ಹಿಂಬಾಗಿಲಿನಿಂದ ನಡೆಸಲು ಅದೃಶ್ಯ ಹಸ್ತವೊಂದು ಕೆಲಸ ಮಾಡುತ್ತಿದೆ ಎಂಬುದು ಸ್ಪಷ್ಟವಾಗುತ್ತದೆ. ಬಹುಮತವಿಲ್ಲದೆ, ನಿಯಮಗಳನ್ನು ಗಾಳಿಗೆ ತೂರಿ ತೆಗೆದುಕೊಂಡ ನಿರ್ಧಾರಗಳು ಅಕ್ರಮ. ಇದು ಸಿಇಸಿ ವಿರುದ್ಧ ಮಹಾಭಿಯೋಗ ನಡೆಸಲು ಸೂಕ್ತವಾದ ಪ್ರಕರಣವಾಗಿದೆ ಎಂದಿದ್ದಾರೆ.

> ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ತಮ್ಮದೇ ಇಬ್ಬರು ಸಹೋದ್ಯೋಗಿಗಳಿಂದಾಗಿ ತೀವ್ರ ಮುಜುಗರ ಕ್ಕೀಡಾಗಿದ್ದಾರೆ ಎಂದು ಆರೋಪಿಸಿರುವ ಕಾಂಗ್ರೆಸ್, ಅವರು ಹುದ್ದೆಯಲ್ಲಿ ಮುಂದುವರಿಯುವ ಎಲ್ಲಾ ಆಡಳಿತಾತ್ಮಕ ಮತ್ತು ನೈತಿಕ ಹಕ್ಕನ್ನು ಕಳೆದುಕೊಂಡಿದ್ದಾರೆ ಎಂದು ಬುಧವಾರ ಹೇಳಿದೆ; ಅಲ್ಲದೆ, ವಿರೋಧ ಪಕ್ಷಗಳು ಮುಖ್ಯ ಚುನಾವಣಾ ಆಯುಕ್ತರ ವಿರುದ್ಧ ದೋಷಾರೋಪಣೆ ಪ್ರಕ್ರಿಯೆಯನ್ನು ಕೈಗೊಳ್ಳುವಂತೆ ಒತ್ತಾಯಿಸಲಿವೆ.

# ಎಸ್‌ಐಆರ್ 3ನೇ ಹಂತ: 6.15 ಕೋಟಿ ಮತದಾರರ ಹೆಸರು ಡಿಲೀಟ್

**ನವದೆಹಲಿ, ಸೆ.23:** ಚುನಾವಣಾ ಆಯೋಗದ ವಿಶೇಷ ತೀವ್ರ ಪರಿಷ್ಕರಣೆ 3ನೇ ಹಂತದಲ್ಲಿ ಇದುವರೆಗೆ ಪ್ರಕಟವಾಗಿರುವ ಕರಡು ಮತದಾರರ ಪಟ್ಟಿಗಳ ಪ್ರಕಾರ 6,15,07,245 ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ. ಇದು ಪರಿಷ್ಕರಣೆಗೂ ಮುನ್ನ ಇದ್ದ ಮತದಾರರ ಪೈಕಿ ಸುಮಾರು 17.04% ಆಗಿದೆ.

ಮಹಾರಾಷ್ಟ್ರದಲ್ಲಿ 2.06 ಕೋಟಿ, ಕರ್ನಾಟಕದಲ್ಲಿ 1.07 ಕೋಟಿ, ತೆಲಂಗಾಣ 73.39 ಲಕ್ಷ, ದೆಹಲಿ 47.56 ಲಕ್ಷ, ಆಂಧ್ರಪ್ರದೇಶ 44.89 ಲಕ್ಷ, ಜಾರ್ಖಂಡ್ 43.61 ಲಕ್ಷ, ಹರಿಯಾಣ 33.83 ಲಕ್ಷ, ಪಂಜಾಬ್ 20.66 ಲಕ್ಷ, ಒಡಿಶಾ 20.12 ಲಕ್ಷ, ಉತ್ತರಾಖಂಡ 8.26 ಲಕ್ಷ, ಅರುಣಾಚಲ ಪ್ರದೇಶ, 1.69 ಲಕ್ಷ, ಮಣಿಪುರ 1.58 ಲಕ್ಷ, ಮೇಘಾಲಯ 1.80 ಲಕ್ಷ, ಚಂಡೀಗಢ 66 ಸಾವಿರಕ್ಕೂ ಹೆಚ್ಚು, ಮಿಜೋರಂನಲ್ಲಿ 46 ಸಾವಿರಕ್ಕೂ ಹೆಚ್ಚು, ಸಿಕ್ಕಿಂ 37 ಸಾವಿರಕ್ಕೂ ಹೆಚ್ಚು ಹೆಸರು ಪಟ್ಟಿಯಿಂದ ತೆಗೆದಿದೆ.

ಶೇಕಡಾವಾರು ಪ್ರಮಾಣದಲ್ಲಿ ಕರಡು ಪಟ್ಟಿಯಲ್ಲಿ ದೆಹಲಿಯಲ್ಲಿ ಸುಮಾರು 32.78% ಹೆಸರುಗಳು ಕಡಿಮೆಯಾಗಿವೆ. ಮಹಾರಾಷ್ಟ್ರದಲ್ಲಿ ಒಟ್ಟು ಸಂಖ್ಯೆಯ ದೃಷ್ಟಿಯಿಂದ ಅತಿ ಹೆಚ್ಚು, ಸುಮಾರು 2.06 ಕೋಟಿ ಹೆಸರುಗಳನ್ನು ತೆಗೆದುಹಾಕಲಾಗಿದೆ. ಕರ್ನಾಟಕದಲ್ಲಿ ಸುಮಾರು 1.07 ಕೋಟಿ ಹೆಸರುಗಳು ಡಿಲೀಟ್ ಆಗಿವೆ.

ಇದರ ನಡುವೆ ಸುಮಾರು 5.43 ಕೋಟಿ ಮತದಾರರಿಗೆ ಹೆಚ್ಚುವರಿ ದಾಖಲೆಗಳನ್ನು ಸಲ್ಲಿಸುವಂತೆ ನೋಟಿಸ್ ನೀಡಲಾಗಿದೆ ಎಂಬ ಅಂಕಿ ವರದಿಯಾಗಿದೆ. ನೋಟಿಸ್ ಪಡೆದವರ ಹೆಸರುಗಳು ದಾಖಲೆ ಪರಿಶೀಲನೆ ಮತ್ತು ಪ್ರಕ್ರಿಯೆಯ ನಂತರ ಅಂತಿಮ ಪಟ್ಟಿಯಲ್ಲಿ ಉಳಿಯಬಹುದು ಅಥವಾ ಬದಲಾಗಬಹುದು.

ಚುನಾವಣಾ ಆಯೋಗದ ಪ್ರಕಾರ, ಖಙಖ 3ನೇ ಹಂತದಲ್ಲಿ 16 ರಾಜ್ಯಗಳು ಮತ್ತು 3 ಕೇಂದ್ರಾಡಳಿತ ಪ್ರದೇಶಗಳು ಒಳಗೊಂಡಿದ್ದು, 36.73 ಕೋಟಿ ಮತದಾರರ ಮನೆಮನೆಗೆ ತೆರಳಿ ಪರಿಶೀಲನೆ ನಡೆಸಲಾಗಿದೆ.

# ಇಶಾನ್ ಆನಂದ್ ಬಿಎಸ್‌ಪಿಯ ನೂತನ ರಾಷ್ಟ್ರೀಯ ಸಂಯೋಜಕ

**ನವದೆಹಲಿ, ಸೆ.23:** ನಾಲ್ಕು ಬಾರಿ ಉತ್ತರ ಪ್ರದೇಶದ ಮುಖ್ಯಮಂತ್ರಿಯಾಗಿದ್ದ ಮಾಯಾವತಿ ಅವರು ತಮ್ಮ ಉತ್ತರಾಧಿಕಾರಿಯಾಗಿ ಕಿರಿಯ ಸೋದರಳಿಯ ಇಶಾನ್ ಆನಂದ್ ಅವರನ್ನು ಆಯ್ಕೆ ಮಾಡಿಕೊಂಡಿದ್ದು, ಬುಧವಾರ(ಸೆ. 23) ಅವರನ್ನು ಬಿಎಸ್‌ಪಿ ರಾಷ್ಟ್ರೀಯ ಸಂಯೋಜಕರಾಗಿ ನೇಮಕ ಮಾಡಿದ್ದಾರೆ.



ಮಾಯಾವತಿ ನೇತೃತ್ವದಲ್ಲಿ ಪಕ್ಷದ ಪ್ರಧಾನ ಕಚೇರಿಯಲ್ಲಿ ನಡೆದ ಬಿಎಸ್‌ಪಿ ರಾಷ್ಟ್ರೀಯ ಕಾರ್ಯಕಾರಿಣಿ ಸಭೆಯಲ್ಲಿ ಇಶಾನ್ ಅವರನ್ನು ರಾಷ್ಟ್ರೀಯ ಸಂಯೋಜಕರಾಗಿ ನೇಮಕ ಮಾಡಿದ್ದನ್ನು ಘೋಷಣೆ ಮಾಡಿದ್ದಾರೆ. ಕಿರಿಯ ಸಹೋದರ ಬಿಎಸ್‌ಪಿ ರಾಷ್ಟ್ರೀಯ ಉಪಾಧ್ಯಕ್ಷ ಆನಂದ್‌ಕುಮಾರ್ ಅವರ ಪುತ್ರನಾಗಿರುವ ಇಶಾನ್, ಎಲ್‌ಎಲ್‌ಎಂ ಮತ್ತು ಕಾನೂನು ಅಧ್ಯಯನ ಮಾಡಿದ್ದಾರೆ.

# ಎಂ.ಸಿ.ಸಿ.ಬ್ಯಾಂಕ್‌ನ 108ನೇ ವಾರ್ಷಿಕ ಮಹಾಸಭೆ: 10.07 ಕೋಟಿ ರೂ. ನಿವ್ವಳ ಲಾಭ; 10% ಲಾಭಾಂಶ ಘೋಷಣೆ

**ಮುಂಬಯಿ, ಸೆ.23:** ಎಂ.ಸಿ.ಸಿ.ಬ್ಯಾಕ್‌ನಲ್ಲಿ 2025–26ನೇ ಸಾಲಿನಲ್ಲಿರೂ.10.07 ಕೋಟಿ ನಿವ್ವಳ ಲಾಭ ದಾಖಲಿಸಿದ್ದು, ಬ್ಯಾಂಕಿನ 108ನೇ ವಾರ್ಷಿಕ ಮಹಾಸಭೆಯಲ್ಲಿ ಸದಸ್ಯರಿಗೆ 10% ಡಿವಿಡೆಂಡ್ ಘೋಷಿಸಲಾಯಿತು.

ಬ್ಯಾಂಕಿನ 108ನೇ ವಾರ್ಷಿಕ ಮಹಾಸಭೆಯು 20 ಸೆಪ್ಟೆಂಬರ್ 2026ರ ಭಾನುವಾರದಂದು ಬೆಳಿಗ್ಗೆ 11.00 ಗಂಟೆಗೆ ಲೊಯೊಲಾ ಆಡಿಟೋರಿಯಂ, ಸಂತ ಅಲೋಶಿಯಸ್ ಪಿ.ಯು.ಕಾಲೇಜು, ಕೊಡಿಯಾಲ ಬೈಲ್, ಮಂಗಳೂರು ಇಲ್ಲಿ ನಡೆಯಿತು. ಬ್ಯಾಂಕಿನ ಅಧ್ಯಕ್ಷರಾದ ಸಹಕಾರ ರತ್ನ ಅನಿಲ್ ಲೋಬೊ ಅವರು ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಸಭೆಯ ಆರಂಭದಲ್ಲಿ ದೀಪ ಬೆಳಗಿಸುವ ಕಾರ್ಯಕ್ರಮವನ್ನು ಬ್ಯಾಂಕಿನ ಅಧ್ಯಕ್ಷ ಸಹಕಾರ ರತ್ನ ಅನಿಲ್ ಲೋಬೊ ಅವರೊಂದಿಗೆ ವಿಶೇಷ ಆಹ್ವಾನಿತರು ಹಾಗೂ ಗಣ್ಯರು ನೆರವೇರಿಸಿದರು. ಇವರಲ್ಲಿ ಎಂ.ಪಿ.ನೊರೊನ್ಹ, ಎಂ.ಸಿ.ಸಿ.ಬ್ಯಾಂಕಿನ ಮಾಜಿ ಅಧ್ಯಕ್ಷರು ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಸರ್ಕಾರಿ ವಕೀಲರು; ರೋಹನ್ ಮೊಂತೆರೋ, ವ್ಯವಸ್ಥಾಪಕ ನಿರ್ದೇಶಕರು, ರೋಹನ್ ಕ್ಕಾರ್ಪೊರೇಶನ್; ಸಂತೋಷ್ ಡಿಸೋಜ, ಅಧ್ಯಕ್ಷರು, ಕಥೋಲಿಕ್ ಸಭಾ ಮಂಗಳೂರು, ಆಲ್ವಿನ್ ಕ್ವಾಡ್ರಸ್, ಅಧ್ಯಕ್ಷರು, ಆಲ್‌ಇಂಡಿಯಾ ಕ್ಯಾಥೋಲಿಕ್ ಯೂನಿಯನ್, ಕರ್ನಾಟಕ ರಾಜ್ಯ ಹಾಗೂ ರೋನಾಲ್ಡ್ ಗೋಮ್ಸ್, ಅಧ್ಯಕ್ಷರು, ಕ್ಯಾಥೋಲಿಕ್ ಅಸೋಸಿಯಶನ್ ಅಫ್ಸೌಲ್ ಕೆನರಾ ಉಪಸ್ಥಿತರಿದ್ದರು. ನಂತರ ಬ್ಯಾಂಕಿನ ಸ್ಥಾಪಕರಾದ ಪಿ.ಎಫ್.ಎಕ್ಸ್ ಸಾಲ್ಡಾನ್ಹಾ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು.

ಸಭೆಯನ್ನುದ್ದೇಶಿಸಿ ಮಾತನಾಡಿದ ಬ್ಯಾಂಕಿನ ಅಧ್ಯಕ್ಷ ಸಹಕಾರ ರತ್ನ ಅನಿಲ್ ಲೋಬೊ ಅವರು ಬ್ಯಾಂಕಿನ ಸದೃಢ ಹಣಕಾಸು ಪ್ರಗತಿಯನ್ನು ವಿವರಿಸಿದರು. 2025–26ನೇ ಸಾಲಿನಲ್ಲಿ ಬ್ಯಾಂಕ್ 10.07 ಕೋಟಿ ರೂ. ನಿವ್ವಳ ಲಾಭಗಳಿಸಿದ್ದು, ಠೇವಣಿಗಳು 872.88 ಕೋಟಿ ರೂ. ಸುಮಾರು 24% ಬೆಳವಣಿಗೆಯೊಂದಿಗೆ; ಮುಂಗಡ 652.06 ಕೋಟಿ ರೂ. ಸುಮಾರು 22% ಬೆಳವಣಿಗೆಯೊಂದಿಗೆ; ಹಾಗೂ ಕಾರ್ಯನಿರತ ಬಂಡವಾಳ 1,008 ಕೋಟಿ ರೂ. ಸುಮಾರು 22% ಬೆಳವಣಿಗೆಯೊಂದಿಗೆ ತಲುಪಿದೆ ಎಂದು ತಿಳಿಸಿದರು. ಬ್ಯಾಂಕಿನ ಷೇರು ಬಂಡವಾಳ ರೂ. 34.08 ಕೋಟಿ ಇದ್ದು, ನಿವ್ವಳ NPA 1.26%, Provision Coverage Ratio 68.34%, Return on Assets (ROA) 1.00% ಹಾಗೂ 31 ಮಾರ್ಚ್ 2026 ರಂತೆ CRAR 16.53%ರಷ್ಟಿದೆ ಎಂದು ಅವರು ತಿಳಿಸಿದರು. ಬ್ಯಾಂಕಿನ ಒಟ್ಟು ವ್ಯವಹಾರವು 1525 ಕೋಟಿ ರೂ. ಮೀರಿದೆ ಎಂದರು.




ಸದಸ್ಯರಿಗೆ ಶೇ.10 ಲಾಭಾಂಶ ಘೋಷಿಸಲಾಯಿತು. ಲಾಭ ವಿಂಗಡನೆಯನ್ನು ಮಾಡಿ ಸಹಕಾರ ಶಿಕ್ಷಣ ನಿಧಿಗೆ 22,66 ಲಕ್ಷ ರೂ.ಗಳನ್ನು ಕಾದಿರಿಸಲಾಯಿತು.

2018ನೇ ಸಾಲಿನ ನಿರ್ದೇಶಕರ ಚುನಾವಣೆಯ ಸಂದರ್ಭದಲ್ಲಿ ನೀಡಿದ್ದ ಭರವಸೆಗಳನ್ನು ಸ್ಮರಿಸಿದ ಅಧ್ಯಕ್ಷರು, ನೀಡಿದ ಎಲ್ಲಾ ಭರವಸೆಗಳನ್ನು ಈಡೇರಿಸಲಾಗಿದ್ದು, ಕಳೆದ 8 ವರ್ಷಗಳಲ್ಲಿ ಬ್ಯಾಂಕ್ ಗಮನಾರ್ಹ ಪ್ರಗತಿ ಸಾಧಿಸಿದೆ ಎಂದು ತಿಳಿಸಿದರು. ಬ್ಯಾಂಕಿನ ಪುನರುಜ್ಜೀವನಕ್ಕಾಗಿ ಆಡಳಿತ ಮಂಡಳಿಯ ಅಚಲ ಸಂಕಲ್ಪ ಮತ್ತು ಸತತ ಪರಿಶ್ರಮ, ಸದಸ್ಯರು ಹಾಗೂ ಸಿಬ್ಬಂದಿಯ ನಿರಂತರ ಬೆಂಬಲವೇ ಪ್ರಮುಖ ಕಾರಣವೆಂದು ಅವರು ಹೇಳಿದರು. ಬ್ಯಾಂಕ್ Double-Engine ಆಡಳಿತ ವ್ಯವಸ್ಥೆಯಡಿ, Reserve Bank of India ಮತ್ತು State Co-operative Departmentಗಳ ನಿಯಂತ್ರಣ ಹಾಗೂ ಮೇಲ್ವಿಚಾರಣೆಯಲ್ಲಿ ಕಾರ್ಯ ನಿರ್ವಹಿಸುತ್ತಿದೆ ಎಂದು ತಿಳಿಸಿದರು. ಗ್ರಾಹಕರಿಗೆ ಉತ್ತಮ ಸೇವೆ ನೀಡುವ ಉದ್ದೇಶದಿಂದ ಸಿಬ್ಬಂದಿಗೆ ಅಗತ್ಯ ತರಬೇತಿ ಹಾಗೂ ಕಾರ್ಯನಿರ್ವಹಣೆಯಲ್ಲಿ ವಿವಿಧ ಸುಧಾರಣೆಗಳನ್ನು ಜಾರಿಗೆ ತರಲಾಗಿದೆ ಎಂದರು.

ಬ್ಯಾಂಕಿನ ಸ್ಥಾಪಕ ನಾಯಕರ ದೂರದೃಷ್ಟಿ ಮತ್ತು ಸೇವೆಯನ್ನು ಸ್ಮರಿಸಿದ ಅವರು, ಅವರ ಪರಂಪರೆಯನ್ನು ಮುಂದುವರಿಸಿ ಬ್ಯಾಂಕನ್ನು ಆರ್ಥಿಕವಾಗಿ ಸದೃಢ ಹಾಗೂ ಸುಸ್ಥಿರ ಸಹಕಾರಿ ಬ್ಯಾಂಕಾಗಿ ಮುಂದಿನ ಪೀಳಿಗೆಗೆ ಹಸ್ತಾಂತರಿಸುವುದು ನಮ್ಮ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಸದಸ್ಯರು ಬ್ಯಾಂಕಿನೊಂದಿಗೆ ನಿಷ್ಠೆಯಿಂದ ಮುಂದುವರಿಯುವಂತೆ ಹಾಗೂ ಪರಿಶೀಲಿಸದ ಮಾಹಿತಿ ಅಥವಾ ವದಂತಿಗಳನ್ನು ನಂಬದೆ, ರಚನಾತ್ಮಕ ಸಲಹೆಗಳನ್ನು ನೇರವಾಗಿ ಬ್ಯಾಂಕಿಗೆ ನೀಡುವಂತೆ ಅಧ್ಯಕ್ಷರು ಮನವಿ ಮಾಡಿದರು.



ವಿಸ್ತರಣಾ ಯೋಜನೆಯಡಿ ಮುಂದಿನ ವಾರ್ಷಿಕ ಮಹಾಸಭೆಯೊಳಗೆ 25 ಶಾಖೆಗಳು ಮತ್ತು 20 ATMs ಹೊಂದುವ ಗುರಿಯನ್ನು ತಿಳಿಸಿದ ಅವರು, 24ನೇ ಶಾಖೆಯನ್ನು ಪಡೀಲ್‌ನಲ್ಲಿ ಹಾಗೂ 25ನೇ ಶಾಖೆಯನ್ನು ಕದ್ರಿ ಅಥವಾ ಬಿಜೈನಲ್ಲಿ 2026–27ನೇ ಹಣಕಾಸು ವರ್ಷದ ಅಂತ್ಯದೊಳಗೆ ಸ್ಥಾಪಿಸಲಾಗುವುದು ಎಂದರು. MCC Bank ಒಂದು ಕುಟುಂಬವಾಗಿದ್ದು, ಆಡಳಿತ ಮಂಡಳಿ, ಸದಸ್ಯರು ಮತ್ತು ಸಿಬ್ಬಂದಿಯ ಸಹಕಾರದೊಂದಿಗೆ ಬ್ಯಾಂಕನ್ನು ಮತ್ತಷ್ಟು ಉನ್ನತ ಮಟ್ಟಕ್ಕೆ ಕೊಂಡೊಯ್ಯಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು. ಸದಸ್ಯರು ಬ್ಯಾಂಕಿನ ಸೇವೆಗಳನ್ನು ಬಳಸಿಕೊಂಡು Brand Ambassadors ಆಗಬೇಕೆಂದು ಹಾಗೂ Current Accounts ಸೇರಿದಂತೆ ಇತರ ಬ್ಯಾಂಕಿಂಗ್ ಖಾತೆಗಳನ್ನು ತೆರೆಯುವ ಮೂಲಕ ಬ್ಯಾಂಕಿನ ಬೆಳವಣಿಗೆಗೆ ಸಹಕರಿಸುವಂತೆ ಕರೆ ನೀಡಿದರು.

ಬ್ಯಾಂಕಿನ Brand Image ಬಲಪಡಿಸುವ ಉದ್ದೇಶದಿಂದ January 2027ರಲ್ಲಿ ಹೊಸ Logo ಪರಿಚಯಿಸಲಾಗುವುದು ಹಾಗೂ ಹೊಸ Website ಈಗಾಗಲೇ ಪ್ರಾರಂಭಿಸಲಾಗಿದೆ ಎಂದು ತಿಳಿಸಿದರು. ATMs, Cash Deposit Machines ಮತ್ತು UPI ಜಾರಿಗೆ ತರುವ ಕಾರ್ಯ ಅಂತಿಮ ಹಂತದಲ್ಲಿದ್ದು, ಬಳಿಕ ಎಲ್ಲಾ ಶಾಖೆಗಳಲ್ಲಿ Customer Meet ಆಯೋಜಿಸಿ ಗ್ರಾಹಕರ ಸಲಹೆಗಳನ್ನು ಪಡೆದು ಸೇವೆಗಳನ್ನು ಮತ್ತಷ್ಟು ಸುಧಾರಿಸಲಾಗುವುದು ಎಂದರು. ಕೊನೆಯಲ್ಲಿ, ವಾರ್ಷಿಕ ಮಹಾಸಭೆಯಲ್ಲಿ ಭಾಗವಹಿಸಿ ಬ್ಯಾಂಕಿಗೆ ನಿರಂತರ ಬೆಂಬಲ ನೀಡುತ್ತಿರುವ ಎಲ್ಲಾ ಸದಸ್ಯರಿಗೆ ಅಧ್ಯಕ್ಷರು ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸಿದರು.

2025–26ನೇ ಸಾಲಿನ ಲೆಕ್ಕ ಪರಿಶೋಧಿತ ಹಣಕಾಸು ಹೇಳಿಕೆಗಳು, ಲೆಕ್ಕಪರಿಶೋಧನಾ ವರದಿ ಮತ್ತು ಅನುಸರಣೆ ವರದಿ, 2026–27ನೇ ಸಾಲಿನ ಕಾರ್ಯಕ್ರಮಗಳ ರೂಪುರೇಷೆ ಮತ್ತು ಬಜೆಟ್, ಹಾಗೂ ಬೈಲಾ ತಿದ್ದುಪಡಿಗಳ ಪ್ರಸ್ತಾವನೆಗಳನ್ನು ವಾರ್ಷಿಕ ಮಹಾಸಭೆಯ ಮುಂದೆ ಮಂಡಿಸಿ ಸದಸ್ಯರ ಅನುಮೋದನೆ ಪಡೆಯಲಾಯಿತು.

ಸದಸ್ಯರು ಮುಂಚಿತವಾಗಿ ಲಿಖಿತವಾಗಿ ಕೇಳಿದ ಪ್ರಶ್ನೆಗಳಿಗೆ ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕ ಸುನಿಲ್ ಮಿನೇಜಸ್ ಅವರು ಉತ್ತರಿಸಿದರು.

ಡಾ। ಜೆರಾಲ್ಡ್ ಪಿಂಟೊ ಅವರನ್ನು Raknno Konkani Weeklyವತಿಯಿಂದ Best Author of the Year ಪ್ರಶಸ್ತಿಗೆ ಭಾಜನರಾದ ಹಿನ್ನೆಲೆಯಲ್ಲಿ, ಬ್ಯಾಂಕಿನ ಅಧ್ಯಕ್ಷರು ಹೂಗುಚ್ಛ ಹಾಗೂ ಶಾಲು ಹೊದಿಸಿ ಸನ್ಮಾನಿಸಿದರು. ಪ್ರಸಿದ್ಧ ನೃತ್ಯ ಕಲಾವಿದೆಯಾದ ಹಾಗೂ Golden Book of World Record ವತಿಯಿಂದ ಮಾನ್ಯತೆ ಪಡೆದಿರುವ Ms. Remona Pereira ಅವರು ತಮ್ಮ ಮನಮೋಹಕ ನೃತ್ಯ ಪ್ರದರ್ಶನದ ಮೂಲಕ ಸಭಿಕರನ್ನು ರಂಜಿಸಿದರು.

# ಕೃಷಿಭವನ, ಶಾಸ್ತ್ರಿಭವನ ನೆಲಸಮಕ್ಕೆ ಸಿದ್ಧತೆ




**ನವದೆಹಲಿ, ಸೆ.23:** ಕೇಂದ್ರದ ನರೇಂದ್ರ ಮೋದಿ ಸರ್ಕಾರವು ನವದೆಹಲಿಯ ಲೂಟಿಯನ್ಸ್ ವಲಯದಲ್ಲಿ ಕೈಗೆತ್ತಿಕೊಂಡಿರುವ ಸೆಂಟ್ರಲ್ ವಿಸ್ಟಾ ಮರು ಅಭಿವೃದ್ಧಿ ಯೋಜನೆಯು ಕೇವಲ ಹಳೆಯ ಕಟ್ಟಡಗಳನ್ನು ಕೆಡವಿ ಹೊಸ ಆಡಳಿತ ಸಂಕೀರ್ಣಗಳನ್ನು ನಿರ್ಮಿಸುವ ಯೋಜನೆಯಾಗಿ ಉಳಿದಿಲ್ಲ. ಇದು ರಾಜಕೀಯ, ಸಿದ್ಧಾಂತ ಮತ್ತು ಸಾಂಸ್ಕೃತಿಕ ಇತಿಹಾಸದ ಮರುಲೇಖನದ ಸುತ್ತ ದೊಡ್ಡಚರ್ಚೆಗೆ ಗ್ರಾಸವಾಗಿದೆ.

ಸ್ವಾತಂತ್ರ್ಯೋತ್ತರ ಭಾರತದ ಮೊದಲ ಪ್ರಧಾನಿ ಜವಾಹರಲಾಲ್ ನೆಹರೂ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಕಾಲದಲ್ಲಿ ನಿರ್ಮಾಣಗೊಂಡ ಕೃಷಿ ಭವನ, ಶಾಸ್ತ್ರಿ ಭವನಗಳು ಹಾಗೂ ಇತರ ಮಂತ್ರಾಲಯಗಳ ಕಟ್ಟಡಗಳನ್ನು ಧ್ವಂಸಗೊಳಿಸುತ್ತಿರುವುದು ಮತ್ತು ಹೆಸರುಗಳನ್ನು ಬದಲಾಯಿಸುತ್ತಿರುವುದು ಒಂದು ನಿರ್ದಿಷ್ಟ ರಾಜಕೀಯ ಛಾಪು ಮೂಡಿಸುವ ಯತ್ನ ಎಂಬ ವಿಮರ್ಶೆ ವ್ಯಕ್ತವಾಗುತ್ತಿದೆ.

ಶಾಸ್ತ್ರಿಭವನ, ಕೃಷಿಭವನ, ನಿರ್ಮಾಣ ಭವನ ಮತ್ತು ಉದ್ಯೋಗ ಭವನಗಳು ಕೇವಲ ಇಟ್ಟಿಗೆ–ಸಿಮೆಂಟ್‌ನ ಕಟ್ಟಡಗಳಾಗಿರಲಿಲ್ಲ. ಅವು ಸ್ವತಂತ್ರ ಭಾರತವು ತನ್ನದೇ ಆದ ಆಡಳಿತಾತ್ಮಕ ಶಕ್ತಿಯನ್ನು ಕಂಡುಕೊಂಡ ಪ್ರಕ್ರಿಯೆಯ ಸಂಕೇತಗಳಾಗಿದ್ದವು. ಆದರೆ ಪ್ರಸ್ತುತ ಸರ್ಕಾರವು ಕಾಂಗ್ರೆಸ್ ಹಾಗೂ ನೆಹರೂ–ಶಾಸ್ತ್ರಿ ಯುಗದ ಪರಂಪರೆಯನ್ನು ಹಂತ ಹಂತವಾಗಿ ಹಿನ್ನೆಲೆಗೆ ಸರಿಸಲು ಯತ್ನಿಸುತ್ತಿದೆ. ಹಳೆಯ ಕಟ್ಟಡಗಳ ಜಾಗದಲ್ಲಿ ಹೊಸ ಕಟ್ಟಡಗಳನ್ನು ನಿರ್ಮಿಸುವುದರ ಜೊತೆಗೆ, ಅವುಗಳಿಗೆ ಕರ್ತವ್ಯ ಭವನಗಳೆಂದು ಹೆಸರಿಡುವ ಮೂಲಕ ಹೊಸ ರಾಜಕೀಯ ಸಿದ್ಧಾಂತವನ್ನು ಪ್ರತಿಷ್ಠಾಪಿಸಲಾಗುತ್ತಿದೆ ಎಂಬ ವಾದವಿದೆ.

ಕಟ್ಟಡಗಳ ಭೌತಿಕ ಬದಲಾವಣೆಯ ಜತೆಗೆ ಹೆಸರುಗಳ ಬದಲಾವಣೆಯೂ ಒಂದು ಪ್ರಮುಖ ಅಸ್ತ್ರವಾಗಿದೆ. ದೆಹಲಿಯ ಐತಿಹಾಸಿಕ ರಾಜಪಥ್ ಅನ್ನು ಕರ್ತವ್ಯಪಥ ಎಂದು ಮರುನಾಮಕರಣ ಮಾಡಲಾಗಿದೆ. ರಾಷ್ಟ್ರಪತಿ ಭವನದ ಪ್ರಸಿದ್ಧ ಮೊಘಲ್ ಗಾರ್ಡನ್ ಅನ್ನು ಅಮೃತ ಉದ್ಯಾನ ಎಂದು ಬದಲಾಯಿಸಲಾಗಿದೆ.

ಪ್ರಸ್ತುತ ನೆಲಸಮಗೊಳ್ಳುತ್ತಿರುವ ಶಾಸ್ತ್ರಿ ಮತ್ತು ಕೃಷಿಭವನಗಳ ಜಾಗದಲ್ಲಿ ಬರುವ ಸಂಕೀರ್ಣಗಳನ್ನು ಕರ್ತವ್ಯ ಭವನ 4 ಮತ್ತು 5 ಎಂದು ಕರೆಯಲಾಗುತ್ತಿದೆ. ಸರ್ಕಾರವು ಇದನ್ನು ಗುಲಾಮಗಿರಿಯ ಸಂಕೇತಗಳಿಂದ ಮುಕ್ತಿ ಮತ್ತು ಭಾರತೀಯ ಸಂಸ್ಕೃತಿಗೆ ಆದ್ಯತೆ ಎಂದು ಪ್ರತಿಪಾದಿಸಿದರೆ, ವಿರೋಧ ಪಕ್ಷಗಳು ಮತ್ತು ಕೆಲವು ಇತಿಹಾಸಕಾರರು ಇದನ್ನು ಸ್ವಾತಂತ್ರ್ಯೋತ್ತರ ಭಾರತ ಕಟ್ಟಿದ ನಾಯಕರ ಇತಿಹಾಸವನ್ನು ಮರೆಮಾಚುವ ಯತ್ನ ಎಂದು ಕರೆಯುತ್ತಾರೆ.

# ಅ.11ರಿಂದ ಕೆಆರ್‌ಎಸ್‌ನಲ್ಲಿ ಕಾವೇರಿ ಆರತಿ: ಸಿಎಂ ಉದ್ಘಾಟನೆ

## 6 ದಿನ ಅದ್ದೂರಿ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಲು ಸಚಿವ ಚಲುವರಾಯಸ್ವಾಮಿ ಸೂಚನೆ



**ಬೆಂಗಳೂರು/ಮಂಡ್ಯ, ಸೆ.23:** ಶ್ರೀರಂಗಪಟ್ಟಣ ದಸರಾ ಅಂಗವಾಗಿ ಕೆಆರ್‌ಎಸ್‌ನಲ್ಲಿ ಅಕ್ಟೋಬರ್ 11ರಿಂದ ಸಂಪ್ರದಾಯಬದ್ಧ ಕಾವೇರಿ ಆರತಿ ಆಯೋಜಿಸಲಾಗಿದ್ದು, ಕಾರ್ಯಕ್ರಮವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉದ್ಘಾಟಿಸಲಿದ್ದಾರೆ ಎಂದು ಜಲಸಂಪನ್ಮೂಲ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು.

ವಿಕಾಸಸೌಧದಲ್ಲಿ ಬುಧವಾರ ಕಾವೇರಿ ಆರತಿ ಆಯೋಜನೆ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕಳೆದ ಬಾರಿ ಕಾವೇರಿ ಆರತಿ ಆಯೋಜನೆಯಲ್ಲಿ ತೊಡಗಿಸಿಕೊಂಡಿದ್ದ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನೇ ಬಳಸಿಕೊಂಡು ಸಂಪ್ರದಾಯಬದ್ಧವಾಗಿ, ಯಾವುದೇ ಲೋಪವಿಲ್ಲದೆ ಅಚ್ಚುಕಟ್ಟಾಗಿ ಕಾರ್ಯಕ್ರಮ ನಡೆಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮುಖ್ಯಮಂತ್ರಿ ನಿರ್ದೇಶನದಂತೆ ಕಾವೇರಿ ಆರತಿಯನ್ನು ಅರ್ಥಪೂರ್ಣವಾಗಿ ನೆರವೇರಿಸಬೇಕು. ಈ ಹಿಂದೆ ಅವರೇ ಜಲಸಂಪನ್ಮೂಲ ಸಚಿವರಾಗಿದ್ದ ಸಂದರ್ಭದಲ್ಲಿ ಆರಂಭಿಸಿದ್ದ ಈ ಕಾರ್ಯಕ್ರಮವನ್ನು ಈ ಬಾರಿ ಇನ್ನಷ್ಟು ಅರ್ಥಪೂರ್ಣವಾಗಿ ಆಯೋಜಿಸುವ ಜವಾಬ್ದಾರಿ ನಮ್ಮ ಮೇಲಿದೆ ಎಂದರು.

ಕಳೆದ ವರ್ಷ ಮೊದಲ ಬಾರಿಗೆ ಕೆಆರ್‌ಎಸ್‌ನಲ್ಲಿ ಕಾವೇರಿ ಆರತಿ ಆರಂಭಿಸಲಾಗಿತ್ತು. ಇಂತಹ ಸಾಂಪ್ರದಾಯಿಕ ಆಚರಣೆಗಳು ನಿಲ್ಲಬಾರದು ಎಂಬ ಸದುದ್ದೇಶದಿಂದ ಈ ವರ್ಷವೂ ಮುಂದುವರಿಸಲಾಗುತ್ತಿದೆ. ರಾಜ್ಯದಲ್ಲಿ ಬರ ಮತ್ತು ತಮಿಳುನಾಡು ನೀರು ಹಂಚಿಕೆ ವಿವಾದಗಳಿದ್ದರೂ, ನಾಡಿನ ಸಂಸ್ಕೃತಿಯನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದರು.

### 6 ದಿನ ಕಾರ್ಯಕ್ರಮ

ಪಾರ್ಕಿಂಗ್ ಸ್ಥಳದಿಂದ ವೇದಿಕೆವರೆಗೂ ಉಚಿತ ಬಸ್ ಸೌಲಭ್ಯ, ಲೋಕೋಪಯೋಗಿ ಇಲಾಖೆಯಿಂದ ರಸ್ತೆ ನಿರ್ಮಾಣ, ವಾರ್ತಾ ಇಲಾಖೆಯಿಂದ ಪ್ರಚಾರ, ಮುಜರಾಯಿ ಇಲಾಖೆಯಿಂದ ಪಂಡಿತರ ನೇಮಕ, ಎಲ್‌ಇಡಿ ಪರದೆಗಳು, ಭವ್ಯ ವೇದಿಕೆ, ಧ್ವನಿ–ಬೆಳಕು ವ್ಯವಸ್ಥೆ, ವಾದ್ಯ, ಪೂಜಾ ಪರಿಕರಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ವ್ಯವಸ್ಥಿತವಾಗಿರಬೇಕು. ಯಾವುದೇ ಶಿಷ್ಟಾಚಾರ ಉಲ್ಲಂಘನೆ ಯಾಗದಂತೆ ಮತ್ತು ಕಳೆದ ಬಾರಿಯ ಲೋಪದೋಷಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಲು ಸೂಚಿಸಿದರು. ಮುಖ್ಯಮಂತ್ರಿಗಳು ಆಗಮಿಸುವುದರಿಂದ 'ಡಿ–ಝೋನ್' ಭದ್ರತಾ ನಿಯಮಗಳ ಪಾಲನೆಯಾಗಬೇಕು ಮತ್ತು ಸಾರ್ವಜನಿಕರಿಗೆ ಯಾವುದೇ ತೊಂದರೆ ಯಾಗದಂತೆ ಮುಕ್ತ ಅವಕಾಶ ಕಲ್ಪಿಸಬೇಕು ಎಂದು ನಿರ್ದೇಶಿಸಿದರು.

### ವಿಡಿಯೋ ಕರೆ ಮೂಲಕ ಸಲಹೆ

ಕಳೆದ ಬಾರಿಯ ಕಾವೇರಿ ಆರತಿಯ ಮೇಲ್ವಿಚಾರಣೆ ವಹಿಸಿದ್ದ ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ರಾಮಪ್ರಸಾದ್ ಅವರೊಂದಿಗೆ ವಿಡಿಯೋಕರೆ ಮೂಲಕ ಸಮಾಲೋಚನೆ ನಡೆಸಿದ ಸಚಿವರು, ಈ ವರ್ಷವೂ ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ 6 ದಿನಗಳ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ರೂಪಿಸುವಂತೆ ಮತ್ತು ಸ್ಥಳೀಯ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡುವಂತೆ ಕೋರಿದರು.

ಸಭೆಯಲ್ಲಿ ಕಾವೇರಿ ಪ್ರತಿಮೆ ನಿರ್ಮಾಣ, ಪೂಜಾ ವಿಧಿ–ವಿಧಾನಗಳು, ವಾರಣಾಸಿಯ ಅರ್ಚಕರ ತಂಡದ ವಾಸ್ತವ್ಯ ಮೊದಲಾದ ವಿವರಗಳನ್ನು ಪರಿಶೀಲಿಸಲಾಯಿತು. 6 ದಿನವೂ ಸಾಂಸ್ಕೃತಿಕ ಕಾರ್ಯಕ್ರಮಗಳು, ಸಂಗೀತ ಸಂಜೆ, ಹಾಸ್ಯಸಂಜೆ ನಡೆಯಲಿದೆ.

# ಬೇಕರಿಗಳ ಮೇಲೆ ಅಧಿಕಾರಿಗಳ ದಾಳಿ-ಅವಧಿ ಮೀರಿದ ಆಹಾರ ಪದಾರ್ಥಗಳು ಪತ್ತೆ

## ಆಹಾರ ಗುಣಮಟ್ಟ ಪರಿಶೀಲನೆಗೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಸೂಚನೆ



**ಬಳ್ಳಾರಿ, ಸೆ 23.** ನಗರದ ವಿವಿಧ ಬೇಕರಿಗಳ ಮೇಲೆ ಆಹಾರ ಗುಣಮಟ್ಟಗಳನ್ನು ಪರಿಶೀಲಿಸುವಂತೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಅವರು ಆದೇಶಿಸಿದ್ದಾರೆ. ಈ ಹಿನ್ನಲೆಯಲ್ಲಿ ಆಹಾರ ಸುರಕ್ಷತಾ ಹಾಗೂ ಔಷಧಿ ನಿಯಂತ್ರಣ ಇಲಾಖೆಯ ಅಧಿಕಾರಿಗಳು, ತಹಶೀಲ್ದಾರ್ ಹಾಗೂ ಸಿಬ್ಬಂದಿ ಜಂಟಿಯಾಗಿ ಪರಿಶೀಲನೆ ನಡೆಸಿದ್ದಾರೆ.

ಪರಿಶೀಲನೆ ವೇಳೆ ಕೆಲವು ಬೇಕರಿಗಳಲ್ಲಿ ಅವಧಿ ಮೀರಿದ ಆಹಾರ ಪದಾರ್ಥಗಳು ಪತ್ತೆಯಾಗಿದ್ದು ಕೆಲ ಬೇಕರಿಗಳ ಅನುಮತಿ ಪತ್ರಗಳ ಅವಧಿಯೂ ಅನುಮಾನಗಳು ಮೂಡಿಸಿವೆ. ಆಧಿಕಾರಿಗಳಿಗೆ ಅನುಮಾನಾಸ್ಪದವಾಗಿ ಕಂಡ ಕೆಲವು ಆಹಾರ ಪದಾರ್ಥಗಳ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯ ಪರೀಕ್ಷೆಗೆ ಕಳುಹಿಸಿದ್ದಾರೆ. ಪರೀಕ್ಷಾ ವರದಿ ಬಂದ ಬಳಿಕ ನಿಯಮಾನುಸಾರ ಮುಂದಿನ ಕಾನೂನು ಕ್ರಮ ಕೈಗೊಳ್ಳಲು ಅಧಿಕಾರಿಗಳು ಸಿದ್ಧತೆ ನಡೆಸಿದ್ದಾರೆ.

ಆಹಾರ ಪದಾರ್ಥಗಳ ಗುಣಮಟ್ಟ, ಅವಧಿ ಹಾಗೂ ಅಗತ್ಯ ಪರವಾನಗಿಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಬೇಕರಿ ಮಾಲೀಕರಿಗೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ. ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿ ಬಳಿ ಇರುವ ಕೃಷಿ ಸಮಾಜದ ಮಳಿಗೆಯಲ್ಲಿ ಇರುವ ಹೆರಿಟೇಜ್ ಕೇಕ್ಸ್ ಮೇಲೆ ಮತ್ತು ದುರ್ಗಮ್ಮ ಗುಡಿ ಹತ್ತಿರ ಇರುವ ರೇಣುಕಾ ಬೇಕರಿ ಮೇಲೆ ದಾಳಿ ನಡೆಸಿ ಆಹಾರ ಪದಾರ್ಥಗಳನ್ನು ಪರಿಶೀಲನೆ ಮಾಡಿದ್ದಾರೆ. ಹೆರಿಟೇಜ್ ಕೇಕ್ಸ್ ಮೇಲೆ ನಡೆಸಿದ ಅಧಿಕಾರಿಗಳಿಗೆ ಪ್ರತಿಷ್ಠಿತ ತಂಪು ಪಾನಿಯಗಳ ಅವಧಿ ಮುಗಿದ್ದಿದ್ದು ಕೆಲ ಬಿಸ್ಕೆಟ್ಟು ಕೆಲ ಹೋಂ ನೀಡ್ಸ್ ಆಹಾರ ಪದಾರ್ಥಗಳು ಬಳಿಕೆಗೆ ಯೋಗ್ಯವಿಲ್ಲದಂತೆ ಆಗಿರೋದು ಅಧಿಕಾರಿಗಳಿಗೆ ಕಂಡುಬಂದಿದೆ. ರೇಣುಕಾ ಬೇಕರಿನಲ್ಲಿ ಪದಾರ್ಥಗಳು ತಯಾರಿ ಘಟಕನಲ್ಲಿ ಯಾವದೇ ಹ್ಯಾಂಡ್ ಬ್ಲೌಸ್ ಇಲ್ಲ ನೆಗ್ಲೆಟ್‌ದಿಂದ ಕೆಲಸ ಮಾಡುತ್ತಿದ್ದ ದೃಶ್ಯ ನೋಡಿ ಅಧಿಕಾರಿಗಳಿಗೆ ಅಚ್ಚರಿ ಮೂಡಿಸಿದೇ. ಮಾಲೀಕರಿಗೆ ವಾರ್ನ್ ಮಾಡಿ ಸರಿಪಡಿಸಿಕೊಳ್ಳಲು ಹೇಳಿದ್ದಾರೆ.

ಹೆರಿಟೇಜು ಬೇಕರಿನಲ್ಲಿ ಗಬ್ಬು ವಾಸನೆ ಹಿಡಿದು ವಿಷಪೂರಿತವಾಗಿದ್ದು ಅಧಿಕಾರಿ ಗಳ ಗಮನಕ್ಕೆ ಬಂದಿದ್ದು, ತಕ್ಷಣವೇ ಜಿಲ್ಲಾಧಿಕಾರಿಗಳ ಆದೇಶದಂತೆ ಅಧಿಕಾರಗಳು ದಾಳಿ ನಡೆಸಿ ಗುಣಮಟ್ಟವನ್ನು ಪರಿಶೀಲಿಸಿದ್ದಾರೆ.

ರೇಣುಕಾ ಬೇಕರಿ, ಹೆರಿಟೇಜ್ ಬೇಕರಿಯಲ್ಲಿ ಕೆಲ ಆಹಾರ ಪದಾರ್ಥಗಳಿಗೆ ಯಾವುದೇ ತಯಾರು ಮಾಡಿದ ದಿನಾಂಕ ಅವರ ಹೆಸರು ಇಲ್ಲದೆ ಇರುವ ಆಹಾರ ಪದಾರ್ಥಗಳು ಕಂಡು ಬಂದಿವೆ. ಚಿಪ್ಸ್, ಚಕ್ಕಿ,ಅತ್ತಿರಾಸು, ಸಿಹಿ ಪದಾರ್ಥಗಳು ಮುಂತಾದ ಆಹಾರ ಪದಾರ್ಥಗಳ ಮೇಲೆ ಯಾವುದೇ ವಿಳಾಸ ಇಲ್ಲದೆ ಇರುವುದು ಕಂಡುಬಂದಿದೆ. ತಕ್ಷಣವೇ ಅವುಗಳ ಮೇಲೆ ಕೂಡ ಎಫ್‌ಎಸ್‌ಎಸ್‌ಎಐ ಮಾನದಂಡನ ಪ್ರಕಾರ ಇರಬೇಕೆಂದು ಸೂಚನೆ ಕೊಟ್ಟಿದ್ದಾರೆ. ಹೆರಿಟೇಜ್ ಮಾಲೀಕರು ನಮ್ಮ ಬೇಗರಿಯಲ್ಲಿ ಎಲ್ಲಾ ದಾಖಲೆಗಳು ಸರಿ ಇವೆ, ಲೋಪ ದೋಷ ಇದ್ದರೆ ಸರಿಪಡಿಸಿಕೊಳ್ಳುವೆ, ನಮ್ಮ ಹೆರಿಟೇಜ್ ಬೇಕರಿ ಹೊಸಪೇಟೆ, ಬಳ್ಳಾರಿ ಇನ್ನು ಮುಂತಾದ ಪ್ರದೇಶಗಳಲ್ಲಿ ಇದ್ದಾವೆ ಎಂದು ಕೂಡ ಇಂಥದ್ದು ನಡೆದಿಲ್ಲ ಎಂದು ದೂರವಾಣಿಯಲ್ಲಿ ಹೇಳಿದ್ದಾರೆ.

ಇಂತಹ ಬೇಕರಿಗಳು ರಾಜಾರೋಷವಾಗಿ ಜನರ ಜೀವನ ಜೊತೆ ಚೆಲ್ಲಾಟವಾಡುತ್ತಿರುವುದು ಆಡಳಿತಕ್ಕೆ ಕಪ್ಪು ಚುಕ್ಕೆ ಎಂದರು ತಪ್ಪಾಗದು. ಆದರೂ ಇಂತಹ ಯೋಗ್ಯವಿಲ್ಲದ ಆಹಾರ ಪದಾರ್ಥ ಗಳನ್ನು ವಿತರಿಸುವ ಬೇಕರಿಗಳನ್ನು ತಕ್ಷಣವೇ ಜಿಲ್ಲೆಯಿಂದ ಹೊರಗೆ ಹಾಕಬೇಕು ಎನ್ನುವ ಸಾರ್ವಜನಿಕರ ಆಕ್ರೋಶವಾಗಿದೆ. ಈ ಬೇಕರಿ ಗಳಲ್ಲಿ ಬಹುತೇಕ ಡೊಮೆಸ್ಟಿಕ್ ಗ್ಯಾಸ್ ಸಿಲಿಂಡರ್ ಗಳನ್ನು ಸಿಕ್ಕಾಪಟ್ಟೆ ಬಳಕೆ ಮಾಡುತ್ತಿರುವುದು ಕೂಡ ಕಂಡು ಬಂದಿದೆ. ಇಲ್ಲಿಯ ಮಹಾನಗರ ಪಾಲಿಕೆ, ಆಹಾರ ಸರಬರಾಜು ಇಲಾಖೆ, ಆರೋಗ್ಯ ಇಲಾಖೆ, ಸಂಪೂರ್ಣ ನಿದ್ದೆಯಲ್ಲಿ ಇದೆ ಎಂದರು ತಪ್ಪಾಗದು, ಈಗಾದರೂ ನಗರದಲ್ಲಿರುವ ಬಹುತೇಕರಿಗೆಗಳನ್ನು ಪರಿಶೀಲಿಸಿ, ಜನರ ಆರೋಗ್ಯವನ್ನು ಕಾಪಾಡ ಬೇಕಾಗಿದೆ ಎಂದು ಸಂಘ–ಸಂಸ್ಥೆಗಳ ಹೋರಾಟಗಾರರ ಆಕ್ರೋಶವಾಗಿದೆ.

ಇದಲ್ಲದೆ ನಗರದಲ್ಲಿ ಬಹುತೇಕ ಊಟದಲ್ಲಿ ಕೂಡ ಕಳಪೆ ಗುಣಮಟ್ಟದ ಆಹಾರ ತಯಾರಿದೆ ಎಂದು ಜನರು ಅದನ್ನು ಸೇವಿಸಿ ಆಸುಪತ್ರೆಗಳ ಪಾಲಾಗುತ್ತಿದ್ದಾರೆ ಎನ್ನುವುದು ಕೂಡ ಕೇಳಿಬರುತ್ತದೆ.

# ಕೆರೆ ಭರ್ತಿಗೆ ಆಗ್ರಹಿಸಿ ಹೆದ್ದಾರಿ ತಡೆ



**ಕಲಬುರಗಿ, ಸೆ. 23:** ಭೀಮಾ ನದಿಯಿಂದ ನೀರನ್ನು ಬೇರೆಡೆಗೆ ಹರಿಸುವ ಮುನ್ನ, ಅಫಜಲಪುರ ತಾಲ್ಲೂಕಿನ 14 ಕೆರೆಗಳನ್ನು ಸಂಪೂರ್ಣವಾಗಿ ತುಂಬಿಸಬೇಕು ಎಂದು ಒತ್ತಾಯಿಸಿ, ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕದ ನೇತೃತ್ವದಲ್ಲಿ ರೈತರು ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಮಲ್ಲಾಬಾದ್ ಹತ್ತಿರದ ರಾಷ್ಟ್ರೀಯ ಹೆದ್ದಾರಿ ಸಂಚಾರ ತಡೆದು ಹೋರಾಟ ನಡೆಸಿದರು.

ಬೆಳಿಗ್ಗೆ ಒಂಬತ್ತು ಗಂಟೆಗೆ ಆರಂಭವಾದ ರಾಷ್ಟ್ರೀಯ ಹೆದ್ದಾರಿ ಸಂಚಾರ ತಡೆ ಪ್ರತಿಭಟನೆ ಮಧ್ಯಾಹ್ನದವರೆಗೆ ನಡೆಯಿತು.

ಸಾರಿಗೆ ಬಸ್, ಖಾಸಗಿ ವಾಹನಗಳು, ಸರಕು ಸಾಗಣೆ ವಾಹನಗಳು ಸಾಲುಗಟ್ಟಿ ನಿಂತಿದ್ದವು. ಪ್ರಯಾಣಿಕರು ಮುಂದೆ ಹೋಗಲಾಗದೇ ಪರದಾಡಿದರು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಹಸಿರು ಸೇನೆ ಸಂಘಟನೆಯ ಜಿಲ್ಲಾಧ್ಯಕ್ಷ ಮಹಾಂತೇಶ ಜಮಾದಾರ, ತಾಲ್ಲೂಕಿನಲ್ಲಿ ಸಣ್ಣ ಪುಟ್ಟ 60 ಕೆರೆಗಳಿವೆ. ಅವುಗಳಿಗೆ ನೀರು ತುಂಬು ಕೆಲಸವನ್ನು ಸರ್ಕಾರ ಮಾಡಬೇಕು ಮತ್ತು ಈಗಾಗಲೇ ಭೀಮಾ ಬ್ಯಾರೇಜ್ ಮುಖಾಂತರ ತಾಲ್ಲೂಕಿನ 10 ಕೆರೆಗಳು ಹಾಗೂ ಆಳಂದ ತಾಲ್ಲೂಕಿನ ಮೂರು ಕೆರೆಗಳು ಸೇರಿ ಅಮರ್ಜಾ ಡ್ಯಾಮಿಗೆ ನೀರು ಪೂರೈಕೆ ಮಾಡುವ ಪೈಪ್‌ಲೈನ್ ಕೆಲಸ ಪೂರ್ಣಗೊಂಡಿದೆ. ಮೊದಲು ನಮ್ಮ ತಾಲ್ಲೂಕಿನ ಕೆರೆಗಳನ್ನು ತುಂಬಿದ ಮೇಲೆ ಆಳಂದ ತಾಲ್ಲೂಕಿನ ಕೆರೆಗಳನ್ನು ತುಂಬುವ ಕೆಲಸ ಮಾಡಬೇಕು. ಕೇಂದ್ರ ಜಲ ಆಯೋಗದ ಆದೇಶದ ಪ್ರಕಾರ ಮಳೆಗಾಲದಲ್ಲಿ ಭೀಮಾನದಿಗೆ ಪ್ರವಾಹ ಬಂದಾಗ ಮಾತ್ರ ಹೆಚ್ಚುವರಿ ನೀರನ್ನು ಬಳಸಿಕೊಳ್ಳಬೇಕು. ನದಿಯಲ್ಲಿ 3.16 ಟಿಎಂಸಿ ಅಡಿ ನೀರು ಸಂಗ್ರವಾಗಿರಬೇಕು ಮತ್ತು ಸಾಧ್ಯವಾದಷ್ಟು ತಾಲ್ಲೂಕಿನ ಎಲ್ಲಾ ಕೆರೆಗಳನ್ನ ತುಂಬು ಕೆಲಸವನ್ನು ಸರ್ಕಾರ ಮಾಡಬೇಕು ಎಂದರು.

ತಾಲ್ಲೂಕಿನ ಕೆರೆಗಳಿಗೆ ನೀರು ಹರಿಸಲು ಅಳವಡಿಸಿರುವ 2.5, 3 ಹಾಗೂ 4 ಇಂಚಿನ ಪೈಪ್‌ಲೈನ್‌ಗಳ ಸಾಮರ್ಥ್ಯವನ್ನು ಪರಿಶೀಲಿಸಿ, ಅಗತ್ಯವಿರುವ ಕಡೆ ಕನಿಷ್ಠ 12 ಇಂಚಿನ ಸಾಮರ್ಥ್ಯದ ಪೈಪ್‌ಲೈನ್ ಅಳವಡಿಸಬೇಕು. ಇದರಿಂದ ಕಡಿಮೆ ಅವಧಿಯಲ್ಲಿ ಹೆಚ್ಚಿನ ಪ್ರಮಾಣದ ನೀರನ್ನು ಕೆರೆಗಳಿಗೆ ಹರಿಸಲು ಸಾಧ್ಯವಾಗಲಿದೆ. ಸೊನ್ನ ಡ್ಯಾಂನಿಂದ ಬರುವ ಕಾಲುವೆಗಳನ್ನು ದುರಸ್ತಿ ಮಾಡಿ, ನೀರು ಹರಿಸುವ ಮೂಲಕ ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆ ಸ್ಥಳಕ್ಕೆ ತಹಶೀಲ್ದಾರ್ ಸಂಜೀವಕುಮಾರ್ ದಾಸರ, ಬೇಡಿಕೆಗಳನ್ನ ಪರಿಶೀಲನೆ ಮಾಡಿ ಸಂಬಂಧಪಟ್ಟ ಇಲಾಖೆಯವರೊಂದಿಗೆ ಚರ್ಚೆ ಮಾಡಿ ಒಂದು ವಾರದಲ್ಲಿ ಸಭೆ ಕರೆಯವುದಾಗಿ ಭರವಸೆ ನೀಡಿದಾಗ ಪ್ರತಿಭಟನೆ ಹಿಂದಕ್ಕೆ ಪಡೆಯಲಾಯಿತು.

# 371(ಜೆ) ಅಡಿ ನೇಮಕಗೊಂಡ 800ಕ್ಕೂ ಹೆಚ್ಚು ನೌಕರರ ಸೇವೆ ರಕ್ಷಿಸಿ: ಸಿಎಂಗೆ ಬೆಲ್ದಾಳೆ ಮನವಿ



**ಬೀದರ್, ಸೆ.23:** ಕಲ್ಯಾಣ ಕರ್ನಾಟಕ ಭಾಗದಲ್ಲಿ 371(ಜೆ) ಹಾಗೂ ಮೆರಿಟ್ ಆಧಾರದಲ್ಲಿ ನೇಮಕಗೊಂಡಿರುವ 800ಕ್ಕೂ ಅಧಿಕ ಸರ್ಕಾರಿ ನೌಕರರು ಹಾಗೂ ಶಿಕ್ಷಕರ ಸೇವೆಯನ್ನು ರಕ್ಷಿಸುವಂತೆ ಬೀದರ್ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದರು.

ಸೆಪ್ಟೆಂಬರ್ 17ರಂದು ಕಲಬುರಗಿ ಹೈಕೋರ್ಟ್ ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ ನೌಕರರ ಉದ್ಯೋಗದ ಭವಿಷ್ಯದ ಕುರಿತು ಆತಂಕ ಮೂಡಿದೆ. 2023ರ ಫೆಬ್ರವರಿ 1ರಂದು ಆಡಳಿತ ಮತ್ತು ಸಿಬ್ಬಂದಿ ಸುಧಾರಣೆ ಇಲಾಖೆ ಹೊರಡಿಸಿದ್ದ ಸುತ್ತೋಲೆಯಂತೆ 371(ಜೆ) ಹಾಗೂ ಮೆರಿಟ್ ಆಧಾರದಲ್ಲಿ ನೇಮಕಗೊಂಡು ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಿರುವ ನೌಕರರು ಇದೀಗ ಅನಿಶ್ಚಿತತೆ ಎದುರಿಸುವಂತಾಗಿದೆ. ಈ ನೌಕರರ ಪೈಕಿ ಹಲವರು ಈಗಾಗಲೇ ತಮ್ಮ ಪರಿವೀಕ್ಷಣಾ ಅವಧಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ. ಯಾವುದೇ ತಪ್ಪಿಲ್ಲದೆ ಅರ್ಹತೆಯ ಆಧಾರದ ಮೇಲೆ ನೇಮಕಗೊಂಡು ಸೇವೆ ಸಲ್ಲಿಸುತ್ತಿರುವ ನೌಕರರು ಹಾಗೂ ಅವರ ಕುಟುಂಬಗಳ ಹಿತಾಸಕ್ತಿಯನ್ನು ಸರ್ಕಾರ ಕಾಪಾಡಬೇಕು. ಹೈಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಉದ್ಭವಿಸಿರುವ ಪರಿಸ್ಥಿತಿಯನ್ನು ಪರಿಶೀಲಿಸಿ, ಅರ್ಹವಾಗಿ ನೇಮಕಗೊಂಡಿರುವ ನೌಕರರ ಸೇವಾ ಭದ್ರತೆಗೆ ಅಗತ್ಯ ಕಾನೂನು ಹಾಗೂ ಆಡಳಿತಾತ್ಮಕ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಡಾ. ಶೈಲೇಂದ್ರ ಬೆಲ್ದಾಳೆ ಒತ್ತಾಯಿಸಿದ್ದಾರೆ.

ಕಲ್ಯಾಣ ಕರ್ನಾಟಕಕ್ಕೆ 371(ಜೆ) ಅಡಿಯಲ್ಲಿ ಉದ್ಯೋಗ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿ ವಿಶೇಷ ಅವಕಾಶಗಳಿರುವ ಹಿನ್ನೆಲೆಯಲ್ಲಿ ಈ ನೇಮಕಾತಿಗಳಿಗೆ ಸಂಬಂಧಿಸಿದ ನೌಕರರ ಸೇವಾ ಭದ್ರತೆ ಕುರಿತು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

# ಭವಿಷ್ಯದಲ್ಲಿ ಕೌಶಲ್ಯಕ್ಕೆ ಪ್ರಥಮ ಆದ್ಯತೆ: ಪ್ರೊ. ಎ.ಪಿ. ಜ್ಞಾನಪ್ರಕಾಶ್




**ಬಳ್ಳಾರಿ, ಸೆ. 23:** ಭವಿಷ್ಯದ ಹತ್ತು ವರ್ಷಗಳಲ್ಲಿ ಉದ್ಯೋಗದಲ್ಲಿ ಕೌಶಲ್ಯಕ್ಕೇ ಪ್ರಥಮ ಆದ್ಯತೆ ಸಿಗಲಿದೆ ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕುಲಪತಿಗಳಾಗಿರುವ ಪ್ರೊ. ಎ.ಪಿ. ಜ್ಞಾನಪ್ರಕಾಶ್ ತಿಳಿಸಿದ್ದಾರೆ.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಗೆ ಬುಧವಾರ ಭೇಟಿ ನೀಡಿ, ಸಂಸ್ಥೆಯ ಕೌಶಲ್ಯಾಭಿವೃದ್ಧಿ ಕೇಂದ್ರದ ಕುರಿತು ಮಾಹಿತಿ ಪಡೆದು, ಸಂಸ್ಥೆಯ ಪದಾಧಿಕಾರಿಗಳು – ಕಾರ್ಯಕಾರಿ ಸಮಿತಿ ಸದಸ್ಯರ ಜೊತೆಯಲ್ಲಿ ಮಾತನಾಡಿದರು.

ಭಾರತದಲ್ಲಿ ಕೌಶಲ್ಯಾಭಿವೃದ್ಧಿಗೆ ಪ್ರಥಮ ಆದ್ಯತೆ ಸಿಕ್ಕಿದೆ. ದೇಶದ ಯುವ ಶಕ್ತಿಯನ್ನು ಕೌಶಲ್ಯವಂತರನ್ನಾಗಿ ರೂಪಿಸಿ, ಭವಿಷ್ಯದಲ್ಲಿ ನಿರುದ್ಯೋಗ ಸಮಸ್ಯೆಯನ್ನು ಪರಿಹರಿಸಲಿಕ್ಕಾಗಿಯೇ ಕೇಂದ್ರ ಸರ್ಕಾರ ಕೌಶಲ್ಯ ಅಭಿವೃದ್ಧಿಗಾಗಿ ಕೋಟ್ಯಾಂತರ ರೂಪಾಯಿಗಳನ್ನು ವ್ಯಯ ಮಾಡುತ್ತಿದೆ. ಈ ನಿಟ್ಟಿನಲ್ಲಿ ಕರ್ನಾಟಕದಲ್ಲಿ ಕೌಶಲ್ಯ ತರಬೇತಿಯ ಮೌಲ್ಯಮಾಪನ ಹಾಗೂ ಪ್ರಮಾಣಪತ್ರ ವಿತರಣೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವು ಕೇಂದ್ರ ಸರ್ಕಾರದ ಮಾನ್ಯತೆಯನ್ನು ಪಡೆದಿದೆ ಎಂದರು.

ಬಳ್ಳಾರಿಯಲ್ಲಿ ಅತ್ಯಾಧುನಿಕವಾದ ಎಐ ಮತ್ತು ಎಂಎಲ್ ತರಬೇತಿ ಸೇರಿ ವಿವಿಧ ವಿಷಯಗಳ ಪ್ರಯೋಗಾಲಯವನ್ನು ಪ್ರಾರಂಭಿಸುವ ಚಿಂತನೆ ಇದೆ. ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಕರ್ನಾಟಕದಲ್ಲಿಯೇ ವಿಶೇಷವಾಗಿ ಕೌಶಲ್ಯ ತರಬೇತಿಯನ್ನು ನೀಡುತ್ತಿರುವುದು ಸ್ವಾಗತಾರ್ಹ.

ಈ ಸಂಸ್ಥೆಯು ನಮ್ಮ ವಿಶ್ವವಿದ್ಯಾಲಯದ ಜೊತೆಯಲ್ಲಿ ತರಬೇತಿ ಮೌಲ್ಯಮಾಪನ ಮತ್ತು ಪ್ರಮಾಣಪತ್ರ ವಿತರಣೆಗೆ ಒಡಂಬಡಿಕೆ ಮಾಡಿಕೊಂಡಲ್ಲಿ ಯುವಶಕ್ತಿಗೆ ಹೆಚ್ಚಿನ ಉಪಯೋಗವಾಗಲಿದೆ ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಅವರು, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ರೈತಣ್ಣನ ಊಟ, ಕೌಶಲ್ಯ ತರಬೇತಿ ಹಾಗೂ ಇನ್ನಿತರ ಜನಪರ ಯೋಜನೆಗಳ ಕುರಿತು ವಿವರಣೆ ನೀಡಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಜಂಟಿ ಕಾರ್ಯದರ್ಶಿಗಳಾದ ಡಾ. ಮರ್ಚೆಡ್ ಮಲ್ಲಿಕಾರ್ಜುನಗೌಡ ಅವರು, ಚೇಂಬರ್ ಸ್ಕಿಲ್ ಸೆಂಟರ್ ಮತ್ತು ಅಲ್ಲಿ ಸಿಗುವ ತರಬೇತಿಗಳ ಕುರಿತು ಸಮಗ್ರವಾಗಿ ವಿವರಿಸಿ, ಭವಿಷ್ಯದ ಯೋಜನೆಗಳನ್ನು ಪ್ರಸ್ತಾಪಿಸಿದರು.

### ತಾರಾನಾಥ ಆಯುರ್ವೇದ ಮಹಾವಿದ್ಯಾಲಯ

# 11ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ




**ಬಳ್ಳಾರಿ, ಸೆ.23.** ನಗರದ ಡಾ. ರಾಜಕುಮಾರ ರಸ್ತೆಯಲ್ಲಿರುವ ತಾರಾನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯಲ್ಲಿ 11ನೇ ರಾಷ್ಟ್ರೀಯ ಆಯುರ್ವೇದ ದಿನವನ್ನು ಬುಧವಾರ ಸಂಭ್ರಮದಿಂದ ಆಚರಿಸ ಲಾಯಿತು. ಈ ವರ್ಷ ಭವಿಷ್ಯದ ಆರೋಗ್ಯಕ್ಕಾಗಿ ಆಯುರ್ವೇದ' ಎಂಬ ಧ್ಯೇಯ ವಾಕ್ಯದೊಂದಿಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಸಂಸ್ಥೆಯ ನಿವೃತ್ತ ಆರ್‌ಎಂಒ ಡಾ. ಎನ್.ಲಕ್ಷ್ಮಿ ನರಸಿಂಹ, ಸಂಸ್ಥೆಯೊಂದಿಗಿನ ಒಡನಾಟ ಹಾಗೂ ಆಯುರ್ವೇದದ ಮಹತ್ವವನ್ನು ಸ್ಮರಿಸುತ್ತಾ, ಇಂದು ಕಾಲೇಜು ಮತ್ತು ಆಸ್ಪತ್ರೆ ಉತ್ತಮ ರೀತಿಯಲ್ಲಿ ಬೆಳೆದು ನಿಂತಿರುವುದಕ್ಕೆ ಶ್ರಮಿಸಿದ ಮಹನೀಯರ ಕೊಡುಗೆ ಅಪಾರ ಎಂದು ಶ್ಲಾಘಿಸಿದರು.

ದ್ರವ್ಯಗುಣ ವಿಭಾಗದ ಮುಖ್ಯಸ್ಥ ಡಾ. ರಾಜಶೇಖರ ಗಾಣಿಗೇರ ಅವರು ಮಾತನಾಡಿ, ಆಯುರ್ವೇದ ಇಂದು ವಿಶ್ವಮಟ್ಟದಲ್ಲಿ ಮನ್ನಣೆ ಗಳಿಸುತ್ತಿದೆ. ಇದು ಕೇವಲ ಚಿಕಿತ್ಸಾ ಪದ್ಧತಿಯಾಗಿರದೆ, ಆರೋಗ್ಯಕರ ಜೀವನ ಶೈಲಿಯನ್ನು ರೂಪಿಸುವ ಜೀವನ ವಿಜ್ಞಾನವಾಗಿದೆ. ಆಯುರ್ವೇದದ ಬೆಳವಣಿಗೆಯಲ್ಲಿ ಆಯುಷ್ ಮಂತ್ರಾಲಯದ ಪಾತ್ರ ಹಾಗೂ ತಾರಾನಾಥ ಸಂಸ್ಥೆಯ ಕೊಡುಗೆ ಮಹತ್ವದ್ದು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಜಾನಕಿ ವೈ. ಎಸ್. ಅವರು, ಆಯುರ್ವೇದದ ಜ್ಞಾನ ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಮತ್ತು ಸಾರ್ವಜನಿಕರ ಆರೋಗ್ಯ ರಕ್ಷಣೆಯಲ್ಲಿ ಆಯುರ್ವೇದದ ಪಾತ್ರವನ್ನು ಇನ್ನಷ್ಟು ಬಲಪಡಿಸುವುದು ಇಂದಿನ ಅಗತ್ಯವಾಗಿದೆ.

ಕಳೆದ ಹತ್ತು ದಿನಗಳಿಂದ ಪದವಿ, ಸ್ನಾತಕೋತ್ತರ ವಿದ್ಯಾರ್ಥಿಗಳು, ಹೌಸ್ ಸರ್ಜನ್‌ಗಳು ಹಾಗೂ ಸಾರ್ವಜನಿಕರಿಗಾಗಿ ಆಯೋಜಿಸಲಾಗಿದ್ದ ಆರೋಗ್ಯ ಜಾಗೃತಿ ಮತ್ತು ಶೈಕ್ಷಣಿಕ ಕಾರ್ಯಕ್ರಮಗಳ ಸಮಗ್ರ ವರದಿಯನ್ನು ನೋಡಲ್ ಅಧಿಕಾರಿ ಡಾ. ಸಂತೋಷ್ ಎಲ್. ಯಡಹಳ್ಳಿ ಮಂಡಿಸಿದರು. ಇದೇ ಸಂದರ್ಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ಹಾಗೂ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

# ಆಯುರ್ವೇದವು ಗ್ರಾಮಗಳಿಗೂ ತಲುಪಲಿ: ಡಾ. ಗಂಗಾಧರ ಸಂಬಣ್ಣಿ




**ವಿಜಯಪುರ,ಸೆ.23:** ಆಯುರ್ವೇದ ವೈದ್ಯ ಪದ್ಧತಿ ನಗರ ಪ್ರದೇಶಗಳಿಗೆ ಸೀಮಿತವಾಗದೇ ಹಳ್ಳಿ ಹಳ್ಳಿಗಳಿಗೂ ತಲುಪಿ ವ್ಯಾಪಕವಾಗಿ ಪ್ರಚಾರಗೊಳ್ಳಬೇಕು. ಪ್ರತಿಯೊಬ್ಬರೂ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಂಡು ಆಯುರ್ವೇದ ಪದ್ಧತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಗಂಗಾಧರ ಸಂಬಣ್ಣಿ ಕರೆ ನೀಡಿದರು.

ಧನ್ವಂತರಿ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯದ ವೈದ್ಯಾಧಿಕಾರಿ ಡಾ. ಭುವನೇಶ್ವರಿ ಬೇಳಕುಡಕರ ಮಾತನಾಡಿ, ಬದಲಾಗುತ್ತಿರುವ ಜೀವನಶೈಲಿಯಿಂದ ಮಕ್ಕಳಲ್ಲಿ ಬೊಜ್ಜು, ಯುವಕರಲ್ಲಿ ಹೃದಯ ಸಂಬಂಧಿ ಕಾಯಿಲೆಗಳು ಹಾಗೂ ಮಧ್ಯವಯಸ್ಕರಲ್ಲಿ ರಕ್ತದೊತ್ತಡ, ಮಧುಮೇಹ ಮತ್ತು ಕೀಲುನೋವು ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿವೆ. ಇವುಗಳ ನಿಯಂತ್ರಣಕ್ಕೆ ಸೂಕ್ತ ಜೀವನಶೈಲಿ, ಯೋಗಾಸನ, ಪ್ರಾಣಾಯಾಮ, ಧ್ಯಾನ ಪಾಲಿಸುವುದು ಅಗತ್ಯ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಂ.ಬಿ. ಬಿರಾದಾರ, ಆಯುರ್ವೇದ ವಿದ್ಯಾರ್ಥಿಗಳು ತಮ್ಮ ವೃತ್ತಿ ಜೀವನದಲ್ಲಿ ಈ ಪದ್ಧತಿಯ ತತ್ವಗಳನ್ನು ಅಳವಡಿಸಿಕೊಂಡು ಸಾರ್ವಜನಿಕರಲ್ಲಿ ಆರೋಗ್ಯ ಜಾಗೃತಿ ಮೂಡಿಸಬೇಕು. ದೀರ್ಘಕಾಲಿಕ ಆರೋಗ್ಯ ಸಮಸ್ಯೆಗಳ ನಿರ್ವಹಣೆಯಲ್ಲಿ ಆಯುರ್ವೇದದ ಮಹತ್ವವನ್ನು ಅರಿತುಕೊಳ್ಳಬೇಕು ಎಂದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ. ವಿದ್ಯಾವತಿ ಎಂ.ಅಥಣಿ ಮಾತನಾಡಿ, ಆಯುರ್ವೇದದ ಮಹತ್ವವನ್ನು ಸಾರ್ವಜನಿಕರಿಗೆ ತಲುಪಿಸುವುದು ದಿನಾಚರಣೆಯ ಉದ್ದೇಶವಾಗಿದೆ ಎಂದರು.

ಸಂಪನ್ಮೂಲ ವ್ಯಕ್ತಿ ಡಾ. ಬಿ.ಜಿ. ಪಾಟೀಲ ಅವರು ಆಯುರ್ವೇದ ಔಷಧಿಗಳ ಬಳಕೆ ಹಾಗೂ ಮನೆಮದ್ದುಗಳ ಕುರಿತು ಪ್ರಾತ್ಯಕ್ಷಿಕೆ ನೀಡಿದರು.

# ಪೌರಕಾರ್ಮಿಕರ ಸುರಕ್ಷತೆ, ಸವಲತ್ತಿಗೆ ಆದ್ಯತೆ



**ವಿಜಯಪುರ, ಸೆ. 23 –** ಸಮಾಜದ ಸ್ವಚ್ಛತೆ ಹಾಗೂ ನೈರ್ಮಲ್ಯ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುವ ಪೌರ ಕಾರ್ಮಿಕರ ಹಿತರಕ್ಷಣೆ ಹಾಗೂ ಅವರಿಗೆ ಸರ್ಕಾರದ ಸವಲತ್ತುಗಳು ಸಮರ್ಪಕವಾಗಿ ತಲುಪಿಸಿ ಅವರ ಜೀವನ ಮಟ್ಟ ಸುಧಾರಣೆಗೆ ಆದ್ಯತೆ ನೀಡಬೇಕೆಂದು ವಿಜಯಪುರ ಉಪವಿಭಾಗಾಧಿಕಾರಿ ಜುಫಿಶಾನ್ ಹಕ್ ಅವರು ತಿಳಿಸಿದರು.

ಬುಧವಾರ ನಡೆದ ಉಪವಿಭಾಗ ಮಟ್ಟದ ಸಫಾಯಿ ಕರ್ಮಚಾರಿ, ಜಾಗೃತಿ ಹಾಗೂ ಉಸ್ತುವಾರಿ ಸಮಿತಿ ದೌರ್ಜನ್ಯ ತಡೆ ಮತ್ತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುವ ಪೌರಕಾರ್ಮಿಕರು ಮತ್ತು ಸ್ವಚ್ಛತಾ ಸಿಬ್ಬಂದಿಗೆ ಗುಣಮಟ್ಟದ ಸುರಕ್ಷತಾ ಪರಿಕರಗಳನ್ನು ಕಡ್ಡಾಯವಾಗಿ ಒದಗಿಸಬೇಕು. ಸಿಬ್ಬಂದಿ ಕೆಲಸದ ವೇಳೆ ಸುರಕ್ಷತಾ ಪರಿಕರಗಳನ್ನು ಸಮರ್ಪಕವಾಗಿ ಬಳಸುತ್ತಿರುವುದನ್ನು ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಭೇಟಿ ಪರಿಶೀಲನೆ ಮಾಡಿ ಖಚಿತಪಡಿಸಿಕೊಳ್ಳಬೇಕು ಎಂದು ಸೂಚಿಸಿದರು.

ಅರ್ಹ ಪೌರ ಕಾರ್ಮಿಕರಿಗೆ ವಸತಿ ಸೌಲಭ್ಯ ಒದಗಿಸಿ ಅವರ ಕುಟುಂಬದ ಅವಲಂಬಿತರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಹಾಗೂ ಆರ್ಥಿಕ ನೆರವು ಒದಗಿಸಿ ಸ್ವಾವಲಂಬಿಗಳನ್ನಾಗಿಸಲು ಪೌರ ಕಾರ್ಮಿಕರ ಕುಂದುಕೊರತೆ ಹಾಗೂ ದೂರುಗಳಿಗೆ ತಕ್ಷಣ ಸ್ಪಂದಿಸಬೇಕು.ಅವರ ಅಹವಾಲುಗಳನ್ನು ಆಲಿಸಿ, ಪರಿಹರಿಸಬೇಕು. ಜಾತಿ ಪ್ರಮಾಣಪತ್ರಕ್ಕೆ ಸಂಬಂಧಿಸಿದ ಸಮಸ್ಯೆಗಳ ಪರಿಹರಿಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

# ಜಿಲ್ಲೆಯಲ್ಲಿ ಗಣೇಶ ವಿಸರ್ಜನೆಗೆ ಸರ್ಕಾರದ ಮಾರ್ಗಸೂಚಿ ಪಾಲಿಸಿ: ಡಿ.ಸಿ ಸಲಹೆ



**ರಾಯಚೂರು, ಸೆ. 23:** ಜಿಲ್ಲೆಯಲ್ಲಿ ಸೆ.25ರಂದು ಗಣೇಶ ವಿಸರ್ಜನೆಯ ಕೊನೆಯ ದಿನವಾಗಿದ್ದು, ಈ ಸಂದರ್ಭದಲ್ಲಿ ಸರ್ಕಾರದ ಮಾರ್ಗಸೂಚಿಗಳನ್ನು ಎಲ್ಲ ಗಜಾನನ ಮಂಡಳಿಗಳು ಕಡ್ಡಾಯವಾಗಿ ಪಾಲಿಸಿ, ಶಾಂತಿಯುತವಾಗಿ ಉತ್ಸವ ಆಚರಿಸಬೇಕು. ದುರ್ಘಟನೆ ನಡೆಯದಂತೆ ಮುನ್ನೆಚ್ಚರಿಕೆ ವಹಿಸಿ, ಜಿಲ್ಲಾಡಳಿತಕ್ಕೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್.ಸೂಚಿಸಿದರು.

ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಶ್ರೀಗೌರಿ–ಗಣೇಶ ವಿಸರ್ಜನೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ರಾಯಚೂರು ನಗರದ ಖಾಸಬಾವಿಗೆ ಗಣೇಶ ವಿಸರ್ಜನೆಗೆ ತೆರಳುವ ಸಂದರ್ಭದಲ್ಲಿ ಜನರು ನೀರಿನೊಳಗೆ ಇಳಿಯದಂತೆ ಕಟ್ಟುನಿಟ್ಟಿನ ನಿರ್ಬಂಧ ವಿಧಿಸಬೇಕು. ಈ ಹಿಂದೆ ಕಾಲು ಜಾರಿ ವ್ಯಕ್ತಿಯೊಬ್ಬರು ನೀರಿನಲ್ಲಿ ಬಿದ್ದ ಘಟನೆ ನಡೆದಿರುವುದರಿಂದ ಮುನ್ನೆಚ್ಚರಿಕೆ ವಹಿಸಬೇಕು. ಮಹಾನಗರ ಪಾಲಿಕೆ ವತಿಯಿಂದ ಗಣೇಶ ಮೂರ್ತಿಗಳನ್ನು ಕ್ರೇನ್ ಮೂಲಕ ಅಥವಾ ನಿಗದಿತ ಸುರಕ್ಷಿತ ವಿಧಾನದಲ್ಲೇ ವಿಸರ್ಜನೆ ಮಾಡಬೇಕು. ರಾತ್ರಿ 11 ಗಂಟೆಯ ನಂತರ ಬ್ಯಾರಿಕೇಡ್ ದಾಟಿ ಯಾರೂ ಮುಂದೆ ಹೋಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಾಪಾತ್ರ ಮಾತನಾಡಿ, ಮದ್ಯಪಾನ ಮಾಡಿ ಟ್ರ್ಯಾಕ್ಟರ್, ಆಟೋ, ಕಾರು ಅಥವಾ ವಿಸರ್ಜನಾ ಸ್ಥಳಕ್ಕೆ ಬರಬಾರದು. ಒಂದು ವಾರ ದಿಂದ ಪಾಲಿಕೆ ವತಿಯಿಂದ ಮೈಕ್ ಮೂಲಕ ವಿಸರ್ಜನಾ ಸ್ಥಳದ ಸಮೀಪ ನಿರಂತರವಾಗಿ ಜಾಗೃತಿ ಮೂಡಿಸ ಲಾಗುತ್ತಿದೆ. ಸರ್ಕಾರಿ ಸಿಬ್ಬಂದಿಯೊಂದಿಗೆ ಸಾರ್ವ ಜನಿಕರು ಸಹಕರಿಸಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಮಾತನಾಡಿ, ಗಜಾನನ ಮಂಡಳಿಗಳು ನಿಗದಿತ ಸಮಯಕ್ಕೆ ಧ್ವನಿವರ್ಧಕಗಳನ್ನು ಸ್ಥಗಿತಗೊಳಿಸಬೇಕು.

ಡಿಜೆ ಬಳಕೆ ಯಿಂದ ಮಕ್ಕಳು, ವೃದ್ಧರು, ರೋಗಿ ಗಳು ಹಾಗೂ ಆಸ್ಪತ್ರೆಗಳಿಗೆ ಯಾವುದೇ ತೊಂದರೆಯಾಗದಂತೆ ಪೊಲೀಸ್ ಇಲಾಖೆಯೊಂದಿಗೆ ಸಂಪೂರ್ಣ ಸಹಕರಿಸಬೇಕು ಎಂದು ಸೂಚಿಸಿದರು.

### 8 ಪ್ರಕರಣ ದಾಖಲು:

ಗಣೇಶ ಮೂರ್ತಿ ಪ್ರತಿಷ್ಠಾಪನೆ, ಮೆರವಣಿಗೆ ಸಂದರ್ಭದಲ್ಲಿ ಮಿತಿಗಿಂತ ಹೆಚ್ಚಿನ ಶಬ್ದದಲ್ಲಿ ಡಿಜೆ ಬಳಸಿ ಶಬ್ದ ಮಾಲಿನ್ಯ ನಿಯಮ ಉಲ್ಲಂಘಿಸಿದ ಡಿಜೆ ಮಾಲೀಕರು ಹಾಗೂ ಆಪರೇಟರ್‌ಗಳ ವಿರುದ್ಧ ಜಿಲ್ಲೆಯಲ್ಲಿ 8 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಅರುಣಾಂಗ್ಷು ಗಿರಿ ತಿಳಿಸಿದರು.

# ಸೆ.28–30ರಂದು ರಾಷ್ಟ್ರವ್ಯಾಪಿ ಬ್ಯಾಂಕ್ ನೌಕರರ ಮುಷ್ಕರ ಹಿನ್ನೆಲೆ: ಬ್ಯಾಂಕುಗಳು ಬಂದ್

## ಸೆ.25 ರೊಳಗೆ ಪ್ರಮುಖ ಬ್ಯಾಂಕಿಂಗ್ ವ್ಯವಹಾರ ಪೂರ್ಣಗೊಳಿಸಿ: ಪಿ ಮೋಹನ್



**ಕರ್ನೂಲ್ ಸೆ 23.** ಸೆಪ್ಟೆಂಬರ್ 28, 29 ಮತ್ತು 30 ರಂದು ಯುನೈಟೆಡ್ ಫೋರಮ್ ಆಫ್ ಬ್ಯಾಂಕ್ ಯೂನಿಯನ್ಸ್ ಆಶ್ರಯದಲ್ಲಿ ರಾಷ್ಟ್ರವ್ಯಾಪಿ ಬ್ಯಾಂಕ್ ನೌಕರರ ಮುಷ್ಕರಕ್ಕೆ ಕರೆ ನೀಡಿರುವ ಹಿನ್ನೆಲೆಯಲ್ಲಿ, ಕರ್ನೂಲ್ ಜಿಲ್ಲೆಯಲ್ಲಿ ಬ್ಯಾಂಕಿಂಗ್ ಸೇವೆಗಳಿಗೆ ಅಡ್ಡಿಯಾಗದಂತೆ ಎಲ್ಲಾ ಬ್ಯಾಂಕುಗಳು ಮುಂಚಿತವಾಗಿ ವ್ಯವಸ್ಥೆ ಮಾಡಿಕೊಳ್ಳಬೇಕೆಂದು ಕರ್ನೂಲ್ ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕ ಪಿ. ಮೋಹನ್ ಹೇಳಿದರು.

ಜನರಿಗೆ ಆಗುವ ಅನಾನುಕೂಲತೆಯನ್ನು ಕಡಿಮೆ ಮಾಡಲು, ಸಾರ್ವಜನಿಕ ವಲಯದ ಬ್ಯಾಂಕುಗಳು ಮತ್ತು ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳು ಸೆ.27, 2026ರ ಭಾನುವಾರ ದಂದು ಸಾಮಾನ್ಯ ಕೆಲಸದ ಸಮಯದಲ್ಲಿ ಕಾರ್ಯನಿರ್ವಹಿಸುವಂತೆ ಸರ್ಕಾರ ಕ್ರಮಗಳನ್ನು ತೆಗೆದುಕೊಂಡಿದೆ.

ಭಾರತೀಯ ರಿಸರ್ವ್ ಬ್ಯಾಂಕ್ ಸೆಪ್ಟೆಂಬರ್ 27 ರಂದು ಬ್ಯಾಂಕ್ ಶಾಖೆಗಳು, ಕಚೇರಿಗಳು, ಎಟಿಎಂ–ಸಂಪರ್ಕಿತ ಶಾಖೆಗಳು ಮತ್ತು ಕರೆನ್ಸಿ ಚೆಸ್ಟ್‌ಗಳು ಸಂಪೂರ್ಣವಾಗಿ ಕಾರ್ಯನಿರ್ವಹಿಸಲು ಅವಕಾಶ ನೀಡಿದೆ.

ಸೆ.26 4ನೇ ಶನಿವಾರ ರಜಾದಿನವಾಗಿದ್ದರೆ, ಸೆ.27 ರ ಭಾನುವಾರ ಬ್ಯಾಂಕುಗಳು ಸಾಮಾನ್ಯ ವಾಗಿ ಕಾರ್ಯನಿರ್ವಹಿಸುತ್ತವೆ. ತರುವಾಯ, ಸೆ.28, 29 ಮತ್ತು 30ರಂದು ಪ್ರಸ್ತಾವಿತ ಬ್ಯಾಂಕ್ ನೌಕರರ ಮುಷ್ಕರದ ಹಿನ್ನೆಲೆಯಲ್ಲಿ ಶಾಖೆಗಳ ನೇರ ಕಾರ್ಯಾಚರಣೆಯಲ್ಲಿ ಅಡ್ಡಿಯಾಗುವ ಸಾಧ್ಯತೆಯನ್ನು ಗಮನ ದಲ್ಲಿಟ್ಟುಕೊಂಡು, ಸಾರ್ವಜನಿಕರಿಗೆ ಅಗತ್ಯವಿರುವ ಅಗತ್ಯ ಬ್ಯಾಂಕಿಂಗ್ ಸೇವೆಗಳು ಲಭ್ಯವಿರುವುದನ್ನು ಖಚಿತಪಡಿಸಿಕೊಳ್ಳಲು ಬ್ಯಾಂಕುಗಳಿಗೆ ಸೂಕ್ತವಾದ SLBC ಮಾರ್ಗಸೂಚಿಗಳು ಮತ್ತು ವ್ಯವಹಾರ ಮುಂದುವರಿಕೆ ಯೋಜನೆ ಅನ್ನು ಜಾರಿಗೆ ತರಲು ಸೂಚಿಸಲಾಗಿದೆ.

# ಬೀದರ್: ಹೈನುಗಾರಿಕೆಗೆ ಉತ್ತೇಜನ: ಧರ್ಮಸ್ಥಳದಿಂದ 2 ಕೋಟಿ ರೂ. ಅನುದಾನ



**ವೀರೇಂದ್ರ ಹೆಗ್ಗಡೆ ಅವರ ಶ್ರೇಷ್ಠ ಚಿಂತನೆ, ಜನಪರ ಕಾಳಜಿ ಮತ್ತು ಧರ್ಮ ಸೇವೆ ಅವರ್ಣನೀಯ. ಲಕ್ಷಾಂತರ ಬಡ ಕುಟುಂಬಗಳಿಗೆ ಆರ್ಥಿಕ, ಸಾಮಾಜಿಕವಾಗಿ ಶಕ್ತಿ ತುಂಬಿದ್ದಾರೆ.**
**-ವಿರೂಪಾಕ್ಷ ಗಾದಗಿ, ಅಧ್ಯಕ್ಷರು, ಧರ್ಮಸ್ಥಳ ಜನಜಾಗೃತಿ ವೇದಿಕೆ.**

**ಬೀದರ್, ಸೆ. 23:** ಧರ್ಮಸ್ಥಳ ಶ್ರೀ ಕ್ಷೇತ್ರ ಮಂಜುನಾಥೇಶ್ವರ ಮಂದಿರದ ಧರ್ಮಾಧಿಕಾರಿ ಹಾಗು ರಾಜ್ಯಸಭೆ ಸದಸ್ಯ ಡಾ.ಡಿ.ವೀರೇಂದ್ರ ಹೆಗ್ಗಡೆ ಅವರು, ತಮ್ಮ ಸಂಸದರ ನಿಧಿಯಿಂದ ಬೀದರ್ ಜಿಲ್ಲೆಯಲ್ಲಿ ಹೈನುಗಾರಿಕೆಗೆ ಉತ್ತೇಜನ ನೀಡಲು ಮತ್ತೆ 2 ಕೋಟಿ ಅನುದಾನ ಒದಗಿಸಿದ್ದಾರೆ ಎಂದು ಧರ್ಮಸ್ಥಳ ಜನಜಾಗೃತಿ ವೇದಿಕೆ ಜಿಲ್ಲಾಧ್ಯಕ್ಷ ವಿರೂಪಾಕ್ಷ ಗಾದಗಿ ತಿಳಿಸಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಹಾಗೂ ಧರ್ಮಸ್ಥಳ ಜನಜಾಗೃತಿ ವೇದಿಕೆ ಜಿಲ್ಲಾ ಸಮಿತಿ ಸಭೆ ಉದ್ಘಾಟಿಸಿ, ಈಗಾಗಲೇ ಹೆಗ್ಗಡೆ ಅವರು ರಾಜ್ಯಸಭೆ ನಿಧಿಯಿಂದ ಜಿಲ್ಲೆಗೆ 5 ಕೋಟಿ ಅನುದಾನ ಕಲ್ಪಿಸಿ ಹೈನುಗಾರಿಕೆಗೆ ಶಕ್ತಿ ತುಂಬಿದ್ದಾರೆ. ಇದೀಗ ಮತ್ತೆ ರೂ.2 ಕೋಟಿ ಕೊಟ್ಟು ಮತ್ತೆ ನೆರವಿನ ಹಸ್ತ ಚಾಚಿದ್ದಾರೆ. ಹೆಗ್ಗಡೆ ಅವರ ಈ ನೆರವು ಹಿಂದುಳಿದ ಮತ್ತು ಗಡಿ ಭಾಗದ ಅಭಿವೃದ್ಧಿ ಬಗ್ಗೆ ಅವರಿಗಿರುವ ಕಾಳಜಿಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಬೀದರ್ ಜಿಲ್ಲೆಯಲ್ಲಿ ಹೈನುಗಾರಿಕೆಗೆ ವಿಪುಲ ಅವಕಾಶಗಳಿವೆ. ಹೈನೋದ್ಯಮ ಮೂಲಕ ಗ್ರಾಮೀಣ ಬಡವರ ಆರ್ಥಿಕತೆಗೆ ಶಕ್ತಿ ತುಂಬಲು ಸಾಧ್ಯ ಎಂದರಿತು ಹೆಗ್ಗಡೆ ಅವರು ತಮ್ಮ ರಾಜ್ಯಸಭೆ ನಿಧಿ ಜಿಲ್ಲೆಯ ಹೈನುಗಾರಿಕೆಗೆ ಉತ್ತೇಜಿಸಲು ನೀಡಿದ್ದಾರೆ. ಹೆಗಡೆ ಅವರ ಈ ನೆರವಿನಿಂದಾಗಿ ಕಳೆದ 2-3 ವರ್ಷಗಳಲ್ಲಿ ಇಲ್ಲಿನ ಹಾಲು ಉತ್ಪಾದನೆಯೂ ಕೂಡ ಗಣನೀಯವಾಗಿ ಹೆಚ್ಚಿದೆ. ಅನೇಕ ರೈತ ಮಹಿಳೆಯರು ಹೈನುಗಾರಿಕೆಯತ್ತ ಮುಖ ಮಾಡಿದ್ದಾರೆ. ಈ ಹಿಂದೆ ಹಾಲು ಉತ್ಪದನೆ ಕೊರತೆಯಿಂದ ಮುಚ್ಚಿದ್ದ ಹಲವು ಹಾಲು ಉತ್ಪಾದಕ ಸಂಘಗಳು ಈಗ ಮತ್ತೆ ಬಾಗಿಲು ತೆರೆದು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ (ಎಸ್‌ಕೆಡಿಆರ್‌ಡಿಪಿ) ಸಂಸ್ಥೆ ಅಗಾಧ ಸಾಧನೆ ಮಾಡಿ ಕೋಟ್ಯಂತರ ಜನರ ಬದುಕನ್ನೇ ಬದಲಿಸಿದೆ. ಸ್ತ್ರೀಯರ ಸಬಲೀಕರಣ, ಗ್ರಾಮ ಅಭಿವೃದ್ಧಿ, ರೈತರ ಬಲವರ್ಧನೆ, ಮಂದಿರ ಜೀರ್ಣೋದ್ಧಾರ, ಕೆರೆ ಹೂಳೆತ್ತುವಿಕೆ, ಬಡ ಮಕ್ಕಳಿಗೆ ಶಿಕ್ಷಣ, ಚಟಮುಕ್ತ ಸಮಾಜ ನಿರ್ಮಾಣ ಹೀಗೆ ಹತ್ತಾರು ಕೆಲಸಗಳು ಸಮಾಜದಲ್ಲಿ ದೊಡ್ಡ ಪರಿವರ್ತನೆಗೆ ನಾಂದಿ ಹಾಡಿವೆ ಎಂದು ವಿವರಿಸಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಜಿಲ್ಲಾ ವ್ಯವಸ್ಥಾಪಕ ಮುರುಳೀಧರ ಎಚ್. ಎಸ್.,ಮಾತನಾಡಿ, ಎಸ್‌ಕೆಆರ್‌ಡಿಪಿ ಸಂಸ್ಥೆಯು ಕಳೆದ ನಾಲ್ಕು ದಶಕಗಳಿಂದ ಬಡವರಿಗೆ ಮೇಲೆತ್ತಲು ದುಡಿಯುತ್ತಿದೆ. ಹೆಗ್ಗಡೆ ಅವರು ಆರು ದಶಕಗಳಿಂದ ಸಮಾಜ ಕ್ಕಾಗಿ ಸಮರ್ಪಿತರಾಗಿ ಹಗಲಿರುಳೆನ್ನದೇ ದುಡಿಯುತ್ತಿದ್ದಾರೆ. ಸಂಸ್ಥೆಯಿಂದ 6 ಲಕ್ಷ ಸ್ವಸಹಾಯ ಸಂಘಗಳು ರಚನೆಯಾಗಿದ್ದು, 53 ಲಕ್ಷ ಸದಸ್ಯರಿದ್ದಾರೆ. ಬೀದರ್ ಜಿಲ್ಲೆಯಲ್ಲಿ 1.91 ಲಕ್ಷ ಸ್ವಸಹಾಯ ಸಂಘದ ಸದಸ್ಯರಿದ್ದು, ಈ ಪೈಕಿ 81 ಸಾವಿರ ಸದಸ್ಯರಿಗೆ ಸ್ವಾವಲಂಬಿ ಬದುಕು ಕಟ್ಟಿಕೊಡಲು ರೂ.593 ಕೋಟಿ ಸಾಲ ವಿತರಿಸಲಾಗಿದೆ ಎಂದರು.




ನೇರ ಪಾವತಿ ವ್ಯವಸ್ಥೆ ಮತ್ತು ಉದ್ಯೋಗ ಭದ್ರತೆಯನ್ನು ಒತ್ತಾಯಿಸಿ, ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಬುಧವಾರ BWSSB ಗುತ್ತಿಗೆ ಕಾರ್ಮಿಕರ ಸಂಘದ ಸದಸ್ಯರು ಧರಣಿ ನಡೆಸಿದರು.

**ವಿವಿಧ ಕಾರ್ಯಕ್ರಮಗಳ ಕರಪತ್ರ ಬಿಡುಗಡೆ**

## ತಂತ್ರಜ್ಞಾನ ಸ್ಪರ್ಶದೊಂದಿಗೆ ವಿಶ್ವ ಪ್ರವಾಸೋದ್ಯಮ ದಿನಾಚರಣೆ



**ವಿಜಯಪುರ,ಸೆ.22:** ವಿಶ್ವ ಪ್ರವಾಸೋದ್ಯಮ ದಿನಾಚರಣೆ ಅಂಗವಾಗಿ ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ, ಹಾಗೂ ವಿವಿಧ ಇಲಾಖೆ-ಸಂಸ್ಥೆಗಳ ಜಂಟಿ ಸಹಯೋಗದೊಂದಿಗೆ ಆಯೋಜಿಸಲಾಗಿರುವ ವಿಶೇಷ ಕಾರ್ಯಕ್ರಮಗಳ ವಿಷಯ ಸೂಚಿ ಹೊಂದಿರುವ ಕರಪತ್ರವನ್ನು ಜಿಲ್ಲಾಧಿಕಾರಿ ಡಾ. ಆನಂದ.ಕೆ ಅವರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸೋಮವಾರ ಬಿಡುಗಡೆಗೊಳಿಸಿದರು.

ಈ ಬಾರಿಯ ವಿಶ್ವ ಪ್ರವಾಸೋದ್ಯಮ ದಿನವನ್ನು "ಡಿಜಿಟಲ್ ಕಾರ್ಯಸೂಚಿ ಮತ್ತು ಕೃತಕ ಬುದ್ಧಿಮತ್ತೆ ಬಳಸಿ ಪ್ರವಾಸೋದ್ಯಮದ ಮರುಸೃಷ್ಟಿ ಎಂಬ ಘೋಷ ವಾಕ್ಯದೊಂದಿಗೆ ಆಚರಿಸಲಾಗುತ್ತಿದ್ದು, ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳನ್ನು ಉತ್ತೇಜಿಸಲು ಹಲವು ಸ್ಪರ್ಧೆಗಳು ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

## ವಿಜಯಪುರದಲ್ಲಿ ವಿಶ್ವ ಆಲ್ಜೈಮರ್ಸ್ ದಿನಾಚರಣೆ ಜಾಗೃತಿ ಕಾರ್ಯಕ್ರಮ




**ವಿಜಯಪುರ, ಸೆ.23:** ಡಿಮೆನ್ಷಿಯಾ (ಆಲ್ಜೈಮರ್ಸ್) ಕಾಯಿಲೆಯನ್ನು ನಿಯಂತ್ರಿಸುವುದು ಮತ್ತು ತಡೆಯುವುದು ಸಮಾಜದ ಪ್ರತಿಯೊಬ್ಬ ವ್ಯಕ್ತಿಯ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಮಲ್ಲನಗೌಡ ಬಿರಾದಾರ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ವಾರ್ತಾ ಮತ್ತು ಸಂಪರ್ಕ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮದ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾಸ್ಪತ್ರೆಯ ಆವರಣದಲ್ಲಿರುವ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಆಲ್ಜೈಮರ್ಸ್ ದಿನಾಚರಣೆ ಜನಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಈ ನಿಟ್ಟಿನಲ್ಲಿ ಎಷ್ಟು ಬೇಗ ತಿಳಿಯುತ್ತದೆಯೋ, ಅಷ್ಟು ಆರೈಕೆ ಸಾಧ್ಯ ಎಂಬ ಘೋಷವಾಕ್ಯದೊಂದಿಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಅತ್ಯಗತ್ಯ ಎಂದರು.

ಜಿಲ್ಲಾ ಕುಷ್ಟರೋಗ ನಿರ್ಮೂಲನಾ ಅಧಿಕಾರಿ ಡಾ. ಅರ್ಚನಾ ಕುಲಕರ್ಣಿ ಸಾರ್ವಜನಿಕರು ಮೆದುಳಿನ ಆರೋಗ್ಯದ ಬಗ್ಗೆ ಭಯಪಡುವ ಅಗತ್ಯವಿಲ್ಲ. ಜಿಲ್ಲಾ ಆಸ್ಪತ್ರೆಯಲ್ಲಿ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮದಡಿ ಉಚಿತ ಚಿಕಿತ್ಸೆ ಹಾಗೂ ಆಪ್ತ ಸಮಾಲೋಚನೆ ಲಭ್ಯವಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಡಿಮೆನ್ಷಿಯಾ ಮೆದುಳಿಗೆ ಸಂಬಂಧಿಸಿದ ಕಾಯಿಲೆಯಾಗಿದ್ದು, ನರತಂತು

## ಬಸವಾದಿ ಶಿವಶರಣರ ಹಿಂದೂ ಸಮಾವೇಶ ಸೆ.27ರಂದು




**ಕಲಬುರಗಿ, ಸೆ. 23:** ಜಾತಿ-ಜಾತಿಗಳ ನಡುವೆ ನಡೆಯುವ ಸಂಘರ್ಷಗಳನ್ನು ತಡೆದು, ಸಮಾಜದ ಎಲ್ಲ ವರ್ಗಗಳನ್ನು ಒಗ್ಗೂಡಿಸುವ ಉದ್ದೇಶದಿಂದ ಕಲಬುರಗಿಯಲ್ಲಿ ಸೆಪ್ಟೆಂಬರ್ 27ರಂದು ಸಂಜೆ 4 ಗಂಟೆಗೆ ನೂತನವಿದ್ಯಾಲಯ ಮೈದಾನದಲ್ಲಿ ಬಸವಾದಿ ಶಿವಶರಣ-ರ ಹಿಂದೂ ಸಮಾಜೇಶ್ವರ ಸಮಾವೇಶ ಕನ್ನೇರಿ ಅದೃಶ್ಯ ಕಾಡಸಿದ್ದೇಶ್ವರ ಶ್ರೀಗಳ ನೇತೃತ್ವದಲ್ಲಿ ಆಯೋಜಿಸಲಾಗಿದೆ.

ಸಮಾವೇಶದಲ್ಲಿ ಜಿಲ್ಲೆಯ ಸುಮಾರು 300 ಮಠಾಧೀಶರು ಪಾಲ್ಗೊಳ್ಳಲಿದ್ದಾರೆ ಎಂದು ಸಂಘಟಿಕರಾದ ಎಂ.ಎಸ್.ಪಾಟೀಲ್ ನರಿಬೋಳ ಅವರು ಸುದ್ದಿಗೋಷ್ಠಿಯಲ್ಲಿ, ಕಟ್ಟೆದೇವರ ಶ್ರೀ ಆದ್ಯಶಕ್ತಿಯ ಸಾನ್ನಿಧ್ಯದಲ್ಲಿ ಹಾಗೂ ನಾಡಿನ ಹರಗುರು, ಚರಮೂರ್ತಿಗಳ ನೇತೃತ್ವದಲ್ಲಿ, ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಈ ಸಮಾವೇಶ ನಡೆಯಲಿದೆ. ಅಖಂಡ ಹಿಂದೂ ಸಮಾಜದ ಎಲ್ಲ ಜಾತಿ-ಸಮುದಾಯಗಳ ಜನರನ್ನು ಒಗ್ಗೂಡಿಸಿಕೊಂಡು ಸಮಾನತೆ, ಕಾಯಕ ಮತ್ತು ದಾಸೋಹದಂತಹ ಬಸವಾದಿ ಶರಣರ ತತ್ವಗಳನ್ನು ಸಾರುವುದು ಸಮಾವೇಶದ ಉದ್ದೇಶವಾಗಿದೆ.

ಇದೇ ಸಂದರ್ಭದಲ್ಲಿ ಕೃಷಿ, ಗೋಸಂರಕ್ಷಣೆ ಸೇರಿದಂತೆ ಕೃಷಿ ಸಂಬಂಧಿತ ಪ್ರಮುಖ ವಿಷಯಗಳ ಕುರಿತು ರೈತರಿಗೆ ಅನುಕೂಲವಾಗುವ ಮಾಹಿತಿಯನ್ನು ನೀಡಲಾಗುವುದು. ಕಾರ್ಯಕ್ರಮದಲ್ಲಿ ವೈಜ್ಞಾನಿಕ ಕೃಷಿ ಪದ್ಧತಿಗಳು ಹಾಗೂ ಕೃಷಿಗೆ ಸಂಬಂಧಿಸಿದ ಮಾಹಿತಿಯನ್ನು ಪರಿಚಯಿಸಲಾಗುವುದು.

ಸುಮಾರು 2,000 ಮಠಾಧೀಶರಿಂದ ಕುಂಭ ಮೆರವಣಿಗೆ ಹಾಗೂ ಡೊಳ್ಳು, ನಗಾರಿ ಸೇರಿದಂತೆ ವಿವಿಧ ಕಲಾ ತಂಡಗಳೊಂದಿಗೆ ಭವ್ಯ ಮೆರವಣಿಗೆ ನಡೆಸಿ, ಜಗತ್ ವೃತ್ತದಿಂದ ನೂತನ ವಿದ್ಯಾಲಯ ಮೈದಾನದವರೆಗೆ ಮೆರವಣಿಗೆ ನಡೆಯಲಿದೆ. ನೂತನ ವಿದ್ಯಾಲಯದ ಆವರಣದಲ್ಲಿ ಬೃಹತ್‌ವೇದಿಕೆ ಕಾರ್ಯಕ್ರಮ ನಡೆಯಲಿದ್ದು, 300ಕ್ಕೂ ಅಧಿಕ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಜಿಲ್ಲೆಯಾದ್ಯಂತ ಜನರು ಭಾಗವಹಿಸಲಿದ್ದಾರೆ.

ಈ ಕಾರ್ಯಕ್ರಮಕ್ಕೆ ಕಲಬುರಗಿ ಜಿಲ್ಲಾ ವೀರಶೈವ ಜಂಗಮ ಅರ್ಚಕರ ಹಾಗೂ ಪುರೋಹಿತರ ಸಂಘದ ಸದಸ್ಯರು ಸಹಸ್ರಾರು ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

# ಆಯುಷ್ ವೈದ್ಯರಿಂದ ಅನಿರ್ದಿಷ್ಟಾವಧಿ ಮುಷ್ಕರ



**ರಾಯಚೂರು, ಸೆ. 23:** ಆಯುಷ್ ವೈದ್ಯರ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಹಾಗೂ ವೈದ್ಯರಿಗೆ ಸುರಕ್ಷಿತ ಮತ್ತು ಕಾನೂನುಬದ್ಧ ವೃತ್ತಿ ವಾತಾವರಣ ಕಲ್ಪಿಸಬೇಕು ಎಂದು ಒತ್ತಾಯಿಸಿ ಆಯುಷ್ ಫೆಡರೇಷನ್ ಆಫ್ ಇಂಡಿಯಾ (ಎಎಫ್‌ಐ) ಕರ್ನಾಟಕ ಘಟಕದ ನೇತೃತ್ವದಲ್ಲಿ ಆಯುಷ್ ವೈದ್ಯರು ನಗರದ ಟಿಪ್ಪು ಸುಲ್ತಾನ್ ಉದ್ಯಾನದಲ್ಲಿ ಮಂಗಳವಾರ ಅನಿರ್ದಿಷ್ಟಾವಧಿ ಮುಷ್ಕರ ನಡೆಸಿದರು.

ಪ್ರಾಥಮಿಕ ಆರೋಗ್ಯ ಸೇವೆಯ ಹಂತದಲ್ಲಿ ಆಧುನಿಕ ಔಷಧಗಳ ಸೂಕ್ತ ಬಳಕೆಗೆ ಕಾನೂನು ಮತ್ತು ನಿಯಮಾನುಸಾರ ಅಗತ್ಯ ಅನುಮತಿ ಹಾಗೂ ವ್ಯವಸ್ಥೆ ಕಲ್ಪಿಸಬೇಕು. ಈ ಸಂಬಂಧ 2023ರ ಡಿಸೆಂಬರ್ 28ರಂದು ಹೊರಡಿಸಲಾದ ಎನ್‌ಸಿಐಎಸ್‌ಎಂ ಗೆಜೆಟ್ ಅಧಿಸೂಚನೆ ಅನ್ನು ರಾಜ್ಯದಲ್ಲಿ ಯಥಾವತ್ತಾಗಿ ಜಾರಿಗೊಳಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಕಾಯ್ದೆ (ಕೆಪಿಎಂಇಎ) ಹಾಗೂ ಅನ್ವಯಿಸುವ ನಿಯಮಾವಳಿಗಳ ಪ್ರಕಾರ ವೈದ್ಯಕೀಯ ಸೇವೆಗಳಿಗೆ ಸಂಬಂಧಿಸಿದ ದೂರುಗಳನ್ನು ಕಾನೂನುಬದ್ಧವಾಗಿ ಪರಿಶೀಲಿಸಬೇಕು. ರೋಗಿ ಅಥವಾ ಅವರ ಅಧಿಕೃತ ಸಂಬಂಧಿಕರಿಂದ ಸಲ್ಲಿಕೆಯಾಗುವ ದೂರುಗಳಿಗೆ ನಿಗದಿತ ಕಾನೂನು ಪ್ರಕ್ರಿಯೆ ಅನುಸರಿಸಬೇಕು ಎಂದು ಒತ್ತಾಯಿಸಿದರು.

ಆಯುಷ್ ವೈದ್ಯರು ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಅನಗತ್ಯವಾಗಿ ಕಿರುಕುಳ, ಬೆದರಿಕೆ ಅಥವಾ ಒತ್ತಡ ಹೇರುವ ಹಾಗೂ ವೃತ್ತಿ ನಿರ್ವಹಣೆಗೆ ಅಡ್ಡಿಪಡಿಸುವವರ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು. ವೈದ್ಯರಿಗೆ ಸುರಕ್ಷಿತ ವಾತಾವರಣ ಕಲ್ಪಿಸುವ ಮೂಲಕ ಪ್ರಾಥಮಿಕ ಆರೋಗ್ಯ ಸೇವೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಆಯುಷ್ ಫೆಡರೇಷನ್ ಆಫ್ ಇಂಡಿಯಾ (ಎಎಫ್‌ಐ) ಕರ್ನಾಟಕ ಘಟಕದ ಉಪಾಧ್ಯಕ್ಷ ಡಾ. ಶ್ರೀಕಾಂತ ಕೊಂಕಣಿ ಮಾತನಾಡಿ, 'ರಾಜ್ಯದಲ್ಲಿ ಸಾವಿರಾರು ಆಯುಷ್ ವೈದ್ಯರು ಅಗತ್ಯ ಅರ್ಹತೆ ಹಾಗೂ ಸರ್ಕಾರದ ಮಾನ್ಯತೆ ಪಡೆದು ಜನರಿಗೆ ಆರೋಗ್ಯ ಸೇವೆ ನೀಡುತ್ತಿದ್ದಾರೆ. ಇಂತಹ ವೈದ್ಯರನ್ನು ವೈಯಕ್ತಿಕವಾಗಿ ಗುರಿಯಾಗಿಸಿಕೊಂಡು ದೇವದುರ್ಗ ತಾಲ್ಲೂಕಿನ ಹಂಚಿನಾಳ ಗ್ರಾಮದ ನಾಗರಾಜ ಪಾಟೀಲ, ಕಿರುಕುಳ ನೀಡುವುದು ಹಾಗೂ ವೈದ್ಯ ವೃತ್ತಿಗೆ ಧಕ್ಕೆ ತರುವ ರೀತಿಯಲ್ಲಿ ಕ್ರಮಕೈಗೊಳ್ಳುವುದು ಸರಿಯಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದಲ್ಲಿ 70ರಿಂದ 80 ಸಾವಿರ ಆಯುಷ್ ವೈದ್ಯರು ವಿವಿಧೆಡೆ ಸೇವೆ ಸಲ್ಲಿಸುತ್ತಿದ್ದಾರೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ಮಾನ್ಯತೆ ಪಡೆದ ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಲ್ಲಿ ಅಗತ್ಯ ವಿದ್ಯಾಭ್ಯಾಸ ಹಾಗೂ ತರಬೇತಿ ಪಡೆದ ವೈದ್ಯರು ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಆರೋಗ್ಯ ಸೇವೆ ಒದಗಿಸುತ್ತಿದ್ದಾರೆ. ಸರ್ಕಾರಿ ಆರೋಗ್ಯ ವ್ಯವಸ್ಥೆಯ ಮೇಲಿನ ಒತ್ತಡ ಕಡಿಮೆ ಮಾಡುವಲ್ಲಿಯೂ ಆಯುಷ್ ವೈದ್ಯರ ಸೇವೆ ಪ್ರಮುಖವಾಗಿದೆ ಎಂದು ಹೇಳಿದರು.

ಕೆಲವು ಅಧಿಕಾರಿಗಳು ತಮ್ಮ ವೈಯಕ್ತಿಕ ನಿರ್ಧಾರಗಳ ಆಧಾರದ ಮೇಲೆ ಆಯುಷ್ ವೈದ್ಯರಿಗೆ ಕಿರುಕುಳ ನೀಡುವ ರೀತಿಯಲ್ಲಿ ನಡೆದುಕೊಳ್ಳುತ್ತಿದ್ದಾರೆ. ಇದರಿಂದ ವೈದ್ಯರಲ್ಲಿ ಮಾನಸಿಕ ಒತ್ತಡ ಉಂಟಾಗುವುದಲ್ಲದೆ, ವೃತ್ತಿಯ ಮೇಲೂ ಪರಿಣಾಮ ಬೀರುವ ಸಾಧ್ಯತೆಯಿದೆ. ಇಂತಹ ಕ್ರಮಗಳು ಮುಂದುವರಿದರೆ ಅದರ ಪರಿಣಾಮ ಸಾರ್ವಜನಿಕರ ಆರೋಗ್ಯ ಸೇವೆಯ ಮೇಲೂ ಬೀಳಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೂಪಿಸಿರುವ ಕಾನೂನು, ನಿಯಮಗಳು ಹಾಗೂ ಆಯುಷ್ ವೈದ್ಯರ ಅರ್ಹತೆ ಮತ್ತು ಮಾನ್ಯತೆಗಳ ಕುರಿತು ಅಧಿಕಾರಿಗಳು ಸಮರ್ಪಕ ಅರಿವು ಹೊಂದಿರಬೇಕು. ನಿಯಮ ಉಲ್ಲಂಘನೆ ಯಾಗಿದ್ದರೆ ಕಾನೂನುಬದ್ಧ ಕ್ರಮ ಕೈಗೊಳ್ಳಲಿ. ಆದರೆ ಅರ್ಹ ವೈದ್ಯರನ್ನು ವೈಯಕ್ತಿಕವಾಗಿ ಗುರಿಯಾಗಿಸಿಕೊಂಡು ಕಿರುಕುಳ ನೀಡುವುದು ಅಥವಾ ಅವರ ವೃತ್ತಿಗೆ ಧಕ್ಕೆ ತರುವ ಕ್ರಮ ಕೈಗೊಳ್ಳಬಾರದು ಎಂದು ಒತ್ತಾಯಿಸಿದರು.

## ಹಾರಕೂಡ ಮಠ ಗುರು-ವಿರಕ್ತರ ಸೌಹಾರ್ದ ತಾಣ: ಡಾ.ಸಾರಂಗಧರ ಶ್ರೀ



**ಬಸವಕಲ್ಯಾಣ, ಸೆ.23:** ಯಾವುದೇ ಜಾತಿ, ಮತ, ಪಂಥದ ಭೇದವಿಲ್ಲದ ಗುರು-ವಿರಕ್ತರ ಸಮನ್ವಯ ಮತ್ತು ಸೌಹಾರ್ದ ತಾಣವಾದ ಹಾರಕೂಡ ಸಂಸ್ಥಾನ ಹಿರೇಮಠ ಶ್ರೀ ಡಾ.ಚನ್ನವೀರ ಶಿವಾಚಾರ್ಯರನ ವ್ಯಕ್ತಿತ್ವದಿಂದಾಗಿ ಎರಡನೇ ಶ್ರೀಶೈಲವೇ ಆಗಿದೆ ಎಂದು ಜಗದ್ಗುರು ಡಾ.ಸಾರಂಗಧರ ದೇಶಿಕೇಂದ್ರ ಮಹಾಸ್ವಾಮೀಜಿ ಬಣ್ಣಿಸಿದರು.

ತಾಲ್ಲೂಕಿನ ಹಾರಕೂಡ ಶ್ರೀಮಠದಲ್ಲಿ ಏರ್ಪಡಿಸಿದ್ದ ಧರ್ಮಸಭೆ ಉದ್ಘಾಟಿಸಿದ ಅವರು, ಎಲ್ಲರಿಗೂ ಸಮಾಧಾನವಾಗುವ ನಿಟ್ಟಿನಲ್ಲಿ ಸಮತೆಯ ತತ್ವವನ್ನು ತಮ್ಮ ನಡತೆಯಲ್ಲಿ ಅರಳಿಸಿದ್ದಾರೆ ಹಾರಕೂಡ ಶ್ರೀಗಳು. ಮನುಷ್ಯ ಈ ಭೂಮಿಗೆ ಬಂದಿರುವುದು ಭೌತಿಕ ಸುಖ ಭೋಗಕ್ಕಲ್ಲ. ದಾನ-ಧರ್ಮ, ತ್ಯಾಗ, ಸೇವೆಗಳಿಂದ ಜೀವನದ ನಿಜಾರ್ಥ ಅರಿತು ಬಾಳಿದರೆ ಮೌಲ್ಯಭರಿತ ಜೀವನವಾಗುತ್ತದೆ. ಧರ್ಮ, ಶಿಕ್ಷಣ, ಕಲೆ, ಸಾಹಿತ್ಯ ಹೀಗೆ ಎಲ್ಲ ಕ್ಷೇತ್ರಗಳಿಗೆ ಶ್ರೀಮಠದ ಕೊಡುಗೆ ಅನನ್ಯವಾಗಿದೆ ಎಂದರು.

ಅಷ್ಟಗಿ ನಿಜಲಿಂಗ ಶಿವಾಚಾರ್ಯರು ಮಾತನಾಡಿದರು. ಹಾರಕೂಡ ಶ್ರೀ ಡಾ.ಚನ್ನವೀರ ಶಿವಾಚಾರ್ಯರು ಸಾನ್ನಿಧ್ಯ ವಹಿಸಿದ್ದರು.

## ವಿಕಸಿತ ಭಾರತ 2047 ಸಾಧನೆಯೇ ಯುವಕರ ಗುರಿಯಾಗಲಿ: ಕುಲಪತಿ ಪ್ರೊ.ಸತ್ಯನಾರಾಯಣ ಕರೆ



**ಕಲಬುರಗಿ, ಸೆ. 23:** ರಾಷ್ಟ್ರ ನಿರ್ಮಾಣದಲ್ಲಿ ತಂತ್ರಜ್ಞಾನ, ನಾವೀನ್ಯತೆ, ಸಂಶೋಧನೆ ಹಾಗೂ ಅಂತರ್‌ಶಿಸ್ತೀಯ ಸಹಯೋಗಗಳು ಅತ್ಯಗತ್ಯ. 'ವಿಕಸಿತ ಭಾರತ 2047'ರ ಗುರಿ ಸಾಧನೆಗಾಗಿ ಯುವಜನರು ತಮ್ಮ ಜ್ಞಾನ, ಕೌಶಲ್ಯ ಮತ್ತು ನಾವೀನ್ಯತೆಯನ್ನು ಪರಿಣಾಮಕಾರಿಯಾಗಿ ಬಳಸಬೇಕು ಎಂದು ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ಹೇಳಿದರು.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಸ್ಕೂಲ್ ಆಫ್ ಇಂಜಿನಿಯರಿಂಗ್ ವತಿಯಿಂದ ಅಭಿಯಂತರ ದಿನಾಚರಣೆ ಅಂಗವಾಗಿ ಯಾಂತ್ರಿಕ-2026 ತಾಂತ್ರಿಕ ಉತ್ಸವವದಲ್ಲಿ ಪಾಲ್ಗೊಂಡು ಮಾತನಾಡಿ, ಭಾರತದ ಅಭಿವೃದ್ಧಿಗೆ ಸರ್.ಮೋಕ್ಷಗುಂಡಂ ವಿಶ್ವೇಶ್ವರಯ್ಯ ಅವರು ನೀಡಿದ ಮಹತ್ವದ ಕೊಡುಗೆಗಳನ್ನು ಸ್ಮರಿಸಿದರು. ಶಿಸ್ತು, ಸಮರ್ಪಣಾ ಭಾವ ಮತ್ತು ಕಠಿಣ ಪರಿಶ್ರಮದಂತಹ ಅವರ ಮೌಲ್ಯಗಳನ್ನು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕುಲಸಚಿವ ಪ್ರೊ. ಆರ್.ಆರ್. ಬಿರಾ ದಾರ್‌ಅವರು ಮಾತನಾಡಿ, ವಿದ್ಯಾರ್ಥಿಗಳು ವಿಶ್ವವಿದ್ಯಾಲಯ ಒದಗಿಸಿರುವ ಅತ್ಯಾಧುನಿಕ ಮೂಲ ಸೌಕರ್ಯ, ಶೈಕ್ಷಣಿಕ ಸೌಲಭ್ಯಗಳು ಹಾಗೂ ವಿವಿಧ ಅವಕಾಶಗಳನ್ನು ಪರಿಣಾಮಕಾರಿಯಾಗಿ ಸದುಪಯೋಗ ಪಡಿಸಿಕೊಂಡು ತಮ್ಮ ಜ್ಞಾನ, ಕೌಶಲಮತ್ತು ಸಾಮರ್ಥ್ಯವನ್ನು ವೃದ್ಧಿಸಿಕೊಳ್ಳ ಬೇಕು. ಕಲಿಕೆಯನ್ನು ಕೇವಲ ಪದವಿಗೆ ಸೀಮಿತಗೊಳಿಸದೆ, ಸಮಾಜದ ಅಗತ್ಯಗಳಿಗೆ ಸ್ಪಂದಿಸುವ ಜ್ಞಾನವಾಗಿ ರೂಪಿಸಿ ಕೊಂಡು ರಾಷ್ಟ್ರದ ಅಭಿವೃದ್ಧಿಯಲ್ಲಿ ಸಕ್ರಿಯವಾಗಿ ಕೊಡುಗೆ ನೀಡಬೇಕು ಎಂದರು.

ನವದೆಹಲಿಯ ಯುಜಿಸಿಯ ಜಂಟಿ ಕಾರ್ಯದರ್ಶಿ ಡಾ. ಗೋಪಿ ಚಂದ್‌ಮೆರುಗು ಅವರು ಮಾತನಾಡಿ, ವಿದ್ಯಾರ್ಥಿಗಳು ಸಮಾಜದ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಅರ್ಥಪೂರ್ಣ ಸಂಶೋಧನೆಗಳನ್ನು ಕೈಗೊಳ್ಳಬೇಕು ಮತ್ತು ಸಮಾಜದ ಹಿತಕ್ಕಾಗಿ ನವೀನ ಪರಿಹಾರಗಳನ್ನು ಅಭಿವೃದ್ಧಿಪಡಿಸಬೇಕು ಎಂದು ಕರೆ ನೀಡಿದರು.

ಕಂಪ್ಯೂಟಯಿರ್ ವಿಜ್ಞಾನ ನಿಕಾಯದ ಡೀನ್ ಪ್ರೊ. ಆರ್. ಎಸ್. ಹೆಗಡಿ, ಇಂಜಿನಿಯರಿಂಗ್ ನಿಕಾಯದ ಡೀನ್ ಪ್ರೊ. ಅಮರೇಂದ್ರ ಮಸ್ತಾ, ಗಣಿತ ವಿಭಾಗದ ಮುಖ್ಯಸ್ಥ ಪ್ರೊ. ಜನಾರ್ದನ ರೆಡ್ಡಿ ಸೇರಿದಂತೆ ಎಲೆಕ್ಟ್ರಿಕಲ್ ಇಂಜಿನಿಯುರಿಂಗ್, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ಇಂಜಿನಿಯ-ರಿಂಗ್, ಕಂಪ್ಯೂಟರ್ ವಿಜ್ಞಾನ ಮತ್ತು ಇಂಜಿನಿಯರಿಂಗ್ ನಿಕಾಯ ಸೇರಿದಂತೆ ವಿವಿಧ ವಿಭಾಗಗಳ ಬೋಧಕ ಸಿಬ್ಬಂದಿ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಡಾ. ನಿತಿನ್ ಭೀಮರಾವ್ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮವು ವಂದೇ ಮಾತರಂ ಗೀತೆಯೊಂದಿಗೆ ಆರಂಭವಾಗಿ, ರಾಷ್ಟ್ರಗೀತೆಯೊಂದಿಗೆ ಮುಕ್ತಾಯಗೊಂಡಿತು.

ಇಂಧನ ಕ್ಷೇತ್ರದಲ್ಲಿ ವಿಕಸಿತ ಭಾರತ 2047 ಎಂಬ ವಿಷಯದಡಿ ಸೆಪ್ಟೆಂಬರ್ 15ರಿಂದ 21ರವರೆಗೆ ನಡೆಯುತ್ತಿರುವ ಈ ಐದು ದಿನಗಳ ಉತ್ಸವದಲ್ಲಿ ರಸಪ್ರಶ್ನೆ, ಹ್ಯಾಕಥಾನ್, ಸಾಂಸ್ಕೃತಿಯಿಕ ಕಾರ್ಯಕ್ರಮಗಳು ಹಾಗೂ ಪ್ರಾಜೆಕ್ಟ್ ಪ್ರದರ್ಶನ ಸೇರಿದಂತೆ ವಿವಿಧ ತಾಂತ್ರಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳನ್ನು ಆಯೋಜಿಸಲಾಗಿದೆ. ವಿದ್ಯಾರ್ಥಿಗಳು ತಮ್ಮ ತಾಂತ್ರಿಕ ಜ್ಞಾನ, ಸೃಜನಶೀಲತೆ, ನಾವೀನ್ಯತೆ ಹಾಗೂ ತಂಡದ ಕಾರ್ಯನಿರ್ವಹಣಾ ಕೌಶಲಗಳನ್ನು ಪ್ರದರ್ಶಿಸಲು ಈ ಚಟುವಟಿಕೆಗಳು ವೇದಿಕೆ ಒದಗಿಸುತ್ತಿವೆ ಎಂದರು.

## ಬಸವಕಲ್ಯಾಣದಲ್ಲಿ ನಿರ್ಮಿಸುತ್ತಿರುವ ಅನುಭವ ಮಂಟಪ ಸರ್ಕಾರದ ಅಧೀನದಲ್ಲೇ ಇರಲಿ, ಖಾಸಗಿಗೆ ಬೇಡ: ಜಾಗತಿಕ ಲಿಂಗಾಯತ ಮಹಾಸಭಾ ಮನವಿ

**ಬೆಳಗಾವಿ, ಸೆ.23:** ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ನಿರ್ಮಿಸುತ್ತಿರುವ ಅನುಭವ ಮಂಟಪವನ್ನು ರಾಜ್ಯ ಸರ್ಕಾರ ತನ್ನ ಅಧೀನದಲ್ಲೇ ಇರಿಸಿಕೊಳ್ಳಬೇಕು. ಯಾವುದೇ ಖಾಸಗಿ ಸಂಸ್ಥೆ ಅಥವಾ ಮಠಕ್ಕೆ ನೀಡಬಾರದು ಎಂದು ಜಾಗತಿಕ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಘಟಕದ ಪ್ರಧಾನ ಕಾರ್ಯದರ್ಶಿ ಎಸ್. ಎಂ.ಜಾಮದಾರ ಹೇಳಿದರು.

'ಅನುಭವ ಮಂಟಪದ ದೈನಂದಿನ ನಿರ್ವಹಣೆ ಹಾಗೂ ವಿಶೇಷ ಕಾರ್ಯಕ್ರಮಗಳ ಕೆಲವು ಜವಾಬ್ದಾರಿ ನಿರ್ವಹಣೆಗೆ ಸರ್ಕಾರ, ಕೆಲವು ಲಿಂಗಾಯತ ಮಠಗಳು ಹಾಗೂ ಲಿಂಗಾಯತ ಸಂಸ್ಥೆಗಳ ಪ್ರತಿನಿಧಿಗಳನ್ನು ಒಳಗೊಂಡ ವಿಶೇಷ ಸಮಿತಿ ರಚಿಸಬೇಕು. ಅದರ ಮೂಲಕ ಅಲ್ಲಿಗೆ ಬರುವ ಜನರಿಗೆ ನಿತ್ಯ ದಾಸೋಹ ಸೇವೆ ಕೈಗೊಳ್ಳಬೇಕು. ವಚನ ಅಧ್ಯಯನ ಶಿಬಿರ, ಕಾರ್ಯಾಗಾರ ಆಯೋಜಿಸಬೇಕು. ಕಾಯಕ ತತ್ವ, ಸ್ತ್ರೀಸಮಾನತೆ, ಜಾತಿ ವಿನಾಶ ಕುರಿತು ಕಾರ್ಯಕ್ರಮ ಹಮ್ಮಿಕೊಳ್ಳಬೇಕೆಂದು ಬೆಳಗಾವಿಯಲ್ಲಿ ನಡೆದ ರಾಷ್ಟ್ರೀಯ ವಾರ್ಷಿಕ ಸರ್ವಸಾಧಾರಣ ಸಭೆಯಲ್ಲಿ ತೀರ್ಮಾನಿಸಿದ್ದೇವೆ' ಎಂದರು.

ರಾಜ್ಯ ಸರ್ಕಾರ ನಿರ್ಮಿಸುತ್ತಿರುವ ಅನುಭವ ಮಂಟಪವನ್ನು 2027ರ ಮಾರ್ಚ್‌ನಲ್ಲಿ ಉದ್ಘಾಟಿಸುವುದಾಗಿ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ. ಆದರೆ, ಈ ಕಾಮಗಾರಿ ಮುಗಿಯಲು ಸರ್ಕಾರದಿಂದ ಇನ್ನೂ 450 ಕೋಟಿ ರೂ. ಅನುದಾನ ಬಿಡುಗಡೆ ಆಗಬೇಕಿದೆ. ಮಂಟಪಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿ ಸ್ಥಗಿತವಾಗಿದೆ. ದಾಸೋಹ ಭವನ, ಯಾತ್ರಿ ನಿವಾಸ, ಪಾರ್ಕಿಂಗ್ ಸ್ಥಳ ನಿರ್ಮಾಣ ಕಾಮಗಾರಿಗೆ ಇನ್ನೂ ಅನುಮೋದನೆ ಸಿಕ್ಕಿಲ್ಲ, ಟೆಂಡರ್ ಕರೆದಿಲ್ಲ. ಈ ಕೆಲಸಗಳು ಆರಂಭವಾಗಲು ಇನ್ನೂ ಮೂರ್ನಾಲ್ಕು ತಿಂಗಳು ಬೇಕಿದ್ದು, ಅವುಗಳಿಗೂ 100 ಕೋಟಿ ರೂ. ಬೇಕೆಂದು ಅಂದಾಜಿಸಲಾಗಿದೆ. ಹೀಗೆ ಅನೇಕ ತೊಡಕುಗಳಿದ್ದರೂ, ರಾಜಕೀಯ ಉದ್ದೇಶಕ್ಕಾಗಿ ತರಾತುರಿಯಲ್ಲಿ ಉದ್ಘಾಟಿಸುತ್ತಿರುವುದು ಸರಿಯಲ್ಲ. ಉದ್ಘಾಟನೆಯನ್ನು 2028ರ ಜನವರಿಯವರೆಗೆ ಮುಂದೂಡಬೇಕು ಎಂದು ಆಗ್ರಹಿಸಿದರು.

ಸಂಘ ಪರಿವಾರದ ಪರವಾಗಿರುವ ಕೆಲವು ಮಠಗಳು ಹಾಗೂ ವ್ಯಕ್ತಿಗಳು 'ಬಸವ ಭಾರತ' ಕಾರ್ಯಕ್ರಮ ನಡೆಸಲು ಮುಂದಾಗಿದ್ದಾರೆ. ಇದಕ್ಕೆ ನಮ್ಮ ವಿರೋಧವಿಲ್ಲ. ಆದರೆ, ಬಸವ ತತ್ವ ವಿರೂಪಗೊಳಿಸಿದರೆ, ತಿರುಚಿದರೆ ಮತ್ತು ಆ ಕಾರ್ಯಕ್ರಮದಲ್ಲಿ ಹಿಂದೂತ್ವ ಸೇರಿಸಿದರೆ ಸುಮ್ಮನಿರುವುದಿಲ್ಲ' ಎಂದು ಎಚ್ಚರಿಕೆ ಕೊಟ್ಟರು. 2026-27ನೇ ಸಾಲಿನಲ್ಲಿ ನಡೆಯುವ ಜಾತಿ ಜನಗಣತಿ ಕುರಿತು ಲಿಂಗಾಯತರಿಗೆ ಮಾರ್ಗದರ್ಶನ ನೀಡಲು ಕರಪತ್ರ ಮುದ್ರಿಸಿ, ಎಲ್ಲ ತಾಲ್ಲೂಕು, ಗ್ರಾಮೀಣ ಪ್ರದೇಶಗಳಲ್ಲಿ ಹಂಚಲು 2027ರ ಜನವರಿಯಲ್ಲಿ ವಿಶೇಷ ಅಭಿಯಾನ ಕೈಗೊಳ್ಳಲು ನಿರ್ಣಯಿಸಿದ್ದೇವೆ' ಎಂದರು.

**ಸಿವಿಲ್ ಇಂಜಿನಿಯರ್ಸ್ ಅಸೋಸಿಯೇಶನ್ ರಜತ ಮಹೋತ್ಸವ**

## ದೇಶದ ಅಭಿವೃದ್ಧಿಗೆ ಇಂಜಿನಿಯರರಿಂದ ಅಮೂಲ್ಯ ಕೊಡುಗೆ: ತಿಪ್ಪಣ್ಣಪ್ಪ ಕಮಕನೂರ



**ಕಲಬುರಗಿ, ಸೆ. 23:** ದೇಶದ ಅಭಿವೃದ್ಧಿಯಲ್ಲಿ ಇಂಜಿನಿಯರರ ಕೊಡುಗೆ ಅಮೂಲ್ಯವಾಗಿದೆ, ಇಂಜಿನಿಯರರು ಉತ್ತಮವಾಗಿ ಕೆಲಸ ಮಾಡುತ್ತಿರುವುದರಿಂದಲೇ ನವಭಾರತ ನಿರ್ಮಾಣದ ಕನಸು ಸಾಕಾರಗೊಳ್ಳುವಂತಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಹೇಳಿದರು.

ನಗರದ ಎಂ.ಆರ್.ಎಂ.ಸಿ ಸ್ಯಾಕ್ ಸಭಾಂಗಣದಲ್ಲಿ ಶನಿವಾರ ಸಂಜೆ ನಡೆದ 'ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಅಸೋಸಿಯೇಷನ್'ನ ರಜತ ಮಹೋತ್ಸವ ಮತ್ತು ಇಂಜಿನಿಯರರ ದಿನಾಚರಣೆ ಸಮಾರಂಭದ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಭಾರತ ಕಂಡ ಶ್ರೇಷ್ಠ ಇಂಜಿನಿಯರ್ ಸರ್ ಎಂ. ವಿಶ್ವೇಶ್ವರಯ್ಯನವರ ಆದರ್ಶ, ಮೌಲ್ಯಗಳು, ಪ್ರಾಮಾಣಿಕತೆ, ಜನಪರ ಕಾಳಜಿಗಳೇ ನಮಗೆ ದಾರಿದೀಪವಾಗಿವೆ, ಈ ತಲೆಮಾರಿನ ಇಂಜಿನಿಯರರು ಸಹ ವಿಶ್ವೇಶ್ವರಯ್ಯನವರಷ್ಟೇ ದಕ್ಷ, ಬುದ್ಧಿವಂತರಾಗಿದ್ದಾರೆ, ಅವರಿಲ್ಲದೇ ಯಾವುದೇ ಅಭಿವೃದ್ಧಿ ಕೆಲಸ ಸಾಧ್ಯವಿಲ್ಲ ಎಂದರು. ಇನ್ನೋರ್ವ ಅತಿಥಿಯಾಗಿದ್ದ ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ರೇವೂರ ಮಾತನಾಡಿ, ದೇಶದಲ್ಲಿ ನೀರಾವರಿ ಕ್ಷೇತ್ರದ ಅಭಿವೃದ್ಧಿ, ರೈಲ್ವೆ, ರಾಷ್ಟ್ರೀಯ ಹೆದ್ದಾರಿ ಜಾಲ ವಿಸ್ತರಣೆ ಸೇರಿದಂತೆ ಮೂಲಸೌಕರ್ಯಗಳ ಅಭಿವೃದ್ಧಿಯಲ್ಲಿ ಇಂಜಿನಿಯರರ ಕೊಡುಗೆ ಅಪ್ರತಿಮ ವಾಗಿದೆ. ಶರಣಬಸವೇಶ್ವರ ವಿದ್ಯಾ ವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ದರು. ಮುಖ್ಯ ಇಂಜಿನಿಯರ್ ಸುಭಾಷ ಶಿಕ್ಷಣಕರ್, ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರರ ಪರಿಷತ್ತಿನ ಅಧ್ಯಕ್ಷ ಶ್ರೀಕಾಂತ ಚನ್ನಾಳ, ಸದಸ್ಯ ಮುರಳೀಧರ ಜಿ. ಕರಲಗಿಕರ್, ಕೆಪಿಸಿಇಎ ರಾಜ್ಯ ಕಾರ್ಯದರ್ಶಿ ಸಿದ್ರಾಮ ಎಸ್. ನಿರೋಣಿ ಮಾತನಾಡಿದರು.

**ರಾಜ್ಯದಲ್ಲಿ ಸಿವಿಲ್ ಇಂಜಿನಿಯರರ ವೃತ್ತಿಗೆ ಘನತೆ, ಗೌರವ ಕಲ್ಪಿಸಲು ಹಾಗೂ ನಕಲಿ ಇಂಜಿನಿಯರರ ಹಾವಳಿಗೆ ಕಡಿವಾಣ ಹಾಕಲು ರಾಜ್ಯ ಸರ್ಕಾರ ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರ್ಸ್ ಪರಿಷತ್ ಸ್ಥಾಪಿಸಿದೆ. ದೇಶದಲ್ಲೇ ಮೊದಲ ಬಾರಿಗೆ ಶಾಸನಬದ್ಧವಾಗಿ ಪರಿಷತ್ ಅಸ್ತಿತ್ವಕ್ಕೆ ಬಂದಿದೆ. ಇದರಿಂದಾಗಿ ಸಿವಿಲ್ ಇಂಜಿನಿಯರುಗಳಿಗೆ ಕಾಯ್ದೆ ಮೂಲಕ ರಕ್ಷಣೆ ಸಿಕ್ಕಂತಾಗಿದೆ.**
**-ಶ್ರೀಕಾಂತ ಎಸ್. ಚನ್ನಾಳ್ ಅಧ್ಯಕ್ಷರು, ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರ್ಸ್ ಪರಿಷತ್. ಕರ್ನಾಟಕ ಸರ್ಕಾರ.**

# ಇರಾನ್ ಸಮಸ್ಯೆಗೆ IMEEC ಒಂದೇ ಪರಿಹಾರ: ಟ್ರಂಪ್



■ ಇಂಧನ ಮೂಲ ಸೌಕರ್ಯಗಳನ್ನು ಇರಾನ್ ನಿಯಂತ್ರಣದಿಂದ ಸ್ಥಳಾಂತರಿಸಲು ಅನುಕೂಲ

**ನ್ಯೂಯಾರ್ಕ್, ಸೆ.23:** 'ಭಾರತ–ಮಧ್ಯಪ್ರಾಚ್ಯ–ಯುರೋಪ್ ಆರ್ಥಿಕ ಕಾರಿಡಾರ್' (ಐಎಂಇಇಸಿ)ಗೆ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬೆಂಬಲ ವ್ಯಕ್ತಪಡಿಸಿದ್ದು, ಇಂಧನ ಮೂಲಸೌಕರ್ಯವನ್ನು ಇರಾನ್‌ನ ನಿಯಂತ್ರಣಾ ಕೇಂದ್ರಗಳಿಂದ (ಚೆಕ್‌ಪಾಯಿಂಟ್‌ಗಳಿಂದ) ದೂರ ಸ್ಥಳಾಂತರಿಸಲು ಇದು ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ.

ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧಿವೇಶನದ ಸಂದರ್ಭದಲ್ಲಿ 'ಗಲ್ಫ್ ಸಹಕಾರ ಮಂಡಳಿ'ಯೊಂದಿಗಿನ ಬಹುಪಕ್ಷೀಯ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ನೆರೆಯ ದೇಶಗಳ ವ್ಯಾಪಾರಿ ನೌಕೆಗಳ ಮೇಲೆ ಇರಾನ್ ನಡೆಸಿದ ಭಯೋತ್ಪಾದಕ ದಾಳಿಗಳು, ಮಧ್ಯಪ್ರಾಚ್ಯದ ಇಂಧನ ಮೂಲಸೌಕರ್ಯವನ್ನು ಇರಾನ್‌ನ ನಿಯಂತ್ರಣಾ ಕೇಂದ್ರಗಳಿಂದ ದೂರ ಸ್ಥಳಾಂತರಿಸುವ ಅಗತ್ಯವನ್ನು ಎತ್ತಿ ತೋರಿಸಿವೆ. ಅದಕ್ಕಾಗಿಯೇ ನನ್ನ ಆಡಳಿತ 'ಭಾರತ–ಮಧ್ಯಪ್ರಾಚ್ಯ ಆರ್ಥಿಕ ಕಾರಿಡಾರ್' ಹಾಗೂ ತೈಲ ರವಾನೆಗಾಗಿ ಪೈಪ್‌ಲೈನ್ ಅಥವಾ ಇತರ ಯಾವುದೇ ವಿಧಾನಗಳ ಮೂಲಕ ಕೈಗೊಳ್ಳುವ ಯೋಜನೆಗಳನ್ನು ಬಲವಾಗಿ ಬೆಂಬಲಿಸುತ್ತದೆ. ಈ ಪ್ರದೇಶವನ್ನು ದಶಕಗಳಿಂದ ಕಾಡುತ್ತಿರುವ ಸವಾಲುಗಳನ್ನು ಜಂಟಿಯಾಗಿ ಮೆಟ್ಟಿ ನಿಲ್ಲುವ ಹಂತದಲ್ಲಿದ್ದೇವೆ ಎಂದು ಹೇಳಿದ್ದಾರೆ.

**ಭಾರತ–ಮಧ್ಯಪ್ರಾಚ್ಯ–ಯುರೋಪ್ ಆರ್ಥಿಕ ಕಾರಿಡಾರ್:** ಭಾರತ–ಮಧ್ಯಪ್ರಾಚ್ಯ–ಯುರೋಪ್ ಆರ್ಥಿಕ ಕಾರಿಡಾರ್' ಎಂಬುದು ಬಹುರಾಷ್ಟ್ರೀಯ ಮತ್ತು ಬಹು–ಮಾದರಿಯ ಸಂಪರ್ಕ ಹಾಗೂ ಮೂಲಸೌಕರ್ಯ ಉಪಕ್ರಮವಾಗಿದ್ದು, ಇದನ್ನು ಸೆಪ್ಟೆಂಬರ್ 2023 ರಲ್ಲಿ ನವದೆಹಲಿಯಲ್ಲಿ ನಡೆದ ಜಿ20 ಶೃಂಗಸಭೆಯ ಸಂದರ್ಭದಲ್ಲಿ ಅಧಿಕೃತವಾಗಿ ಘೋಷಿಸಲಾಗಿತ್ತು.

ಪ್ರಸ್ತಾವಿತ ಯೋಜನೆ ಎರಡು ಪ್ರತ್ಯೇಕ ಕಾರಿಡಾರ್‌ಗಳನ್ನು ಒಳಗೊಂಡಿರುತ್ತದೆ – ಪೂರ್ವ ಕಾರಿಡಾರ್ ಮತ್ತು ಉತ್ತರ ಕಾರಿಡಾರ್. ಮೊದಲನೆಯದು ಭಾರತವನ್ನು ಅರೇಬಿಯನ್ ಗಲ್ಫ್‌ಗೆ ಸಂಪರ್ಕಿಸಿದರೆ, ಎರಡನೆಯದು ಅರೇಬಿಯನ್ ಗಲ್ಫ್ ಯುರೋಪ್‌ಗೆ ಸಂಪರ್ಕಿಸುತ್ತದೆ.

ಈ ವ್ಯವಸ್ಥೆಯು ರೈಲು ಮಾರ್ಗವೊಂದನ್ನು ಒಳಗೊಂಡಿರುತ್ತದೆ.

ಇದು ಅಸ್ತಿತ್ವದಲ್ಲಿರುವ ಸಮುದ್ರ ಮತ್ತು ರಸ್ತೆ ಸಾರಿಗೆ ಮಾರ್ಗಗಳಿಗೆ ಪೂರಕವಾಗಿ, ವೆಚ್ಚ–ಪರಿಣಾಮಕಾರಿ ಗಡಿಯಾಚೆಗಿನ 'ಹಡಗು–ರೈಲು' ಸಾರಿಗೆ ಜಾಲವಾಗಿ ಕಾರ್ಯನಿರ್ವಹಿಸುತ್ತದೆ. ಸದಸ್ಯ ರಾಷ್ಟ್ರಗಳು ಇಂಧನ ಮತ್ತು ಡಿಜಿಟಲ್ ಸಂಪರ್ಕಕ್ಕಾಗಿ ಕೇಬಲ್ ಹಾಗೂ ಸ್ವಚ್ಛ ಹೈಡ್ರೋಜನ್ ರಫ್ತಿಗಾಗಿ ಪೈಪ್‌ಲೈನ್ ಅಳವಡಿಸಲು ಬಯಸುತ್ತವೆ.

ದಕ್ಷಿಣ ಏಷ್ಯಾ, ಮಧ್ಯಪ್ರಾಚ್ಯ ಮತ್ತು ಯುರೋಪ್‌ನಾದ್ಯಂತ ಸಂಪರ್ಕ, ವ್ಯಾಪಾರ ಮತ್ತು ಸುಸ್ಥಿರತೆಯನ್ನು ಹೆಚ್ಚಿಸುವುದು ಈ ಕಾರಿಡಾರ್‌ನ ಗುರಿಯಾಗಿದೆ.

# ಅಂತಾರಾಷ್ಟ್ರೀಯ ಕಾನೂನಿನ ಬಗ್ಗೆ ಅಮೆರಿಕಕ್ಕೆ ಗೌರವವಿಲ್ಲ

"ಮಧ್ಯಪ್ರಾಚ್ಯ ದೇಶ ಇರಾನ್‌ನನ್ನು ಸಂಪೂರ್ಣ ನಾಶಮಾಡುವ ಟ್ರಂಪ್ ಬೆದರಿಕೆ ಬೆನ್ನಲ್ಲೇ ಇರಾನ್ ಅಧ್ಯಕ್ಷರ ಪ್ರತಿಕ್ರಿಯೆ



**ನ್ಯೂಯಾರ್ಕ್, ಸೆ.23:** ಮಧ್ಯಪ್ರಾಚ್ಯ ರಾಷ್ಟ್ರವಾದ ಇರಾನ್ ಅನ್ನು "ಸಂಪೂರ್ಣವಾಗಿ ನಾಶಪಡಿಸುವುದಾಗಿ" ಡೊನಾಲ್ಡ್ ಟ್ರಂಪ್ ನೀಡಿದ ಬೆದರಿಕೆಗಳ ಹಿನ್ನೆಲೆಯಲ್ಲಿ, ಅಂತಾರಾಷ್ಟ್ರೀಯ ಕಾನೂನನ್ನು ಗೌರವಿಸಲು ವಿಫಲವಾದ ಅಮೆರಿಕದ ಕ್ರಮವನ್ನು ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯಾನ್ ತೀವ್ರವಾಗಿ ಟೀಕಿಸಿದ್ದಾರೆ.

ನ್ಯೂಯಾರ್ಕ್‌ನಲ್ಲಿ ನಡೆದ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಪೆಜೆಶ್ಕಿಯಾನ್, ಅಮೆರಿಕದೊಂದಿಗಿನ ಯುದ್ಧದಲ್ಲಿ ಇರಾನ್ ಶರಣಾಗುವುದಿಲ್ಲ, ಆದರೆ ಸಂಘರ್ಷವನ್ನು ಕೊನೆಗೊಳಿಸಲು ರಾಜತಾಂತ್ರಿಕ ಮಾರ್ಗವನ್ನು ನಂಬುತ್ತದೆ ಎಂದು ಹೇಳಿದರು.

ಅಮೆರಿಕದ ಪ್ರತಿನಿಧಿಗಳಾದ ಜಾರೆಡ್ ಕುಶ್ನರ್ ಮತ್ತು ಸ್ಟೀವ್ ವಿಟ್ಕಾಫ್ ಅವರು ಇರಾನ್ ಅಧಿಕಾರಿಗಳೊಂದಿಗೆ ಫಲಪ್ರದ ಸಭೆ ನಡೆಸಿದ್ದಾರೆ ಎಂದು ಟ್ರಂಪ್ ಹೇಳಿದ ಮರುದಿನವೇ ಈ ಬೆಳವಣಿಗೆ ನಡೆದಿದೆ. "ಅತ್ಯುತ್ತಮ ಸಭೆ" ಎಂದು ಅಮೆರಿಕ ಅಧ್ಯಕ್ಷರು ಮಂಗಳವಾರ ಸುದ್ದಿಗಾರರಿಗೆ ತಿಳಿಸಿದರು. "ಅವರು ಏಕೆ ಇದಕ್ಕೆ ಒಪ್ಪುವುದಿಲ್ಲ ಎಂಬುದು ನನಗೆ ಅರ್ಥವಾಗುತ್ತಿಲ್ಲ. ಇದು ಶ್ರೇಷ್ಠತೆ, ಭವಿಷ್ಯದ ಶ್ರೇಷ್ಠತೆ ಅಥವಾ ಸಂಪೂರ್ಣ ನಾಶ – ಇವುಗಳಲ್ಲಿ ಒಂದನ್ನು ಆರಿಸಿಕೊಳ್ಳಬೇಕಿದೆ". ಬೆದರಿಕೆಗಳನ್ನು ಕೇಳಿದ ನಂತರ ಇರಾನ್ ನಿಯೋಗವು ಸಭೆಯಿಂದ ಹೊರನಡೆಯಿತು ಎಂದು 'ದಿ ಇಂಡಿಪೆಂಡೆಂಟ್'ನ ಶ್ವೇತಭವನದ ವರದಿಗಾರ ಆಂಡ್ರ್ಯೂ ಫೀನ್ಬರ್ಗ್ ವರದಿ ಮಾಡಿದ್ದಾರೆ.

ಏತನ್ಮಧ್ಯೆ, ಅಮೆರಿಕವು ಮಿಲಿಟರಿ ಒತ್ತಡ ಮತ್ತು ಇರಾನ್ ಬಂದರುಗಳ ಮೇಲಿನ ದಿಗ್ಬಂಧನವನ್ನು ತೆರವುಗೊಳಿಸಿದರೆ, ಏಳು ದಿನಗಳೊಳಗೆ ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲು ಸಿದ್ಧವಿರುವುದಾಗಿ ಇರಾನ್ ಹೇಳಿದೆ ಎಂದು ಹಿರಿಯ ಇರಾನ್ ಅಧಿಕಾರಿಯೊಬ್ಬರು ಮಂಗಳವಾರ ತಿಳಿಸಿದ್ದಾರೆ.

## ನಿರ್ಬಂಧದ ನಡುವೆಯೂ ಚೀನಾದಲ್ಲಿ ಇಳಿದ ಇರಾನ್ ವಿಮಾನಗಳು

**ಟೆಹರಾನ್, ಸೆ.23:** ಇರಾನ್‌ನ ಆರ್ಥಿಕತೆಯನ್ನು ದುರ್ಬಲಗೊಳಿಸುವ ಹೊಸ ಪ್ರಯತ್ನದ ಭಾಗವಾಗಿ ಅಮೆರಿಕವು ಆ ದೇಶದ ವಾಯುಯಾನ ಉದ್ಯಮದ ಮೇಲಿನ ನಿರ್ಬಂಧಗಳನ್ನು ಬಿಗಿಗೊಳಿಸಿದ ನಂತರ, ಇರಾನ್‌ನ ವಿಮಾನಯಾನ ಸಂಸ್ಥೆಗಳು ಬುಧವಾರ ಕೆಲವು ಅಂತಾರಾಷ್ಟ್ರೀಯ ವಿಮಾನಗಳನ್ನು ರದ್ದುಗೊಳಿಸಬೇಕಾಯಿತು. ಬಾಗ್ದಾದ್, ಮಸ್ಕತ್, ಕತಾರ್, ಜಾರ್ಜಿಯಾ ಮತ್ತು ಅಜರ್‌ಬೈಜಾನ್‌ಗೆ ಹೋಗುವ ವಿಮಾನಗಳನ್ನು ಸ್ಥಗಿತಗೊಳಿಸಲಾಗಿದೆ ಎಂದು ಟೆಹರಾನ್‌ನ ಟ್ರಾವೆಲ್ ಏಜೆಂಟ್ ಒಬ್ಬರು ತಿಳಿಸಿದ್ದಾರೆ.

ಆದರೆ ಚೀನಾ ಸೇರಿದಂತೆ ಇತರ ಹಲವು ಸ್ಥಳಗಳಿಗೆ ವಿಮಾನ ಸಂಚಾರ ಮುಂದುವರಿಸಿದೆ. ಬುಧವಾರ ಹೊಸ ನಿರ್ಬಂಧಗಳು ಜಾರಿಗೆ ಬಂದ ನಂತರವೂ, ಇರಾನ್‌ನ ಅತಿದೊಡ್ಡ ವಿಮಾನಯಾನ ಸಂಸ್ಥೆಗಳಲ್ಲಿ ಒಂದಾದ 'ಮಹಾನ್ ಏರ್'ನ ವಿಮಾನವೊಂದು ಟೆಹ್ರಾನ್‌ನಿಂದ ಚೀನಾದ ಗುವಾಂಗ್‌ಝೌಗೆ ಬಂದಿಳಿಯಿತು ಎಂದು 'ಫ್ಲೈಟ್‌ರಾಡಾರ್24'ನ ಟ್ರ್ಯಾಕಿಂಗ್ ದತ್ತಾಂಶವು ತಿಳಿಸಿದೆ.

ಅಮೆರಿಕದ ನಿರ್ಬಂಧಗಳನ್ನು ವಿರೋಧಿಸುವುದಾಗಿ ಮತ್ತು ಅವು ಕಾನೂನುಬಾಹಿರವೆಂದು ಚೀನಾ ಮಂಗಳವಾರ ಹೇಳಿದೆ. ಟೆಹ್ರಾನ್‌ನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಪ್ರಕಾರ, ಬುಧವಾರ ಶಾಂಘೈಗೆ ವಿಮಾನವೊಂದು ಹೊರಡಬೇಕಿತ್ತು. ಇಸ್ತಾಂಬುಲ್‌ಗೆ ಕೆಲವು ವಿಮಾನಗಳನ್ನು ನಿಗದಿಪಡಿಸಲಾಗಿದ್ದರೂ, ಇತರ ಕೆಲವು ವಿಮಾನಗಳನ್ನು ರದ್ದುಗೊಳಿಸಲಾಗಿದೆ ಎಂದು ಟೆಹ್ರಾನ್‌ನ ಟ್ರಾವೆಲ್ ಏಜೆಂಟ್ ತಿಳಿಸಿದ್ದಾರೆ.

ಇರಾನ್ ಮೇಲೆ "ಆರ್ಥಿಕ ಡಿ–ಡೇ" (ನಿರ್ಣಾಯಕ ಆರ್ಥಿಕ ಹೊಡೆತ) ಹೇರುವುದಾಗಿ ನೀಡಿದ್ದ ಬೆದರಿಕೆಯ ಭಾಗವಾಗಿ ಅಮೆರಿಕದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಸೋಮವಾರ ಈ ಹೊಸ ಕ್ರಮಗಳನ್ನು ಘೋಷಿಸಿದರು. ಸುಮಾರು ಏಳು ತಿಂಗಳ ಸಂಘರ್ಷದ ನಂತರ ಇರಾನ್ ಅನ್ನು ಮಣಿಸುವ ಪ್ರಯತ್ನ ಇದಾಗಿದೆ. "ಅವು (ವಿಮಾನಗಳು) ಇಳಿದರೆ, ನೀವು ಅವುಗಳಿಗೆ ಇಂಧನ ಒದಗಿಸುವಂತಿಲ್ಲ, ಲ್ಯಾಂಡಿಂಗ್ ಸೇವೆಗಳನ್ನು ನೀಡುವಂತಿಲ್ಲ ಅಥವಾ ಟಿಕೆಟ್‌ಗಳನ್ನು ಮಾರಾಟ ಮಾಡುವಂತಿಲ್ಲ; ಇಲ್ಲದಿದ್ದರೆ ನಿಮ್ಮನ್ನು ಡಾಲರ್ ವ್ಯವಸ್ಥೆಯಿಂದ ಹೊರಹಾಕಲಾಗುತ್ತದೆ" ಎಂದು ಅವರು ಇತರ ದೇಶಗಳಿಗೆ ಎಚ್ಚರಿಕೆ ನೀಡಿದರು. ಈ ನಿರ್ಬಂಧಗಳು ಇರಾನಿಯನ್ನರು ವಿದೇಶಕ್ಕೆ ಪ್ರಯಾಣಿಸುವ ಅಥವಾ ತಮ್ಮ ದೇಶಕ್ಕೆ ಮರಳುವ ಸಾಮರ್ಥ್ಯವನ್ನು ಇನ್ನಷ್ಟು ಸಂಕೀರ್ಣಗೊಳಿಸುತ್ತವೆ.

### ವಾಣಿಜ್ಯ ವಿಮಾನಗಳ ಹಾರಾಟ ಸ್ಥಗಿತ

**ಸ್ಕಾಟ್ ಬೆಸೆಂಟ್ ಮತ್ತಷ್ಟು ನಿರ್ಬಂಧಗಳ ಬಗ್ಗೆ ಎಚ್ಚರಿಕೆ ನೀಡಿದ ನಂತರ, ಇರಾಕ್, ಓಮನ್ ಮತ್ತು ಅಜೆರ್ಬೈಜಾನ್ ವಿಮಾನ ಪ್ರಯಾಣವನ್ನು ಸ್ಥಗಿತಗೊಳಿಸುವ ರಾಷ್ಟ್ರಗಳ ಪಟ್ಟಿಗೆ ಸೇರಿಕೊಂಡಿವೆ. ಇರಾನ್‌ನ ಅತಿದೊಡ್ಡ ವಾಹಕಗಳಲ್ಲಿ ಒಂದಾದ ಮಹನ್ ಏರ್, ಇಸ್ತಾನ್ಬುಲ್, ಅಂಕಾರಾ ಮತ್ತು ಮಸ್ಕತ್ ಮತ್ತು ಅಲ್ಲಿಂದ ವಿಮಾನಗಳನ್ನು ಸ್ಥಗಿತಗೊಳಿಸಿದೆ, ಆದರೆ ಜಾರ್ಜಿಯಾ ಟಿಬಿಲಿಸಿಗೆ ವಾಣಿಜ್ಯ ವಿಮಾನಗಳನ್ನು ಸ್ಥಗಿತಗೊಳಿಸಿದೆ.**

# ಓಮನ್‌ನಲ್ಲಿ ವಾಣಿಜ್ಯ ಹಡಗಿನ ಮೇಲೆ ದಾಳಿ: ಭಾರತೀಯ ಪ್ರಜೆ ಸಾವು

**ಮಸ್ಕತ್, ಸೆ.23:** ಓಮನ್ ನಲ್ಲಿ ಭಾರತಕ್ಕೆ ಪ್ರಯಾಣಿಸುತ್ತಿದ್ದ ವಾಣಿಜ್ಯ ಹಡಗಿನ ಮೇಲೆ ಮತ್ತೆ ದಾಳಿ ನಡೆದಿದೆ. ಎಂವಿ ಕೇಪ್ ಡಾವೊ' ಎಂಬ ವಾಣಿಜ್ಯ ಹಡಗಿನ ಮೇಲಿನ ದಾಳಿಯಲ್ಲಿ ಭಾರತೀಯ ಪ್ರಜೆಯೊಬ್ಬರು ಮೃತಪಟ್ಟಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಓಮನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಬುಧವಾರ ಮಾಹಿತಿ ಹಂಚಿಕೊಂಡಿದೆ.

ಈ ದಾಳಿಯ ಕುರಿತು ನಿಗಾ ವಹಿಸುತ್ತಿದ್ದು, 19 ಭಾರತೀಯ ಪ್ರಜೆಗಳು ಸೇರಿದಂತೆ ಹಡಗಿನಲ್ಲಿದ್ದ ಸಿಬ್ಬಂದಿಯ ಸುರಕ್ಷತೆಯ ವಿಷಯದಲ್ಲಿ ಓಮನ್‌ನ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುತ್ತಿರುವುದಾಗಿ ರಾಯಭಾರ ಕಚೇರಿ ಹೇಳಿದೆ.

ಓಮನ್ ಕರಾವಳಿಯಲ್ಲಿ ಹಡಗಿನ ಮೇಲೆ ದಾಳಿ, 3 ಭಾರತೀಯರು ನಾಪತ್ತೆ: ಅಮೆರಿಕದ ರಾಜತಾಂತ್ರಿಕರಿಗೆ ಭಾರತ ಸಮನ್ಸ್

ಈ ದಾಳಿಯಲ್ಲಿ ಒಬ್ಬ ಭಾರತೀಯ ಪ್ರಜೆ ಮೃತಪಟ್ಟಿರುವುದು ನಮಗೆ ತೀವ್ರ ದುಃಖವನ್ನು ತಂದಿದೆ. ಮೃತರ ಕುಟುಂಬಕ್ಕೆ ನಮ್ಮ ಸಂತಾಪಗಳು," ಎಂದು ಭಾರತೀಯ ರಾಯಭಾರ ಕಚೇರಿ ತಿಳಿಸಿದೆ. ಹಡಗಿನ ಮೇಲೆ ದಾಳಿ ನಡೆಸಿದವರು ಯಾರು ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ತಾವು ಆರ್‌ಪಿಎಸ್‌ಎಲ್ (ಖಕಖಐ) ಜೊತೆ ಸಮನ್ವಯ ಸಾಧಿಸುತ್ತಿದ್ದು, ಮೃತರ ಕುಟುಂಬದೊಂದಿಗೆ ಸಂಪರ್ಕದಲ್ಲಿದ್ದೇವೆ ಎಂದು ರಾಯಭಾರ ಕಚೇರಿ ತಿಳಿಸಿದೆ.

# ಕಾರಿನ ಮೇಲೆ ಬಂದೂಕು ದಾಳಿ ನಡೆಸಿ ಪಾಕ್ ಸಚಿವನ ಅಪಹರಣ




**ಖೈಬರ್ ಪಖ್ತುಂಖ್ವಾ, ಸೆ.23:** ಪಾಕಿಸ್ತಾನದ ಖೈಬರ್ ಪಖ್ತುಂಖ್ವಾದಲ್ಲಿ ಹಾಡಹಗಲೇ ಸಚಿವರೊಬ್ಬರ ಅಪಹರಣ ಪ್ರಕರಣ ಕೋಲಾಹಲಕ್ಕೆ ಕಾರಣವಾಗಿದೆ. ಸಾರ್ವಜನಿಕ ಆರೋಗ್ಯ ಎಂಜಿನಿಯರಿಂಗ್ ಸಚಿವ ಫಜಲ್ ಶಕೂರ್ ಖಾನ್‌ನನ್ನು ಸೋಮವಾರ ಮಧ್ಯಾಹ್ನ ಶಸ್ತ್ರಸಜ್ಜಿತ ಮುಸುಕುಧಾರಿಗಳು ಅಪಹರಿಸಿದ್ದಾರೆ. ದಾಳಿಕೋರರು ಹೆದ್ದಾರಿಯಲ್ಲಿ ಸಚಿವನ ಕಾರನ್ನು ನಿಲ್ಲಿಸಿ ಮೊದಲು ಅದರ ಟೈರ್‌ಗಳಿಗೆ ಗುಂಡು ಹಾರಿಸಿ ನಂತರ ಸಚಿವನನ್ನು ತಮ್ಮೊಂದಿಗೆ ಕರೆದೊಯ್ದಿದ್ದಾರೆ.


ವರದಿಗಳ ಪ್ರಕಾರ, ದಾಳಿಕೋರರು ಶಸ್ತ್ರಸಜ್ಜಿತರಾಗಿದ್ದು ಮುಖವಾಡಗಳನ್ನು ಧರಿಸಿದ್ದರು. ಸಾಮಾಜಿಕ ಮಾಧ್ಯಮದಲ್ಲಿ ಪ್ರಸಾರವಾಗುತ್ತಿರುವ ವೀಡಿಯೊದಲ್ಲಿ ಕೆಲವು ಮುಸುಕುಧಾರಿಗಳು ಮುಖ್ಯ ರಸ್ತೆಯನ್ನು ನಿರ್ಬಂಧಿಸುತ್ತಿರುವುದನ್ನು ತೋರಿಸಲಾಗಿದೆ. ಸಚಿವನ ಕಾರನ್ನು ತಡೆಯಲು ಅವರು ನೇರವಾಗಿ ಟೈರ್‌ಗಳ ಮೇಲೆ ಗುಂಡು ಹಾರಿಸಿದ್ದಾರೆ ಎಂದು ವರದಿಯಾಗಿದೆ. ಫಜಲ್ ಶಕೂರ್ ಖಾನ್ ಅವರನ್ನು ಯಾವ ಸಂಘಟನೆ ಅಥವಾ ಗುಂಪು ಅಪಹರಿಸಿದೆ. ಅವರ ಬೇಡಿಕೆಗಳು ಅಥವಾ ಕಾರಣ ಇನ್ನೂ ಸ್ಪಷ್ಟವಾಗಿಲ್ಲ.

ಸಚಿವ ಫಜಲ್ ಶಕೂರ್ ಖಾನ್ ಅಪಹರಣದ ಜೊತೆಗೆ, ಪಿಟಿಐ ನಾಯಕ ಮತ್ತು ಪ್ರಾಂತೀಯ ಶಾಸಕ ಶಕೀಲ್ ಅಹ್ಮದ್ ಅವರನ್ನು ಅಪಹರಿಸಲು ಯತ್ನಿಸಲಾಗಿದೆ ಎಂಬ ವರದಿಗಳು ಸಹ ಹೊರಬಂದಿವೆ. ಮಲಕಂಡ್‌ನಲ್ಲಿ ಶಕೀಲ್ ಅಹ್ಮದ್ ಅವರನ್ನು ಗುರಿಯಾಗಿಸಿಕೊಂಡಿದ್ದಾರೆ ಎನ್ನಲಾದ ಪ್ರಯತ್ನವು ಪಿಟಿಐ ಕಾರ್ಯಕರ್ತರಲ್ಲಿ ಆಕ್ರೋಶವನ್ನು ಹುಟ್ಟುಹಾಕಿದೆ ಎಂದು ವರದಿಯಾಗಿದೆ.

ಮಲಕಂಡ್‌ನಲ್ಲಿರುವ ಬಟ್ ಖೈಲಾ ಬೈಪಾಸ್ ಅನ್ನು ಪಿಟಿಐ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ತಡೆದರು. ಪ್ರತಿಭಟನಾಕಾರರು ಟೈರ್‌ಗಳನ್ನು ಸುಟ್ಟು ಘೋಷಣೆಗಳನ್ನು ಕೂಗಿದರು.

# ವಸ್ತುಶಃ ಪಿಓಕೆ ಸ್ಮಶಾನವಾಗಿದೆ, ನಾಗರಿಕರಿಗೆ ರಕ್ಷಣೆ ಇಲ್ಲ, ಪ್ರತಿ ಹತ್ಯೆಯ ತನಿಖೆಯಾಗಲಿ

## ವಿಶ್ವಸಂಸ್ಥೆಯಲ್ಲಿ ಪಾಕ್ ಮುಖವಾಡ ಕಳಚಿದ ಕಾಶ್ಮೀರಿ ಮಹಿಳೆ!



**ನವದೆಹಲಿ, ಸೆ.23:** ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ (ಪಿಓಕೆ) ಮೂಲಭೂತ ಹಕ್ಕುಗಳಿಗಾಗಿ ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದ ನಾಗರಿಕರ ಮೇಲೆ ಪಾಕಿಸ್ತಾನ ಸರ್ಕಾರ ನಡೆಸಿದ ದಮನದ ವಿರುದ್ಧ ಬಾರಾಮುಲ್ಲಾದ ಯುವತಿ ತಸ್ಲೀಮಾ ಅಖ್ತರ್ ವಿಶ್ವಸಂಸ್ಥೆಯಲ್ಲಿ ಧ್ವನಿ ಎತ್ತಿದ್ದಾರೆ.

ಕಾಶ್ಮೀರದಲ್ಲಿನ ಭಯೋತ್ಪಾದನೆ ಸಂತ್ರಸ್ತರ ಸಂಘಟನೆ ಅಸೋಸಿಯೇಷನ್ ಆಫ್ ಟೆರರ್ ವಿಕ್ಟಿಮ್ಸ್ ಇನ್ ಕಾಶ್ಮೀರ್ (ಎಟಿವಿಕೆ) ಜತೆ ಕಾರ್ಯನಿರ್ವಹಿಸುತ್ತಿರುವ ಸಾಮಾಜಿಕ–ರಾಜಕೀಯ ಕಾರ್ಯಕರ್ತೆ ತಸ್ಲೀಮಾ ಅಖ್ತರ್, ಜಿನೀವಾದಲ್ಲಿ ನಡೆದ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಯ 63ನೇ ಅಧಿವೇಶನದಲ್ಲಿ ಪಿಓಕೆಯ ಹದಗೆಡುತ್ತಿರುವ ಮಾನವ ಹಕ್ಕುಗಳ ಪರಿಸ್ಥಿತಿಯ ಬಗ್ಗೆ ಗಂಭೀರ ಕಳವಳ ವ್ಯಕ್ತಪಡಿಸಿದರು.

ಮೂಲಭೂತ ಹಕ್ಕುಗಳಿಗಾಗಿ ಶಾಂತಿಯುತವಾಗಿ ಹೋರಾಟ ನಡೆಸುತ್ತಿದ್ದ ನಾಗರಿಕರ ಮೇಲೆ ಪಾಕಿಸ್ತಾನದ ಭದ್ರತಾ ಪಡೆಗಳು ಗುಂಡಿನ ದಾಳಿ ನಡೆಸಿವೆ ಎಂದು ಆರೋಪಿಸಿದ ತಸ್ಲೀಮಾ ಅಖ್ತರ್, ಪ್ರತಿ ಹತ್ಯೆಯ ಬಗ್ಗೆಯೂ ಸ್ವತಂತ್ರ ತನಿಖೆ ನಡೆಯಬೇಕು. ಎಲ್ಲ ಪ್ರಕರಣಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಮುಕ್ತವಾಗಿ ಹಾಗೂ ನ್ಯಾಯಸಮ್ಮತವಾಗಿ ಪಡೆಯಲು ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಪಿಓಕೆಯಲ್ಲಿ ಇತ್ತೀಚೆಗೆ ಆಡಳಿತಾತ್ಮಕ ಹಾಗೂ ಆರ್ಥಿಕ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಜಾಯಿಂಟ್ ಅವಾಮಿ ಆಕ್ಷನ್ ಕಮಿಟಿ ಮತ್ತು ನಾಗರಿಕ ಸಂಘಟನೆಗಳ ನೇತೃತ್ವದಲ್ಲಿ ನಿರಂತರ ಶಾಂತಿಯುತ ಪ್ರತಿಭಟನೆಗಳು ನಡೆದಿವೆ. ಆದರೆ ಈ ಪ್ರತಿಭಟನೆಗಳನ್ನು ಪಾಕಿಸ್ತಾನ ಸರ್ಕಾರ ಕ್ರೂರವಾಗಿ ಹತ್ತಿಕ್ಕಿದೆ' ಎಂದು ಹೇಳಿದರು.

ಪಾಕಿಸ್ತಾನ ಸರ್ಕಾರ ನೂರಾರು ಹೋರಾಟಗಾರರನ್ನು ಬಂಧಿಸಿದೆ. ಪ್ರಮುಖ ನಾಯಕರನ್ನು ವಶಕ್ಕೆ ಪಡೆದಿದೆ. ಇಂಟರ್‌ನೆಟ್ ಸೇವೆ ಸ್ಥಗಿತಗೊಳಿಸಿದೆ. ಹಿಂಸಾತ್ಮಕ ಘರ್ಷಣೆಗಳಿಗೆ ಕಾರಣವಾಗಿದ್ದು, ಅವುಗಳಲ್ಲಿ ಹಲವು ಮಂದಿ ಮೃತಪಟ್ಟಿದ್ದಾರೆ. ಇದರಿಂದ ಪಿಓಕೆಯಲ್ಲಿನ ರಾಜಕೀಯ ಅಸ್ಥಿರತೆ ಹಾಗೂ ಜನರ ಅಸಮಾಧಾನ ಬಹಿರಂಗವಾಗಿದೆ ಎಂದು ಅವರು ಹೇಳಿದರು.

ಪಿಓಕೆಯಲ್ಲಿ ನಾಗರಿಕರಿಗೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸಲು ಅವಕಾಶವೇ ಇಲ್ಲದಂತಾಗಿದೆ ಎಂದು ಆರೋಪಿಸಿದ ತಸ್ಲೀಮಾ, ಈ ವಿಚಾರದಲ್ಲಿ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿ ತಕ್ಷಣ ಮಧ್ಯಪ್ರವೇಶಿಸಬೇಕು ಎಂದು ಆಗ್ರಹಿಸಿದರು.

ಪಿಓಕೆಯಲ್ಲಿ ನಾಗರಿಕ ಸ್ವಾತಂತ್ರ್ಯಕ್ಕೆ ಯಾವುದೇ ಅವಕಾಶವಿಲ್ಲ. ಪಾಕಿಸ್ತಾನದ ಪಡೆಗಳು ನಡೆಸುತ್ತಿರುವ ವ್ಯಾಪಕ ಪ್ರತೀಕಾರದ ಕ್ರಮಗಳು ಹಾಗೂ ನಿರಪರಾಧ ನಾಗರಿಕರ ಹತ್ಯೆ ತಕ್ಷಣ ನಿಲ್ಲಬೇಕು. ನಾಗರಿಕ ಸ್ವಾತಂತ್ರ್ಯ ಮತ್ತು ಸಂವಹನ ವ್ಯವಸ್ಥೆಗಳನ್ನು ಮರುಸ್ಥಾಪಿಸಬೇಕು. ಪ್ರತಿಯೊಂದು ಹತ್ಯೆಯ ಬಗ್ಗೆಯೂ ಸ್ವತಂತ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

### ಕಾಶ್ಮೀರದ ಅಭಿವೃದ್ಧಿ ಕುರಿತು ಮಾಹಿತಿ

**ಭಾರತದ ಜಮ್ಮು–ಕಾಶ್ಮೀರ ಮತ್ತು ಪಿಓಕೆಯ ಪರಿಸ್ಥಿತಿಯನ್ನು ಹೋಲಿಸಿದ ಅವರು, ಜಮ್ಮು–ಕಾಶ್ಮೀರದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ ಎಂದು ಹೇಳಿದರು. ಇದಕ್ಕೆ ವಿರುದ್ಧವಾಗಿ, ಭಾರತದಲ್ಲಿನ ಜಮ್ಮು–ಕಾಶ್ಮೀರವು 2024ರಿಂದ ಕೌಶಲ್ಯಾಭಿವೃದ್ಧಿ ಕ್ಷೇತ್ರದಲ್ಲಿ ಪ್ರಗತಿ ಸಾಧಿಸುತ್ತಿದೆ. ಇದರಿಂದ ಉದ್ಯೋಗ ಸೃಷ್ಟಿಯಾಗುತ್ತಿದ್ದು, ಸ್ಥಳೀಯ ವ್ಯಾಪಾರಗಳಿಗೆ ಉತ್ತೇಜನ ದೊರೆಯುತ್ತಿದೆ. ಸ್ಮಾರ್ಟ್ ಸಿಟಿ ಯೋಜನೆಗಳು ಮತ್ತು ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿಯೂ ಪ್ರಗತಿಗೆ ಮತ್ತಷ್ಟು ಬಲ ನೀಡುತ್ತಿವೆ ಎಂದು ತಸ್ಲೀಮಾ ಅಖ್ತರ್ ಹೇಳಿದರು.**

# ಶಾರ್ಜಾದಲ್ಲಿ ಉಡುಪಿ ಜಿಲ್ಲೆಯ ಕುಂದಾಪುರ ಮೂಲದ ವ್ಯಕ್ತಿ ಬರ್ಬರ ಹತ್ಯೆ



**ನವದೆಹಲಿ, ಸೆ.23:** ಉಡುಪಿ ಜಿಲ್ಲೆಯ ಕುಂದಾಪುರ ಮೂಲದ ಆಲ್ವಿನ್ ಪ್ರಕಾಶ್ ಕುಂದರ್ (47) ಎಂಬವರು ಯುಎಇಯ ಶಾರ್ಜಾದಲ್ಲಿ ಬರ್ಬರವಾಗಿ ಹತ್ಯೆಯಾಗಿರುವ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ. ಸುಮಾರು 14 ವರ್ಷಗಳಿಂದ ಶಾರ್ಜಾ ವಿಮಾನ ನಿಲ್ದಾಣದಲ್ಲಿ ಕೆಲಸ ಮಾಡುತ್ತಿದ್ದ ಪ್ರಕಾಶ್ ಅವರ ಮೃತದೇಹವನ್ನು 9 ತುಂಡುಗಳಾಗಿ ಕತ್ತರಿಸಿ ಎರಡು ಚೀಲಗಳಲ್ಲಿ ತುಂಬಲಾಗಿತ್ತು ಎಂದು ಅವರ ಸಹೋದರ ಅನಿಲ್ ಪ್ರಶಾಂತ್ ಕುಂದರ್ ತಿಳಿಸಿದ್ದಾರೆ.

ಜುಲೈ 20ರ ಸುಮಾರಿಗೆ ಪ್ರಕಾಶ್ ಅವರೊಂದಿಗೆ ಸಹೋದರ ಅನಿಲ್ ಸಂಪರ್ಕಿಸಲು ಪ್ರಯತ್ನಿಸಿದ್ದರು. ಕರೆ ಸ್ವೀಕರಿಸದ ಪ್ರಕಾಶ್ ಅವರ ಮೊಬೈಲ್‌ನಿಂದ ತಾವು ಕ್ಷೇಮವಾಗಿರುವುದಾಗಿ ಸಂದೇಶ ಬಂದಿತ್ತು. ಸಾಮಾನ್ಯವಾಗಿ ಧ್ವನಿ ಸಂದೇಶಗಳ ಮೂಲಕವೇ ಮಾತನಾಡುತ್ತಿದ್ದ ಪ್ರಕಾಶ್, ಈ ಬಾರಿ ಪಠ್ಯ ಸಂದೇಶ ಕಳುಹಿಸಿದ್ದರಿಂದ ಕುಟುಂಬಕ್ಕೆ ಅನುಮಾನ ಮೂಡಿತ್ತು. ಬಳಿಕ ಹಲವು ದಿನಗಳಾದರೂ ಅವರಿಂದ ಯಾವುದೇ ಪ್ರತಿಕ್ರಿಯೆ ಬಂದಿರಲಿಲ್ಲ.

ಈ ಹಿನ್ನೆಲೆಯಲ್ಲಿ ಶಾರ್ಜಾದಲ್ಲಿದ್ದ ಪ್ರಕಾಶ್ ಅವರ ಪರಿಚಿತ ಮನೋಹರ್ ಅವರ ಫ್ಲ್ಯಾಟ್‌ಗೆ ತೆರಳಿ ವಿಚಾರಿಸಿದ್ದರು. ಅಲ್ಲಿ ಪ್ರಕಾಶ್ ಭಾರತಕ್ಕೆ ತೆರಳಿದ್ದಾರೆ ಎಂದು ತಿಳಿಸಲಾಗಿತ್ತು. ಕಂಪನಿಯ ಮಾನವ ಸಂಪನ್ಮೂಲ ವಿಭಾಗದಿಂದಲೂ ಆರಂಭದಲ್ಲಿ ಇದೇ ಮಾಹಿತಿ ಬಂದಿತ್ತು. ಆದರೆ ಪ್ರಕಾಶ್ ಭಾರತಕ್ಕೆ ಬಂದಿಲ್ಲ ಎಂದು ಕುಟುಂಬ ಸ್ಪಷ್ಟಪಡಿಸಿದ ಬಳಿಕ ಪಾಸ್ಪೋರ್ಟ್ ದಾಖಲೆ ಪರಿಶೀಲಿಸಿದಾಗ ಅವರು ಶಾರ್ಜಾದಿಂದ ಹೊರಟಿರುವುದು ಕಂಡುಬರಲಿಲ್ಲ. ಬಳಿಕ ನಾಪತ್ತೆ ದೂರು ದಾಖಲಿಸಿ ಹುಡುಕಾಟ ಆರಂಭಿಸಲಾಗಿತ್ತು.

ತನಿಖೆಯ ಸಂದರ್ಭದಲ್ಲಿ ಒಮಾನ್ ಗಡಿಯತ್ತ ಸಾಗುವ ಮಾರ್ಗದಲ್ಲಿ ನಿಲ್ಲಿಸಲಾಗಿದ್ದ ಕಾರಿನಲ್ಲಿ ಪ್ರಕಾಶ್ ಅವರ ಮೃತದೇಹ ಪತ್ತೆಯಾಗಿದೆ. ಮೃತದೇಹವನ್ನು 9 ತುಂಡುಗಳಾಗಿ ಕತ್ತರಿಸಿ ಎರಡು ಚೀಲಗಳಲ್ಲಿ ತುಂಬಲಾಗಿತ್ತು ಎಂದು ಸಹೋದರ ಅನಿಲ್ ತಿಳಿಸಿದ್ದಾರೆ.

# ಬ್ಯಾಡ್ಮಿಂಟನ್: ಕಂಚಿನ ಪದಕಕ್ಕೆ ತೃಪ್ತಿಪಟ್ಟ ಭಾರತೀಯ ಪುರುಷರ ಜೋಡಿ



ನಗೋಯಾ: ಜಪಾನ್ ನಲ್ಲಿ ನಗೋಯಾದಲ್ಲಿ ಬುಧವಾರ ನಡೆದ ಏಷ್ಯನ್ ಗೇಮ್ಸ್‌ನ ಸೆಮಿಫೈನಲ್‌ನಲ್ಲಿ ಭಾರತೀಯ ಪುರುಷರ ಬ್ಯಾಡ್ಮಿಂಟನ್ ತಂಡ ಚೀನಾ ವಿರುದ್ಧ 1–3 ಅಂತರದಲ್ಲಿ ಸೋಲನುಭವಿಸಿತು. ಇದರಿಂದ ಕಂಚಿನ ಪದಕಕ್ಕೆ ತೃಪ್ತಿಪಡಬೇಕಾಯಿತು.

ಸಿಂಗಲ್ಸ್ ಸ್ಪರ್ಧಿಗಳಾದ ಲಕ್ಷ್ಯ ಸೇನ್ ಮತ್ತು ಆಯುಷ್ ಶೆಟ್ಟಿ ತಮ್ಮ ಕ್ವಾರ್ಟರ್–ಫೈನಲ್ ಪ್ರದರ್ಶನವನ್ನು ಪುನರಾವರ್ತಿಸಲು ವಿಫಲರಾಗಿ ಸೋಲನ್ನು ಕಂಡರು. ಮಾಜಿ ವಿಶ್ವ ನಂ. 1 ಆಟಗಾರ ಶಿ ಯು ಕ್ವಿ ವಿರುದ್ಧದ ಪಂದ್ಯದಲ್ಲಿ ಲಕ್ಷ್ಯ 16–21, 18–21 ಅಂತರದಲ್ಲಿ ಸೋತರು. ಇದರಿಂದಾಗಿ ಹಾಲಿ ಚಾಂಪಿಯನ್ ಚೀನಾ ಮುನ್ನಡೆ ಸಾಧಿಸಿತು.

ಇತ್ತೀಚಿನ ಚೀನಾ ಮಾಸ್ಟರ್ಸ್ ಕೂಟದ ವಿಜೇತರಾದ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಅವರ ಜೋಡಿ, ದಿನದ ಎರಡನೇ ಪಂದ್ಯದಲ್ಲಿ ಲಿಯಾಂಗ್ ವೈಕೆಂಗ್ ಮತ್ತು ವಾಂಗ್ ಚಾಂಗ್ ವಿರುದ್ಧ ನೇರ ಗೇಮ್‌ಗಳಲ್ಲಿ (21–11, 22–20) ಜಯಗಳಿಸುವ ಮೂಲಕ ಪಂದ್ಯವನ್ನು ಸಮಬಲಗೊಳಿಸಿತು.

ಆದಾಗ್ಯೂ, ಜಪಾನ್‌ನ ಕೋಕಿ ವಟನಾಬೆ ವಿರುದ್ಧ ಉತ್ತಮ ಜಯ ಸಾಧಿಸಲು ತಾಳ್ಮೆಯ ಆಟವಾಡಿದ್ದ ಆಯುಷ್, ಎರಡನೇ ಪುರುಷರ ಸಿಂಗಲ್ಸ್ ಪಂದ್ಯದಲ್ಲಿ ಲಿ ಶಿಫೆಂಗ್ ವಿರುದ್ಧ ಸೋತಿದ್ದರಿಂದ ಭಾರತ ಮತ್ತೆ ಹಿನ್ನಡೆ ಅನುಭವಿಸಿತು.

ಆಯುಷ್ ಉತ್ತಮ ಆರಂಭವನ್ನು ಪಡೆದು, ಮೊದಲ ಗೇಮ್‌ನ ಬಹುಭಾಗದಲ್ಲಿ ಮುನ್ನಡೆಯಲ್ಲಿದ್ದರು. ಆದರೆ, ಲಿ ಪಂದ್ಯದ ಮೇಲೆ ಹಿಡಿತ ಸಾಧಿಸಿ ಮೊದಲ ಗೇಮ್ ಅನ್ನು ತಮ್ಮದಾಗಿಸಿಕೊಂಡರು. ಇದರಿಂದಾಗಿ ನಿರಾಶೆಗೊಂಡ ಆಯುಷ್, ಎರಡನೇ ಗೇಮ್‌ನಲ್ಲಿ ಮತ್ತೆ ಗಮನಹರಿಸಲು ಮತ್ತು ಲಯ ಕಂಡುಕೊಳ್ಳಲು ವಿಫಲರಾದರು. 54 ನಿಮಿಷಗಳ ಈ ಪಂದ್ಯದ ಅಂತ್ಯದಲ್ಲಿ, ಲಿ ಅವರ ಪರವಾಗಿ 21–19, 21–13 ಅಂಕಗಳು ದಾಖಲಾದವು.

ಭಾರತ 1–2 ಅಂತರದಲ್ಲಿ ಹಿನ್ನಡೆಯಲ್ಲಿದ್ದಾಗ, ತಂಡವನ್ನು ಪಾರು ಮಾಡುವ ಜವಾಬ್ದಾರಿ ಹರಿಹರನ್ ಅಮಸಕರುಣನ್ ಮತ್ತು ಎಂ.ಆರ್. ಅರ್ಜುನ್ ಅವರನ್ನೊಳಗೊಂಡ ಎರಡನೇ ಡಬಲ್ಸ್ ಜೋಡಿಯ ಮೇಲಿತ್ತು. ಆದರೆ, ಅವರು ಹೇ ಜಿ ಟಿಂಗ್ ಮತ್ತು ಲಿಯು ಯಿ ಜೋಡಿಯ ವಿರುದ್ಧ ಹಿನ್ನಡೆಯಲ್ಲಿದ್ದುಕೊಂಡೇ ಹೋರಾಡಬೇಕಾಯಿತು.

ಚೀನೀ ಜೋಡಿಯು ಮೊದಲ ಗೇಮ್ ಅನ್ನು 25 ನಿಮಿಷಗಳಲ್ಲಿ ಗೆದ್ದು ಫೈನಲ್ ಪ್ರವೇಶಿಸುವ ಹಂತ ತಲುಪಿತು. ಆದರೆ ಭಾರತೀಯ ಜೋಡಿ ಕಠಿಣ ಪ್ರತಿರೋಧವೊಡ್ಡಿ ಎರಡನೇ ಗೇಮ್ ಅನ್ನು ಗೆದ್ದುಕೊಂಡಿತು.

ಆದಾಗ್ಯೂ, ನಿರ್ಣಾಯಕ ಪಂದ್ಯದಲ್ಲಿ ಭಾರತೀಯರು ಆಯಾಸಗೊಂಡಂತೆ ಕಂಡುಬಂದರು ಮತ್ತು ಅಂತಿಮವಾಗಿ ಚೀನೀ ಜೋಡಿಯು 21–16, 17–21, 21–9 ಅಂತರದಲ್ಲಿ ಜಯ ಸಾಧಿಸಿತು. ಇದರಿಂದಾಗಿ ಭಾರತ ಕಂಚಿನ ಪದಕ ಪಡೆದುಕೊಂಡಿತು.

# ಭಾರತಕ್ಕೆ ಶೂಟಿಂಗ್‌ನಲ್ಲಿ ಮತ್ತೊಂದು ಪದಕ

20th Asian Games Aichi-Nagoya 2026

ಐಚಿ – ನಗೋಯಾ: 2026ರ ಐಚಿ–ನಗೋಯಾ ಏಷ್ಯನ್ ಗೇಮ್ಸ್‌ನಲ್ಲಿ ಭಾರತದ ಶೂಟರ್‌ಗಳು ಪದಕ ಬೇಟೆ ಮುಂದುವರಿಸಿದ್ದು, ಅನಂತ್‌ಜೀತ್ ಸಿಂಗ್ ನರುಕಾ, ಮೈರಾಜ್ ಅಹ್ಮದ್ ಖಾನ್ ಹಾಗೂ ಭವ್‌ತೇಗ್ ಸಿಂಗ್ ಗಿಲ್ ಒಳಗೊಂಡ ಭಾರತದ ಪುರುಷರ ಸ್ಕೀಟ್ ತಂಡ ಬುಧವಾರ ಕಂಚಿನ ಪದಕ ಗೆದ್ದಿದೆ. ಪುರುಷರ ಸ್ಕೀಟ್ ತಂಡ ವಿಭಾಗದಲ್ಲಿ ಭಾರತ 346 ಅಂಕಗಳೊಂದಿಗೆ ಮೂರನೇ ಸ್ಥಾನ ಪಡೆಯಿತು. ಕಜಕಿಸ್ತಾನವೂ 346 ಅಂಕ ಗಳಿಸಿ ಭಾರತದೊಂದಿಗೆ ಸಮಬಲ ಸಾಧಿಸಿತ್ತು. ಬಳಿಕ ನಡೆದ ಶೂಟ್‌ಆಫ್‌ನಲ್ಲಿ ಕಜಕಿಸ್ತಾನವನ್ನು ಮಣಿಸಿದ ಭಾರತ ಕಂಚಿನ ಪದಕ ತನ್ನದಾಗಿಸಿಕೊಂಡಿತು.

ಇದೇ ವೇಳೆ ಅನಂತ್‌ಜೀತ್ ಸಿಂಗ್ ನರುಕಾ ಪುರುಷರ ಸ್ಕೀಟ್ ವೈಯಕ್ತಿಕ ವಿಭಾಗದ ಫೈನಲ್‌ಗೂ ಅರ್ಹತೆ ಪಡೆದಿದ್ದಾರೆ. ಅವರ ಬಲಿಷ್ಠ ಅರ್ಹತಾ ಸುತ್ತಿನ ಪ್ರದರ್ಶನದ ಬಳಿಕ ಫೈನಲ್‌ಗೆ ಸ್ಥಾನ ಪಡೆದಿದ್ದು, ಮಧ್ಯಾಹ್ನ 12.30ಕ್ಕೆ ಫೈನಲ್ ಆರಂಭವಾಗಲಿದೆ. ಏಷ್ಯನ್ ಗೇಮ್ಸ್‌ನಲ್ಲಿ ಶೂಟಿಂಗ್ ವಿಭಾಗದಲ್ಲಿ ಭಾರತದ ಪದಕಗಳ ಸಂಖ್ಯೆ ಹೆಚ್ಚುತ್ತಲೇ ಇದ್ದು, ಈ ಕ್ರೀಡೆಯಲ್ಲಿ ಭಾರತ ತನ್ನ ಉತ್ತಮ ಪ್ರದರ್ಶನ ಮುಂದುವರಿಸಿದೆ.

**ಶೂಟಿಂಗ್‌ನಲ್ಲಿ ಒಂದೇ ದಿನ ಎರಡು ಪದಕ**

ಭಾರತದ ಮಹಿಳೆಯರ ಸ್ಕೀಟ್ ತಂಡವೂ ಕಂಚಿನ ಪದಕ ಗೆದ್ದಿದೆ. ರೈಝಾ ಧಿಲ್ಲೋನ್, ಪರಿನಾಜ್ ಧಲಿವಾಲ್ ಮತ್ತು ಮಹೇಶ್ವರಿ ಚೌಹಾಣ್ ಅವರನ್ನೊಳಗೊಂಡ ತಂಡ 331 ಅಂಕಗಳೊಂದಿಗೆ ಮೂರನೇ ಸ್ಥಾನ ಪಡೆಯಿತು. ಚೀನಾ 346 ಅಂಕಗಳೊಂದಿಗೆ ಚಿನ್ನ ಗೆದ್ದರೆ, ಕಜಕಿಸ್ತಾನ ಬೆಳ್ಳಿ ಪದಕಕ್ಕೆ ಮುತ್ತಿಕ್ಕಿತು.

ಪುರುಷರ ಸ್ಕೀಟ್ ತಂಡ 346 ಅಂಕಗಳೊಂದಿಗೆ ಮೂರನೇ ಸ್ಥಾನ ಪಡೆದಿದ್ದು, ಶೂಟ್‌ಆಫ್‌ನಲ್ಲಿ ಕಜಕಿಸ್ತಾನವನ್ನು ಸೋಲಿಸಿ ಕಂಚು ಗೆದ್ದಿದೆ. ನರುಕಾ ವೈಯಕ್ತಿಕ ಫೈನಲ್‌ಗೂ ಅರ್ಹತೆ ಪಡೆದಿದ್ದಾರೆ. ಒಲಿಂಪಿಕ್ಸ್ ಪದಕ ವಿಜೇತೆ ಮನು ಭಾಕರ್ ಮಹಿಳೆಯರ 10 ಮೀಟರ್ ಏರ್ ಪಿಸ್ತೂಲ್ ವೈಯಕ್ತಿಕ ಫೈನಲ್‌ಗೆ ಪ್ರವೇಶಿಸಿದರೂ, ಪದಕ ಸುತ್ತಿನಲ್ಲಿ ಐದನೇ ಸ್ಥಾನಕ್ಕೆ ತೃಪ್ತಿಪಟ್ಟರು. ಸುರೂಚಿ ಇಂದರ್ ಸಿಂಗ್ ಮತ್ತು ಈಶಾ ಸಿಂಗ್ ಫೈನಲ್‌ಗೆ ಅರ್ಹತೆ ಪಡೆಯಲು ವಿಫಲರಾದರು.

**ಸಾಫ್ಟ್ ಟೆನಿಸ್‌ನಲ್ಲಿ ಭಾರತಕ್ಕೆ ಐತಿಹಾಸಿಕ ಪದಕ ಖಚಿತ**

ಸಾಫ್ಟ್ ಟೆನಿಸ್‌ನಲ್ಲಿ ಜಯ್ ಮೀನಾ ಪುರುಷರ ಸಿಂಗಲ್ಸ್ ಕ್ವಾರ್ಟರ್‌ಫೈನಲ್‌ನಲ್ಲಿ ಫಿಲಿಪ್ಪೀನ್ಸ್‌ನ ಶೆರ್ವಿನ್ ನುಗಿಟ್ ಅವರನ್ನು ರೋಚಕ ಹೋರಾಟದಲ್ಲಿ ಮಣಿಸಿ ಸೆಮಿಫೈನಲ್ ಪ್ರವೇಶಿಸಿದರು. ಸೆಮಿಫೈನಲ್‌ಗೆ ಪ್ರವೇಶಿಸಿದ ಎಲ್ಲ ಆಟಗಾರರಿಗೆ ಪದಕ ಖಚಿತವಾಗಿರುವುದರಿಂದ, ಸಾಫ್ಟ್ ಟೆನಿಸ್‌ನಲ್ಲಿ ಏಷ್ಯನ್ ಗೇಮ್ಸ್ ಇತಿಹಾಸದಲ್ಲೇ ಭಾರತದ ಮೊದಲ ಪದಕವನ್ನು ಜಯ್ ಮೀನಾ ಖಚಿತಪಡಿಸಿದ್ದಾರೆ.




**ಕಬಡ್ಡಿಯಲ್ಲಿ ಭಾರತಕ್ಕೆ ಸತತ ಎರಡನೇ ಗೆಲುವು**

ಮಹಿಳೆಯರ ಕಬಡ್ಡಿಯಲ್ಲಿ ಭಾರತ ತನ್ನ ಗೆಲುವಿನ ಓಟ ಮುಂದುವರಿಸಿದೆ. ಗ್ರೂಪ್ 'ಎ' ಪಂದ್ಯದಲ್ಲಿ ಇರಾನ್ ವಿರುದ್ಧ ಭಾರತ 37–23 ಅಂಕಗಳ ಗೆಲುವು ದಾಖಲಿಸಿತು. ಆರಂಭದಲ್ಲಿ ಹಿನ್ನಡೆ ಅನುಭವಿಸಿದರೂ ಭಾರತ ಭರ್ಜರಿಯಾಗಿ ಚೇತರಿಸಿಕೊಂಡು ಗೆಲುವು ಸಾಧಿಸಿತು. ಬಾಂಗ್ಲಾದೇಶ ವಿರುದ್ಧದ ಆರಂಭಿಕ ಗೆಲುವಿನ ಬಳಿಕ ಇದು ಭಾರತದ ಸತತ ಎರಡನೇ ಗೆಲುವಾಗಿದೆ.

**ರೋಯಿಂಗ್‌ನಲ್ಲೂ ಫೈನಲ್‌ಗೆ ಮುನ್ನಡೆ**

ರೋಯಿಂಗ್‌ನಲ್ಲಿ ಬಾಲರಾಜ್ ಪನ್ವಾರ್ ಪುರುಷರ ಸಿಂಗಲ್ ಸ್ಕಲ್ಸ್ ಫೈನಲ್‌ಗೆ ಅರ್ಹತೆ ಪಡೆದಿದ್ದಾರೆ.

ಅವರು ತಮ್ಮ ಹೀಟ್‌ನಲ್ಲಿ ಮೂರನೇ ಸ್ಥಾನ ಪಡೆದರು. ಸತ್ನಾಮ್ ಸಿಂಗ್ ಮತ್ತು ಸಲ್ಮಾನ್ ಖಾನ್ ಪುರುಷರ ಡಬಲ್ ಸ್ಕಲ್ಸ್ ಫೈನಲ್‌ಗೆ ಪ್ರವೇಶಿಸಿದ್ದು, ತಮ್ಮ ಹೀಟ್‌ನಲ್ಲಿ ಎರಡನೇ ಸ್ಥಾನ ಪಡೆದರು. ಕ್ಯಾನೋ ಸ್ಪ್ರಿಂಟ್‌ನ ಪುರುಷರ ಕಯಾಕ್–4 500 ಮೀಟರ್ ವಿಭಾಗದಲ್ಲಿ ಹರ್ಷವರ್ಧನ್ ಶಕ್ತಾವತ್, ವರಿಂದರ್ ಸಿಂಗ್, ಎಲ್. ನವೋಚಾ ಸಿಂಗ್ ಓಯಿನಮ್ ಮತ್ತು ಅರುಣ್ ಸಿಂಗ್ ತಂಡ ಹೀಟ್–1ರಲ್ಲಿ ಮೂರನೇ ಸ್ಥಾನ ಪಡೆದು ಫೈನಲ್‌ಗೆ ಅರ್ಹತೆ ಪಡೆದಿದೆ.

ಮಹಿಳೆಯರ ಕ್ಯಾನೋ ಸಿಂಗಲ್ 200 ಮೀಟರ್‌ನಲ್ಲಿ ಮೇಘಾ ಪ್ರದೀಪ್ ಸೆಮಿಫೈನಲ್‌ಗೆ ಅರ್ಹತೆ ಪಡೆದರೆ, ಪಾರ್ವತಿ ಗೀತಾ ಮತ್ತು ಥೈರೆಂಬಂ ಸೋನಿಯಾ ದೇವಿ ಮಹಿಳೆಯರ ಕಯಾಕ್ ಡಬಲ್ 500 ಮೀಟರ್ ಸೆಮಿಫೈನಲ್‌ಗೆ ಪ್ರವೇಶಿಸಿದ್ದಾರೆ.

ಮಹಿಳೆಯರ ರೋಯಿಂಗ್ ನಾಲ್ವರ ವಿಭಾಗದಲ್ಲಿ ಗುರ್ಬಾನಿ ಕೌರ್, ಅಲೀನಾ ಆಂಟೋ, ಟೆಂಡೆಂಥೋಯಿ ಹಾವೋಜಿಬಾಮ್ ಮತ್ತು ಪೂನಂ ಒಟ್ಟಾರೆ ಆರನೇ ಸ್ಥಾನ ಪಡೆದು ಫೈನಲ್ 'ಎ'ಗೆ ಅರ್ಹತೆ ಪಡೆದರು. ಪುರುಷರ ಪೇರ್ ವಿಭಾಗದಲ್ಲಿ ಜಸ್ವಿಂದರ್ ಸಿಂಗ್ ಮತ್ತು ನಿತಿನ್ ಕುಮಾರ್ ನಾಲ್ಕನೇ ಸ್ಥಾನ ಪಡೆದು ಫೈನಲ್ 'ಬಿ'ಯಲ್ಲಿ ಸ್ಪರ್ಧಿಸಲಿದ್ದಾರೆ.